ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 164 RNI Number : KNKAN/25/A2770 22-06-2026 Monday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :164 ರಾಯಚೂರು 22-06-2026 ಸೋಮವಾರ ಪುಟ 04 ಬೆಲೆ ರೂ.2/- ಮೊ:8660146563

ಒಗ್ಗಟ್ಟಾಗಿ ಕೆಲಸ ಮಾಡಿ, ನಿಜವಾದ ಕಾರ್ಯಕರ್ತರನ್ನು ಗುರುತಿಸಿ ಹುದ್ದೆ ಕೊಡಿ : ಖರ್ಗೆ

ಬೆಂಗಳೂರು,ಜೂ.21–

ಇನ್ನು ಮುಂದೆ ಕಾರ್ಯಕರ್ತರಿಗೆ ಅಧಿಕಾರ ಕೊಡಿ.ನಿಜವಾದ ಕಾರ್ಯಕರ್ತರನ್ನು ಗುರುತಿಸಿ ಪೋಸ್ಟ್ ಹುದ್ದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕಿವಿಮಾತು ಹೇಳಿದರು.

ಕೆಪಿಸಿಸಿ ಅಧ್ಯಕ್ಷರಾಗಿ ಬಿ. ಕೆ. ಹರಿಪ್ರಸಾದ್ ಪದಗ್ರಹಣ ಮಾಡಿದ ಸಮಾವೇಶದಲ್ಲಿ ಮಾತನಾಡಿದ ಅವರು, ಇಷ್ಟು ದಿನ ಏನಾಯ್ತು ಆಯ್ತು, ಯಾರಿಗೆ ಏನು ಬೇಕೋ ಅದನ್ನು ಮಾಡಿಕೊಂಡರು. ಇನ್ನು ಮುಂದೆ ಕಾರ್ಯಕರ್ತರಿಗೆ ಅಧಿಕಾರ ಕೊಡಿ. ನಿಜವಾದ ಕಾರ್ಯಕರ್ತರನ್ನು ಗುರುತಿಸಿ ಪೋಸ್ಟ್ ಕೊಡಿ. ಕಷ್ಟಪಟ್ಟು ಎಲ್ಲರನ್ನೂ ಸಮಾಧಾನ ಮಾಡಿ, ಎಲ್ಲರ ಮನೆಗೂ ಹೋಗಿ ಒಂದುಗೂಡಿಸಿ ಕೆಲಸ ಮಾಡಿ ಎಂದು ಡಿ. ಕೆ. ಶಿವಕುಮಾರ್ ಹಾಗೂ ಸಿದ್ದರಾಮಯ್ಯ ವಿರುದ್ಧ ಪರೋಕ್ಷವಾಗಿ ಬೇಸರ ವ್ಯಕ್ತಪಡಿಸಿದರು.

ಸಿಎಂ ಡಿಕೆಶಿ, ಬಿ. ಕೆ. ಹರಿಪ್ರಸಾದ್‌ಗೆ ಕಿವಿಮಾತು : ಡಿ. ಕೆ. ಶಿವಕುಮಾರ್, ಬಿ. ಕೆ. ಹರಿಪ್ರಸಾದ್ ಅವರಿಗೆ ಖರ್ಗೆ ಕಿವಿಮಾತು ಹೇಳುತ್ತಾ, ಇಬ್ಬರು ಒಂದಾಗಿ ನಡೆಯಿರಿ. ನಿಮ್ಮಲ್ಲಿ ಎಷ್ಟೇ ಡಿಫರೆನ್ಸ್ ಬಂದರೂ ಒಳಗೆ ಕೂತು ಚರ್ಚೆ ಮಾಡಿ. ಇಡೀ ಪಾರ್ಟಿ ಮೇಲೆ ಪರಿಣಾಮ ಬೀರುತ್ತದೆ. ಎಐಸಿಸಿಗೆ ಕೆಟ್ಟ ಹೆಸರು ತರಬೇಡಿ. ಅಧಿಕಾರ ಹಸ್ತಾಂತರ ಸುಸೂತ್ರವಾಗಿ ನಡೆದಿದೆ. ಅದಕ್ಕಾಗಿ ಸುರ್ಜೇವಾಲಾಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ತಿಳಿಸಿದರು.

ಸಾವಿರಾರು ವರ್ಷಗಳಿಂದ ಆಡಳಿತ ಮಾಡುವವರೇ ಮುಂದುವರಿಯಬೇಕು ಎಂಬುದು ಬಿಜೆಪಿಯವರ ಉದ್ದೇಶ. ಇದಕ್ಕಾಗಿಯೇ ಆರ್‌ಎಸ್‌ಎಸ್, ಎಬಿವಿಪಿ ಅವರಿಗೇ ಸಪೋರ್ಟ್ ಮಾಡೋದು. ಮೋದಿ ಕರ್ನಾಟಕಕ್ಕೆ ಏನು ಕೊಟ್ಟಿದ್ದಾರೆ?. ಮೋದಿ ಕೊಟ್ಟಿದ್ದು ನಿರುದ್ಯೋಗ, ಬೆಲೆ ಏರಿಕೆ. ಮೋದಿಗೆ ದೊಡ್ಡ ಸಂಕಟವೊಂದು ಬರುತ್ತದೆ ಕಾದು ನೋಡಿ. ಸಿಎಂ ಈಗ ಯುವಕರು. ಯುವಕರು ಅನ್ನೋ ಹಾಗೇನಿಲ್ಲ, ಅವನೂ ಮುದ್ಕಾ ಆಗಿದ್ದಾನೆ. ಅವನಿಗೂ ಮೊಮ್ಮಗಳು ಬಂದಿದ್ದಾಳೆ. ಯುವಕರಂತೆ ಓಡಾಡ್ತಾರೆ. ಬಿ. ಕೆ ಹರಿಪ್ರಸಾದ್, ಡಿ. ಕೆ. ಶಿವಕುಮಾರ್ ಇಬ್ಬರೂ ಒಟ್ಟಿಗೆ ಕೆಲಸ ಮಾಡುತ್ತಾರೆ. ಅವರಿಗೆ ಮಾರ್ಗದರ್ಶನ ಮಾಡುವುದಕ್ಕೆ ಎಲ್ಲ ನಾಯಕರಿದ್ದಾರೆ ಎಂದು ಕಿವಿಮಾತು ಹೇಳಿದರು.

ಆರ್‌ಎಸ್‌ಎಸ್ ಹುಡುಗರು ತುಂಬ್ತಾ ಇದ್ದಾರೆ. ಆರ್‌ಎಸ್‌ಎಸ್ ಹಿನ್ನೆಲೆ ಇರುವವರಿಗೆ ಶಿಕ್ಷಕರನ್ನಾಗಿ ಮಾಡ್ತಿದ್ದಾರೆ. ಹಿನ್ನೆಲೆ ಇರುವವರಿಗೆ ವೈಸ್ ಚಾನ್ಸಲರ್ ಮಾಡ್ತಿದ್ದಾರೆ. ರಾಜಕೀಯ ಹಿಡಿತ ತಮ್ಮ ಕೈಲಿ ಇರಬೇಕು ಎಂದು ಹೀಗೆ ಮಾಡ್ತಿದ್ದಾರೆ. ಮೋದಿ ದೇಶ ಹಾಳು ಮಾಡ್ತಿದ್ದಾರೆ. ಟ್ರಂಪ್ ಇಡೀ ಪ್ರಪಂಚ ಹಾಳು ಮಾಡ್ತಿದ್ದಾನೆ. ಮತ್ತೆ ವಿ ಆರ್ ಗುಡ್ ಫ್ರೆಂಡ್ಸ್ ಅಂತಾರೆ. ಟ್ರಂಪ್ ಹೀಗೆ ಮಾಡದೇ ಇದ್ದರೆ ಡೀಸೆಲ್–ಪೆಟ್ರೋಲ್ ಬೆಲೆ ಏರುತ್ತಿರಲಿಲ್ಲ. ಮೋದಿ ಟ್ರಂಪ್ ಫ್ರೆಂಡ್ ಫ್ರೆಂಡ್ ಅಂದುಕೊಂಡು ನಮ್ಮ ವಿದೇಶಿ ನೀತಿಯನ್ನೇ ತೆಗೆದುಬಿಟ್ಟರು. ಇವನು ನನ್ನ ಫ್ರೆಂಡು, ಅವನು ನನ್ನ ಫ್ರೆಂಡು ಅಂತ ಎಲ್ಲರ ಕೊರಳಿಗೆ ಬಿದ್ದೂ ಬಿದ್ದೂ ನಮಗೆ ಹಾಳು ಮಾಡಿದ್ದಾರೆ ಎಂದು ಖರ್ಗೆ ಆರೋಪಿಸಿದರು.

ರಾಮ ಮಂದಿರದಲ್ಲಿ ಪೂಜಾರಿಯೇ ದುಡ್ಡು ಹೊಡೆಯುತ್ತಿದ್ದಾರೆ : ರಾಮನ ಹೆಸರಲ್ಲಿ ಕೋಟ್ಯಂತರ ರೂಪಾಯಿ ಲೂಟಿ ಮಾಡೋರು ಬಿಜೆಪಿಯವರು. ಹಿಂದೆ ರಾಮ ಮಂದಿರ ನಿರ್ಮಾಣಕ್ಕೆ ರಥ ಯಾತ್ರೆ ಮಾಡಿದವರು ಅಡ್ವಾಣಿ. ಆಗ ಜನರೆಲ್ಲ ಇಟ್ಟಿಗೆ, ದುಡ್ಡು, ಬಂಗಾರ ಕೊಟ್ಟರು. ಅದಕ್ಕೆಲ್ಲ ಲೆಕ್ಕವೇ ಇಲ್ಲ. ಪುಣ್ಯಾತ್ಮ ಮಾರಾಯ ಕತ್ತರಿ ಹಚ್ಚಿ, ಹುಂಡಿ ದುಡ್ಡು ಇವರ ಶಿಷ್ಯರು ಲೂಟಿ ಮಾಡ್ತಿದ್ದಾರೋ, ಮತ್ಯಾರು ಹೊಡೆಯುತ್ತಿದ್ದಾರೋ ತನಿಖೆ ಆಗಬೇಕು. ಎಸ್‌ಐಟಿ ತನಿಖೆ ಆಗಬೇಕು. ರಾಮನ ಹೆಸರಲ್ಲಿ ಲೂಟಿ ಮಾಡ್ತಿದ್ದಾರೆ. ಧರ್ಮದ ಹೆಸರಲ್ಲಿ ಈ ದೇಶದಲ್ಲಿ ಲೂಟಿ ಆಗ್ತಿದೆ. ರಾಮ ಮಂದಿರ ದುಡ್ಡಲ್ಲೂ ಲೂಟಿ ಮಾಡ್ತಾರೆ ಇವರು ಎಂದು ಖರ್ಗೆ ದೂರಿದರು.

ರಾಜ್ಯಗಳಿಗೆ ಪರೀಕ್ಷೆ ನಡೆಸುವ ಅಧಿಕಾರ ಕೊಡಿ : ನೀಟ್ ಎಕ್ಸಾಂ ಯಾಕೆ ಎರಡನೇ ಸಲ ಆಯ್ತು?. ಶಿಕ್ಷಣ ಸಚಿವ ರಾಜೀನಾಮೆ ಕೊಡಬೇಕು. ನೀಟ್ ತಂದಿದ್ಯಾಕೆ?. ಬಡವರ ಮಕ್ಕಳಿಗೆ ಅನುಕೂಲ ಆಗಲಿ ಅಂತ. ಎಲ್ಲರಿಗೆ ಅನುಕೂಲ ಆಗಲಿ ಅಂತ ನೀಟ್ ಬಂತು. ಇವರಿಗೆ ಎಕ್ಸಾಂ ನಡೆಸೋದಕ್ಕೆ ಆಗಲ್ಲ. ಕಷ್ಟಪಟ್ಟು ಓದಿದ ವಿದ್ಯಾರ್ಥಿಗಳಿಗೆ ಮೋಸ ಮಾಡಿದವರು ಯಾರು?. ಧರ್ಮೇಂದ್ರ ಪ್ರಧಾನ್. ಸಿಇಟಿ ಮಾದರಿಯಲ್ಲೇ ಎಲ್ಲ ರಾಜ್ಯಗಳಲ್ಲೂ ಆಗಲಿ. ಪಿಯುಸಿ ಮಾರ್ಕ್ಸ್ ಸೇರಿಸಿ ರ್ಯಾಂಕ್ ಕೊಡಿ. ನೀಟ್ ಪರೀಕ್ಷೆಗಾಗಿಯೇ ಈಗ ಬಡವರು ದುಡ್ಡು ಖರ್ಚು ಮಾಡಬೇಕು. ರಾಜ್ಯಗಳಿಗೇ ಪರೀಕ್ಷೆ ಅಧಿಕಾರ ಕೊಡಿ. ಪಿಯುಸಿ ಹಾಗೂ ಸಿಇಟಿ ಮಾದರಿ ರ್ಯಾಂಕ್ ನೀಡಿದರೆ ಯಾರಿಗೂ ಅನ್ಯಾಯ ಆಗಲ್ಲ ಎಂದು ಆಗ್ರಹಿಸಿದರು.

ಪ್ರತಿ ರಾಜ್ಯದಲ್ಲಿ ಪರೀಕ್ಷೆ ನಡೆಸುವ ಸ್ವಾತಂತ್ರ್ಯ ನೀಡಿ. ಅದರಲ್ಲೂ ಕೆಲ ರಾಜ್ಯಗಳಲ್ಲಿ ನ್ಯೂನತೆ ಇದೆ. ರಾಹುಲ್ ಗಾಂಧಿ ಅನ್ಯಾಯಕ್ಕೆ ಒಳಗಾದ ವಿದ್ಯಾರ್ಥಿಗಳ ಪರವಾಗಿ ಇದ್ದಾರೆ. ನಾವೆಲ್ಲ ಒಂದಾಗಿ ಹೋರಾಟ ಮಾಡಿದರೆ ಈ ಸರ್ಕಾರ ಇರೋದಿಲ್ಲ. ಬಡವರ ಮೇಲೆ ಟ್ಯಾಕ್ಸ್ ಹಾಕಿ ಲೂಟಿ ಮಾಡುತ್ತಿದ್ದಾರೆ. ಇದೆಲ್ಲದರ ವಿರುದ್ಧ ನಾವು ಹೋರಾಟ ಮಾಡಬೇಕು ಎಂದು ಕರೆ ನೀಡಿದರು.

ನಾವು ಒಗ್ಗಟ್ಟಾಗಿ ಕೆಲಸ ಮಾಡಬೇಕಾಗಿದೆ : ಇದೇ ವೇಳೆ ಮಾತನಾಡಿದ ಕಾಂಗ್ರೆಸ್ ಕರ್ನಾಟಕ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರು, ಬಿಜೆಪಿ ಅವರಿಗೆ ಅವಕಾಶ ನೀಡಿದರೆ, ಗ್ಯಾರಂಟಿ ಕಿತ್ತು ಹಾಕ್ತಾರೆ. ನಾವು ಗ್ಯಾರಂಟಿ ರಕ್ಷಣೆ ಮಾಡುತ್ತೇವೆ. ವಿರೋಧ ಪಕ್ಷದವರು ಕಾಂಗ್ರೆಸ್ ಮೇಲೆ ಅಷ್ಟೇ ಅಲ್ಲ, 1.22 ಮಹಿಳೆಯರ ಮೇಲೆ ಹಲ್ಲೆ ಮಾಡ್ತಿದ್ದಾರೆ. ಗ್ಯಾರಂಟಿ ಫಲಾನು

3ನೇ ಪುಟಕ್ಕೆ



ಏಮ್ಸ್ ಹೋರಾಟ 1501ನೇ ದಿನಕ್ಕೆ

ರಾಯಚೂರು ಜಿಲ್ಲಾ ಏಮ್ಸ್ ಹೋರಾಟ ಸಮಿತಿ ನಡೆಸುತ್ತಿರುವ ಅನಿರ್ದಿಷ್ಟ ಧರಣಿ ಸತ್ಯಾಗ್ರಹ ಇಂದಿಗೆ 1501ನೇ ದಿನಕ್ಕೆ ಕಾಲಿಟ್ಟಿದೆ.

ಕರ್ನಾಟಕ ರಾಜ್ಯ ಸರ್ಕಾರದ ಮಹತ್ವದ ಶಿಫಾರಸ್ಸುಗಳನ್ನು ಗೌರವಿಸಿ, ಸುದೀರ್ಘವಾಗಿ ನಡೆಯುತ್ತಿರುವ ಹೋರಾಟಕ್ಕೆ ಸ್ಪಂಧಿಸಿ ಶೀಘ್ರದಲ್ಲಿಯೇ ರಾಯಚೂರಿಗೆ ಏಮ್ಸ್ ಸಂಸ್ಥೆಯನ್ನು ಮಂಜೂರು ಮಾಡಲೇಬೇಕೆಂದು, ಕೇಂದ್ರ ಸರ್ಕಾರವನ್ನು ಒತ್ತಾಯಿಸಿ ಇಂದು ನಡೆದ ಧರಣಿ ಸತ್ಯಾಗ್ರಹದಲ್ಲಿ ಡಾ. ಬಸವರಾಜ್ ಕಳಸ ,ಎಸ್. ಮಾರಪ್ಪ ವಕೀಲರು, ವೆಂಕಟರೆಡ್ಡಿ ದಿನ್ನಿ, ಹೇಮರಾಜ್ ಅಕ್ಕಿಹಾಳ್, ವೀರಭದ್ರಯ್ಯ ಸ್ವಾಮಿ ,ಎಸ್. ಹನುಮಂತಪ್ಪ, ವೆಂಕಯ್ಯ ಶೆಟ್ಟಿ ಹೊಸಪೇಟೆ, ಮಹೇಂದ್ರ ಸಿಂಗ್, ಬಾಬು ಕವಿತಾಳ್, ಗುರುರಾಜ್ ಕುಲಕರ್ಣಿ, ವಿನಯ್ ಕುಮಾರ್ ಚಿತ್ರಗಾರ, ಕಾಮರಾಜ್ ಪಾಟೀಲ್, ಸಂತೋಷ್ ಕುಮಾರ್ ಜೈನ್ ಮುಂತಾದವರು ಭಾಗವಹಿಸಿದ್ದರು.

ಎ.ವಸಂತ್ ಕುಮಾರ್‌ಗೆ ಸಚಿವ ಸ್ಥಾನ ನೀಡಲು ಮಹಾಸಭಾ ಆಗ್ರಹ

ರಾಯಚೂರು, ಜೂ.21–

ರಾಜ್ಯ ಸಚಿವ ಸಂಪುಟ ವಿಸ್ತರಣೆಯಲ್ಲಿ ರಾಯಚೂರು ಜಿಲ್ಲೆಯ ಹಿರಿಯ ರಾಜಕಾರಣಿ, ವಿಧಾನಪರಿಷತ್ ಸದಸ್ಯ ಹಾಗೂ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಕಾರ್ಯಾಧ್ಯಕ್ಷ ಎ. ವಸಂತ್ ಕುಮಾರ್ ಅವರಿಗೆ ಸಚಿವ ಸ್ಥಾನ ನೀಡಬೇಕು ಹಾಗೂ ಹಿರಿಯ ದಲಿತ ನಾಯಕ ಕೆ.ಎಚ್. ಮುನಿಯಪ್ಪ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಿ ಸಮುದಾಯಕ್ಕೆ ರಾಜಕೀಯ ನ್ಯಾಯ ಒದಗಿಸಬೇಕು ಎಂದು ಕರ್ನಾಟಕ ಮಾದಿಗ ಮಹಾಸಭಾ ಒತ್ತಾಯಿಸಿದೆ.

ನಗರದ ಪತ್ರಿಕಾ ಭವನದಲ್ಲಿ ಇಂದು ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕರ್ನಾಟಕ ಮಾದಿಗ ಮಹಾಸಭಾದ ಅಧ್ಯಕ್ಷ ಪಿ. ಯಲ್ಲಪ್ಪ, ಕಲ್ಯಾಣ ಕರ್ನಾಟಕ ಭಾಗದಲ್ಲಿ



ಕಾಂಗ್ರೆಸ್ ಪಕ್ಷದ ಸಂಘಟನೆ ಹಾಗೂ ವಿಸ್ತರಣೆಯಲ್ಲಿ ಎ. ವಸಂತ್ ಕುಮಾರ್ ಅವರ ಕೊಡುಗೆ ಮಹತ್ವದ್ದಾಗಿದೆ ಎಂದು ಹೇಳಿದರು.

ಎ. ವಸಂತ್ ಕುಮಾರ್ ಅವರು ಹಲವು ದಶಕಗಳಿಂದ ಪಕ್ಷ ಸಂಘಟನೆಗೆ ಶ್ರಮಿಸಿದ್ದು, ಸುಮಾರು 11 ವರ್ಷಗಳ ಕಾಲ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದಾರೆ. ಬಳಿಕ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಯಾಗಿ (2018–2024) ಹಾಗೂ ಪ್ರಸ್ತುತ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಕಾರ್ಯಾಧ್ಯಕ್ಷರಾಗಿ ರಾಜ್ಯ ಮಟ್ಟದಲ್ಲಿ ಜವಾಬ್ದಾರಿ ನಿರ್ವಹಿಸುತ್ತಿದ್ದಾರೆ. ಸ್ಥಳೀಯ ಸಂಸ್ಥೆಗಳಿಂದ ಹಿಡಿದು ರಾಜ್ಯ ರಾಜಕೀಯದವರೆಗೆ ಪಕ್ಷ ಬಲವರ್ಧನೆಗೆ ಮಹತ್ವದ ಪಾತ್ರವಹಿಸಿ ದ್ದಾರೆ ಎಂದು ತಿಳಿಸಿದರು.

ಅವರು ಶಿಕ್ಷಣ, ಸಹಕಾರ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿಯೂ ಸಕ್ರಿಯರಾಗಿದ್ದು, ಟ್ಯಾಗೋರ್ ಮೆಮೋರಿಯಲ್ ಎಜುಕೇಷನ್ ಸೊಸೈಟಿ ರಾಯಚೂರಿನ ಉಪಾಧ್ಯಕ್ಷರಾಗಿ, ಬಾಬೂಜಿ ಕನ್ಸ್ಯೂಮರ್ಸ್ ಸಹಕಾರ ಸಂಘದ ಅಧ್ಯಕ್ಷರಾಗಿ ಹಾಗೂ ಬಾಲ್ದೊಡ್ಡಿ ವಿಎಸ್‌ಎಸ್‌ಎನ್ ಸೊಸೈಟಿಯ ಸದಸ್ಯರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ವಿವರಿಸಿದರು.

ಇದರ ಜೊತೆಗೆ ಈ ಹಿಂದೆ ಜವಾಹರ್ ನಗರ ಶಿಕ್ಷಣ ಸಂಸ್ಥೆಯ ಅಧ್ಯಕ್ಷ/ನಿರ್ದೇಶಕರಾಗಿ, ಗಾಜಗರ್‌ಪೇಟೆ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರಾಗಿ, ರಾಯಚೂರು ಸೆಂಟ್ರಲ್ ಕೋ–ಆಪರೇಟಿವ್ ಬ್ಯಾಂಕ್ ನಿರ್ದೇಶಕರಾಗಿ (20172022), ಜವಾಹರ್ ಗೃಹ ನಿರ್ಮಾಣ ಸಹಕಾರ ಸಂಘದ ಅಧ್ಯಕ್ಷರಾಗಿ, ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷರಾಗಿ (19942000), ರಾಯಚೂರು ಗ್ರಾಮೀಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿ (20002006), ತುಂಗಭದ್ರಾ ಕಾಡಾ ಅಧ್ಯಕ್ಷರಾಗಿ (20142016) ಹಾಗೂ ಮೂರು ಅವಧಿಗೆ ನಗರಸಭೆ ಸದಸ್ಯರಾಗಿ (19902010) ಸೇವೆ ಸಲ್ಲಿಸಿದ್ದಾರೆ ಎಂದು ಹೇಳಿದರು.

ವಿಧಾನಪರಿಷತ್ ಸದಸ್ಯರಾಗಿ ಅಭಿವೃದ್ಧಿ ಯೋಜನೆಗಳಿಗೆ ಹೆಚ್ಚಿನ

3ನೇ ಪುಟಕ್ಕೆ

ರಾಯಚೂರಿನಲ್ಲಿ 12ನೇ ಅಂತರಾಷ್ಟ್ರೀಯ ಯೋಗ ದಿನದ ಸಂಭ್ರಮ

ರಾಯಚೂರು, ಜೂ.21–

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ರಾಯಚೂರು ಮಹಾನಗರ ಪಾಲಿಕೆ, ಆಯುಷ್ ಇಲಾಖೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಂಯುಕ್ತಾಶ್ರಯದಲ್ಲಿ 12ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಭಾನುವಾರ ಅದ್ದೂರಿಯಾಗಿ ಆಚರಿಸಲಾಯಿತು.

ಕಾರ್ಯಕ್ರಮಕ್ಕೆ ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತ ಬಿ. ವೆಂಕಟ ಸಿಂಗ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ ಹಾಗೂ ರಾಯಚೂರು ವಿಭಾಗದ ಸಹಾಯಕ ಆಯುಕ್ತ ಡಾ. ಹಂಪಣ್ಣ ಸಜ್ಜನ್ ಚಾಲನೆ ನೀಡಿದರು.



ಈ ಸಂದರ್ಭದಲ್ಲಿ ಮಾತನಾಡಿದ ರಾಜ್ಯ ಮಾಹಿತಿ ಆಯುಕ್ತ ಬಿ. ವೆಂಕಟ ಸಿಂಗ್, ಯೋಗವು ದೇಹಕ್ಕೆ ಆರೋಗ್ಯ, ಮನಸ್ಸಿಗೆ ನೆಮ್ಮದಿ ಮತ್ತು ಬದುಕಿಗೆ ಚೈತನ್ಯ ನೀಡುವ ಅತ್ಯುತ್ತಮ ಜೀವನಶೈಲಿ ಎಂದರು. ಇಂದಿನ ಒತ್ತಡದ ಬದುಕಿನಲ್ಲಿ ಪ್ರತಿಯೊಬ್ಬರೂ ತಮ್ಮ ದಿನಚರಿಯಲ್ಲಿ ಕನಿಷ್ಠ ಕೆಲ ಸಮಯವನ್ನು ಯೋಗಕ್ಕಾಗಿ ಮೀಸಲಿಡಬೇಕು ಎಂದು ಕರೆ ನೀಡಿದರು.

ವಿದ್ಯಾರ್ಥಿಗಳು ಪ್ರತಿದಿನ ಯೋಗಾಭ್ಯಾಸ ಮಾಡುವುದರಿಂದ ಏಕಾಗ್ರತೆ ಹೆಚ್ಚುವುದರೊಂದಿಗೆ ಮಾನಸಿಕ ಒತ್ತಡ ಕಡಿಮೆಯಾಗುತ್ತದೆ. ನೌಕರರು ಹಾಗೂ ಸಾರ್ವಜನಿಕರೂ ಯೋಗವನ್ನು ಜೀವನದ ಭಾಗವನ್ನಾಗಿಸಿಕೊಳ್ಳಬೇಕು ಎಂದು ಹೇಳಿದರು.

ಇದಕ್ಕೂ ಮೊದಲು ಯೋಗ ಶಿಕ್ಷಕರು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ವಿವಿಧ ಯೋಗಾಸನಗಳ ಅಭ್ಯಾಸ ಮಾಡಿಸಿದರು. ವೃಕ್ಷಾಸನ, ತಾಡಾಸನ, ತ್ರಿಕೋನಾಸನ, ಭದ್ರಾಸನ, ವಜ್ರಾಸನ, ಉಷ್ಟ್ರಾಸನ, ಶಶಾಂಕಾಸನ, ಮಂಡೂಕಾಸನ, ವಕ್ರಾಸನ, ಭುಜಂಗಾಸನ, ಶಲಭಾಸನ, ಸೇತುಬಂಧಾಸನ, ಪವನಮುಕ್ತಾಸನ ಹಾಗೂ ಶವಾಸನ ಸೇರಿದಂತೆ ಹಲವು ಆಸನಗಳ ಪ್ರದರ್ಶನ ಮತ್ತು ಅಭ್ಯಾಸ ನಡೆಯಿತು.

ಯೋಗ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಬಾಲಕ–ಬಾಲಕಿಯರಿಗೆ ಪ್ರಮಾಣಪತ್ರ ಹಾಗೂ ಪದಕಗಳನ್ನು ನೀಡಿ ಸನ್ಮಾನಿಸಲಾಯಿತು. ನಂತರ ನವಚೇತನ ಶಾಲೆಯ ವಿದ್ಯಾರ್ಥಿಗಳು ಯೋಗ ನೃತ್ಯ ಪ್ರದರ್ಶಿಸಿ ಗಮನ ಸೆಳೆದರು. ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆಯ ಉಪ ಆಯುಕ್ತೆ ಸಂತೋಷ ರಾಣಿ, ಜಿಲ್ಲಾ ಆಯುಷ್ ಇಲಾಖೆಯ ಅಧಿಕಾರಿ ಡಾ. ಶಂಕರಗೌಡ ಪಾಟೀಲ, ಸರ್ಕಾರಿ ನೌಕರರ ಸಂಘದ ವಿಭಾಗೀಯ ಉಪಾಧ್ಯಕ್ಷ ಹಾಗೂ ಜಿಲ್ಲಾಧ್ಯಕ್ಷ ಕೃಷ್ಣ ಶಾವಂತಗೇರಿ. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ವೀರೇಶ ನಾಯಕ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ, ವಿವಿಧ ಇಲಾಖೆ ಅಧಿಕಾರಿಗಳು, ಯೋಗ ಸಂಸ್ಥೆಗಳ ಪ್ರತಿನಿಧಿಗಳು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

ಕುಲಸುಂಬಿ ಕಾಲೋನಿಯಲ್ಲಿ ರುಂಡವಿಲ್ಲದ ಯುವಕನ ಶವ ಪತ್ತೆ

ರಾಯಚೂರು,ಜೂ.21–

ನಗರದ ಕುಲಸುಂಬಿ ಕಾಲೋನಿಯಲ್ಲಿ ವ್ಯಕ್ತಿಯೊಬ್ಬನನ್ನು ಬರ್ಬರವಾಗಿ ಕೊಲೆ ಮಾಡಿ, ರುಂಡದೊಂದಿಗೆ ಆರೋಪಿಗಳು ಪರಾರಿಯಾಗಿರುವ ಘಟನೆ ಬೆಳಕಿಗೆ ಬಂದಿದೆ.

ತಿರುಪತಿ (24) ಕೊಲೆಯಾದ ವ್ಯಕ್ತಿ. ಮೃತನ ಮನೆಯಿಂದ ಕೆಟ್ಟ ವಾಸನೆ ಬರುತ್ತಿದ್ದ ಹಿನ್ನೆಲೆ ಅಕ್ಕಪಕ್ಕದ ನಿವಾಸಿಗಳು ಪೊಲೀಸರಿಗೆ ಮಾಹಿತಿ ನೀಡಿದ್ದು, ಸ್ಥಳಕ್ಕೆ ಆಗಮಿಸಿದ ಪೊಲೀಸರು ಬಾಗಿಲಿನ ಬೀಗ ಮುರಿದು ಪರಿಶೀಲಿಸಿದಾಗ ಕೊಳೆತ ಸ್ಥಿತಿಯಲ್ಲಿ ಮೃತದೇಹ ಪತ್ತೆಯಾಗಿದೆ. ಕೊಲೆ ಬಳಿಕ ಆರೋಪಿ ತಲೆ ತೆಗೆದುಕೊಂಡು ಪರಾರಿಯಾಗಿರುವ ಶಂಕೆ ವ್ಯಕ್ತವಾಗಿದೆ. ತಿರುಪತಿ ವಿರುದ್ಧ ಪಶ್ಚಿಮ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಹಲವು ಬೈಕ್ ಕಳ್ಳತನ ಪ್ರಕರಣಗಳು ದಾಖಲಾಗಿದ್ದವು ಎನ್ನಲಾಗಿದೆ.

ಕೆಲವು ವರ್ಷಗಳ ಹಿಂದೆ ಮೃತನ ಅಣ್ಣನೂ ಕೊಲೆಯಾಗಿದ್ದ ಮಾಹಿತಿ ಲಭ್ಯವಾಗಿದೆ. ಘಟನೆಗೂ ಮುನ್ನ ತಿರುಪತಿ ಸ್ನೇಹಿತರೊಂದಿಗೆ ಪಾರ್ಟಿ ಮಾಡಿದ್ದನೆಂದು ಎನ್ನಲಾಗುತ್ತಿದೆ. ಪಶ್ಚಿಮ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ. ಹಿರಿಯ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಆರೋಪಿಗಳ ಪತ್ತೆಗೆ ಪೊಲೀಸರು ಕ್ರಮ ಕೈಗೊಂಡಿದ್ದಾರೆ.

ಜಿಲ್ಲಾ ಕಾರಾಗೃಹದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ ಆಚರಣೆ

ಸಿಬ್ಬಂದಿ, ವಿಚಾರಣಾಧೀನ ಬಂಧಿಗಳಿಂದ ಉತ್ಸಾಹಭರಿತವಾಗಿ ಯೋಗ್ಯಾಭ್ಯಾಸ

ರಾಯಚೂರು, ಜೂ.21–

ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಜಿಲ್ಲಾ ಕಾರಾಗೃಹದಲ್ಲಿ ಆರ್ಟ್ ಆಫ್ ಲಿವಿಂಗ್ ಸಹಯೋಗದೊಂದಿಗೆ ಸಿಬ್ಬಂದಿ ಹಾಗೂ ವಿಚಾರಣಾಧೀನ ಬಂಧಿಗಳಿಗಾಗಿ ವಿಶೇಷ ಯೋಗ ಕಾರ್ಯಕ್ರಮ ಆಯೋಜಿಸಲಾಯಿತು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಕಾರಾಗೃಹದ ಮುಖ್ಯ ಅಧೀಕ್ಷಕಿ ಅನಿತಾ ಹಿರೇಮನಿ, ಯೋಗವು ಕೇವಲ ದೈಹಿಕ ವ್ಯಾಯಾಮವಲ್ಲ; ಆರೋಗ್ಯಕರ, ಶಾಂತಿಯುತ ಹಾಗೂ ಸಮತೋಲನಯುತ ಜೀವನ ನಡೆಸಲು ನೆರವಾಗುವ ಸಮಗ್ರ ಜೀವನ ಪದ್ಧತಿಯಾಗಿದೆ ಎಂದು ಹೇಳಿದರು. ಇಂದಿನ ಒತ್ತಡದ ಬದುಕಿನಲ್ಲಿ



ಯೋಗ ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡುವಲ್ಲಿ ಪ್ರಮುಖ ಪಾತ್ರವಹಿಸುತ್ತದೆ ಎಂದರು.


ಆರ್ಟ್ ಆಫ್ ಲಿವಿಂಗ್ ಸಂಸ್ಥೆಯ ಮುಖ್ಯಸ್ಥೆ ಸಂಗೀತಾ ಮಾತನಾಡಿ, ಯೋಗ, ಧ್ಯಾನ ಹಾಗೂ ಉಸಿರಾಟದ ಅಭ್ಯಾಸಗಳ ಮೂಲಕ ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಆರೋಗ್ಯ ವೃದ್ಧಿಯಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಆಯುಷ್ ಸಚಿವಾಲಯ ನಿಗದಿಪಡಿಸಿದ ಸಾಮಾನ್ಯ ಯೋಗ ಪ್ರೋಟೋಕಾಲ್ ಪ್ರಕಾರ ವಿವಿಧ ಯೋಗಾಸನಗಳು ಹಾಗೂ ಪ್ರಾಣಾಯಾಮಗಳನ್ನು ನಡೆಸಲಾಯಿತು. ದೇಹ ಸಡಿಲಗೊಳಿಸುವ ವ್ಯಾಯಾಮಗಳು, ಕುತ್ತಿಗೆ ಹಾಗೂ ಭುಜ ಚಲನೆಗಳು, ಸೊಂಟ ಮತ್ತು ಮೊಣಕಾಲು ವ್ಯಾಯಾಮಗಳು ಸೇರಿದಂತೆ ತಾಡಾಸನ, ವೃಕ್ಷಾಸನ, ಪಾದಹಸ್ತಾಸನ, ಅರ್ಧಚಕ್ರಾಸನ, ತ್ರಿಕೋಣಾಸನ, ಭದ್ರಾಸನ, ವಜ್ರಾಸನ ಮೊದಲಾದ ಆಸನಗಳನ್ನು ಅಭ್ಯಾಸ ಮಾಡಲಾಯಿತು.

ಇದಲ್ಲದೆ ಮಕರಾಸನ, ಭುಜಂಗಾಸನ, ಶಲಭಾಸನ, ಉತ್ತಾನಾಸನ, ಪಾದಾಸನ ಸೇರಿದಂತೆ ಹಲವು ಆಸನಗಳು ಹಾಗೂ ಅನುಲೋಮ ವಿಲೋಮ ಪ್ರಾಣಾಯಾಮ ಮತ್ತು ಧ್ಯಾನ ಅಭ್ಯಾಸವೂ ನಡೆಯಿತು. ಕಾರ್ಯಕ್ರಮದ ಕೊನೆಯಲ್ಲಿ ವಿಶ್ವ ಯೋಗ ದಿನಾಚರಣೆಯ ಪ್ರತಿಜ್ಞೆ

3ನೇ ಪುಟಕ್ಕೆ

ಏಮ್ಸ್ ಹೋರಾಟ-ಮೌನ ಪ್ರತಿಭಟಿಸಿ ಮನವಿ ಪತ್ರ ನೀಡಲಾಗುವುದು -ಉದಯ ಸಾಹುಕಾರ



ಸಿರವಾರ.ಜೂ.21–

ರಾಯಚೂರು ಜಿಲ್ಲೆಗೆ ಏಮ್ಸ್ ಕೊಡದಿದ್ದರೆ ಮುಂದಿನ ದಿನಗಳಲ್ಲಿ ಪ್ರತ್ಯೇಕ ರಾಜ್ಯದ ಕೂಗು ಕೂಗು ಅನಿವಾರ್ಯವಾಗಿದೆ, ಹೋರಾಟಕ್ಕೆ 1500 ದಿನ ಆಗಿರುವ ಕಾರಣ ಮೌನ ಕಾಲ್ನಡಿಗೆ ಮೂಲಕ ತಹಸೀಲ್ದಾರಗೆ ಮನವಿ ಪತ್ರ ನೀಡಲಾಗುವುದು ಎಂದು ಏಮ್ಸ್ ಹೋರಾಟ ಸಮಿತಿಯ ಪ್ರಗತಿಪರ ರೈತ ಚಿಂತಕರಾದ ಎನ್.ಉದಯ ಸಾಹುಕರ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಪತ್ರಿಕಾಗೋಷ್ಟಿಯನ್ನುದ್ದೇಶಿಸಿ ಮಾತನಾಡಿದ ಅವರು ಏಮ್ಸ್ ( ) ಒಂದು ಸರ್ವಶ್ರೇಷ್ಠ ವೈದ್ಯಕೀಯ ತಂತ್ರಜ್ಞಾನವುಳ್ಳ ಚಿಕಿತ್ಸೆಯ ವ್ಯವಸ್ಥೆಯನ್ನು ಒಳಗೊಂಡಿದೆ. ಈ ಸಂಸ್ಥೆಯು ಪ್ರಧಾನಮಂತ್ರಿ ಸ್ವಾಸ್ತ್ರ ಸುರಕ್ಷ () ಯೋಜನೆ ಅಡಿಯಲ್ಲಿ ಕಾರ್ಯನಿರ್ವಹಿಸುತ್ತದೆ. 200 ಎಕರೆ ವಿಶಾಲವಾದ ಭೂ ಪ್ರದೇಶದಲ್ಲಿ 19 ಸೂಪರ್

3ನೇ ಪುಟಕ್ಕೆ

ವೈದ್ಯ ವೃತ್ತಿ ಕೇವಲ ಉದ್ಯೋಗವಲ್ಲ, ಪವಿತ್ರ ಸಾಮಾಜಿಕ ಜವಾಬ್ದಾರಿ



ಕಲಬುರಗಿ,ಜೂ.21-

ವೈದ್ಯಕೀಯ ವೃತ್ತಿ ಎಂಬುದು ಕೇವಲ ಜೀವನೋಪಾಯದ ಉದ್ಯೋಗವಲ್ಲ, ಅದೊಂದು ಅತ್ಯಂತ ಪವಿತ್ರವಾದ ಸಾಮಾಜಿಕ ಜವಾಬ್ದಾರಿ. ಹೊಸದಾಗಿ ವೃತ್ತಿಗೆ ಕಾಲಿಡುತ್ತಿರುವ ನವ ವೈದ್ಯರು ಸಮಾಜದ ಜವಾಬ್ದಾರಿಯುತ ನಾಗರಿಕರಾಗಿ ಸೇವೆ ಸಲ್ಲಿಸಬೇಕು ಎಂದು ಬೆಂಗಳೂರು ಕಿದ್ವಾಯಿ ಸ್ಮಾರಕ ಗ್ರಂಥಿ ರೋಗಗಳ ಸಂಸ್ಥೆ ಮಾಜಿ ನಿರ್ದೇಶಕಿ, ಪದ್ಮಶ್ರೀ ಪುರಸ್ಕೃತ ಡಾ. ವಿಜಯಲಕ್ಷ್ಮಿ ದೇಶಮನೆ ಹೇಳಿದರು.

ನಗರದ ಸೇಡಂ ರಸ್ತೆಯ ಇಎಸ್‌ಐಸಿ ವೈದ್ಯಕೀಯ ಕಾಲೇಜಿನಲ್ಲಿ 8ನೇ ವರ್ಷದ ಪದವಿ ಪ್ರದಾನ ಸಮಾರಂಭದಲ್ಲಿ ಶನಿವಾರ ಎಂಬಿಬಿಎಸ್ ಪದವಿ ಪೂರೈಸಿದ ವಿದ್ಯಾರ್ಥಿಗಳನ್ನುದ್ದೇಶಿಸಿ ಅವರು ಮಾತನಾಡಿದರು.

ವೈದ್ಯರಿಗೆ ಆಸ್ಪತ್ರೆಯೇ ದೇಗುಲ ಮತ್ತು ರೋಗಿಯೇ ದೇವರು. ನಾವು ಕೇವಲ ಆ ದೇವರ ಸೇವೆ ಮಾಡುವ ಪೂಜಾರಿಗಳಷ್ಟೇ. ಹೀಗಾಗಿ ಆಸ್ಪತ್ರೆಗೆ ಬರುವ ರೋಗಿಗಳ ನೋವನ್ನು ನಿವಾರಿಸುವುದೇ ನಮ್ಮ ಮೊದಲ ಆದ್ಯತೆಯಾಗಬೇಕು. ವೈದ್ಯರು ಸಮಾಜದಲ್ಲಿ ಅಹಂಕಾರವನ್ನು ತೊರೆದು, ಕೋಪವನ್ನು ಸಂಪೂರ್ಣ ನಿಯಂತ್ರಣದಲ್ಲಿಟ್ಟುಕೊಂಡು, ಸದಾ ಸತ್ಯದ ಹಾದಿಯಲ್ಲಿ ನಡೆಯಬೇಕು. ಯಾವುದೇ ಫಲಾಪೇಕ್ಷೆಯಿಲ್ಲದೆ ಕರುಣೆಯಿಂದ ಜನರ ಸೇವೆ ಮಾಡಬೇಕು ಹಾಗೂ ಸದಾ ಜಾಗರೂಕರಾಗಿ ಸಾಮಾನ್ಯ ಜ್ಞಾನದಿಂದ ವೃತ್ತಿ ನಿರ್ವಹಿಸಬೇಕು ಎಂದರು.

ಗೌರವ ಅತಿಥಿಯಾಗಿ ಭಾಗವಹಿಸಿದ್ದ ಐಆರ್‌ಎಸ್ ಅಧಿಕಾರಿ ಡಾ.ಸಂತೋಷ್? ಮಂಕೋಸ್ಕರ್ ಮಾತನಾಡಿ, ವೈದ್ಯಕೀಯ ಶಿಕ್ಷಣದಲ್ಲಿ ಎಂಬಿಬಿಎಸ್ ಪದವಿ ಪಡೆಯುವುದು ಸುದೀರ್ಘ ಪರಿಶ್ರಮದ ಅಂತ್ಯವಲ್ಲ, ಬದಲಿಗೆ ಸಮಾಜದ ಸೇವೆಗೆ ಇಡುವ ಹೊಸ ಭರವಸೆಯ ಹೆಜ್ಜೆ. ನಾಳೆಯಿಂದ ರೋಗಿಗಳು ತಮ್ಮ ಆರೋಗ್ಯ, ಆಸೆ ಹಾಗೂ ಜೀವವನ್ನೇ ನಿಮ್ಮ ಕೈಯಲ್ಲಿ ನಂಬಿ ಒಪ್ಪಿಸುತ್ತಾರೆ. ಇಂತಹ ಗೌರವದ ವೃತ್ತಿಯಲ್ಲಿ ಸದಾ ದೊಡ್ಡ ಗುರಿಯನ್ನು ಹೊಂದಿರಿ. ತಮ್ಮ ವೈಯಕ್ತಿಕ ಜೀವನದ ಸವಾಲುಗಳನ್ನು ನೆನಪಿಸಿಕೊಂಡ ಅವರು, ಯಾವುದೇ ಹಿನ್ನಡೆಗೆ ಧೃತಿಗೆಡದೆ, ಕಳೆದುಹೋಗುವ ಅಮೂಲ್ಯ ಸಮಯವನ್ನು ಸದುಪಯೋಗಪಡಿಸಿಕೊಂಡು ಪರಿಶ್ರಮ ಮತ್ತು ಸ್ಥಿರತೆಯಿಂದ ಮುನ್ನಡೆಯಿರಿ ಎಂದು ತಿಳಿಸಿದರು.

ಇಎಸ್‌ಐಸಿ ವೈದ್ಯಕೀಯ ಕಾಲೇಜಿನ ಡೀನ್ ಡಾ.ಸಂತೋಷ ಕ್ಷೀರಸಾಗರ ಮಾತನಾಡಿ, ಐದು ವರ್ಷಗಳ ಹಿಂದೆ ಪೋಷಕರು ನಮ್ಮ ಸಂಸ್ಥೆಯ ಮೇಲಿಟ್ಟಿದ್ದ ನಂಬಿಕೆಯನ್ನು ನಾವು ಯಶಸ್ವಿಯಾಗಿ ಉಳಿಸಿಕೊಂಡಿದ್ದೇವೆ. ವಿದ್ಯಾರ್ಥಿಗಳನ್ನು ಅತ್ಯಂತ ಸಮರ್ಥ ಹಾಗೂ ಆತ್ಮವಿಶ್ವಾಸವುಳ್ಳ ವೈದ್ಯರನ್ನಾಗಿ ರೂಪಿಸಿ, ಇಂದು ಬಡ್ಡಿ ಸಮೇತ ಹೆತ್ತವರಿಗೆ ಮರಳಿ ನೀಡುತ್ತಿದ್ದೇವೆ ಎಂದು ಹೇಳಿದರು.

ಪದವಿ ಪಡೆದ ವೈದ್ಯರು ಜೀವನದಲ್ಲಿ ಎಷ್ಟೇ ಎತ್ತರಕ್ಕೆ ಬೆಳೆದರೂ ಹೆತ್ತವರನ್ನು ಮತ್ತು ಹುಟ್ಟೂರನ್ನು ಎಂದಿಗೂ ಮರೆಯಬಾರದು. ಸದಾ 'ದೇಶವೇ ಮೊದಲು' ಎಂಬ ದೇಶಪ್ರೇಮದ ಭಾವನೆಯನ್ನು ಹೊಂದಿರಬೇಕು ಮತ್ತು ತಮಗೆ ಶಿಕ್ಷಣ ನೀಡಿದ ಮಾತೃ ಸಂಸ್ಥೆಯನ್ನು ನೆನೆಯುತ್ತಾ, ರೋಗಿಗಳಿಗೆ ವಿನಮ್ರತೆಯಿಂದ ಸೇವೆ ಸಲ್ಲಿಸಬೇಕು ಎಂದರು.

17 ಸಾಧಕರಿಗೆ ಚಿನ್ನದ ಪದಕ :

ಇಲ್ಲಿನ ವೈದ್ಯಕೀಯ ಕಾಲೇಜಿನಲ್ಲಿ ನಡೆದ ಸಮಾರಂಭದಲ್ಲಿ 126 ಎಂಬಿಬಿಎಸ್ ವಿದ್ಯಾರ್ಥಿಗಳಿಗೆ ವೈದ್ಯಕೀಯ ಪದವಿ ಪ್ರದಾನ ಮಾಡಲಾಯಿತು. ಕಾಲೇಜಿಗೆ ರ್‍ಯಾಂಕ್ ತಂದ ಹಾಗೂ ವಿವಿಧ ವಿಷಯಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ 17 ವಿದ್ಯಾರ್ಥಿಗಳಿಗೆ ಚಿನ್ನದ ಪದಕ (ಗೋಲ್ಡ್ ಮೆಡಲ್) ನೀಡಿ ಗೌರವಿಸಲಾಯಿತು.

ಇಎಸ್‌ಐಸಿ ಪ್ರಾಧ್ಯಾಪಕಿ ಡಾ.ಜ್ಯೋತಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಡಾ. ಪ್ರಶಾಂತ ಪಾಟೀಲ, ಡಾ. ಅನೀಸ್ ಐಶಾ ವೇದಿಕೆಯಲ್ಲಿದ್ದರು. ಪದವಿ ಪಡೆಯಲಿರುವ ವಿದ್ಯಾರ್ಥಿಗಳ ಜೊತೆಗೆ ಅವರ ಪೋಷಕರನ್ನೂ ವೇದಿಕೆಯಲ್ಲಿ ಕರೆದಿದ್ದು ವಿಶೇಷವಾಗಿತ್ತು. ಕರ್ನಾಟಕ, ಕೇರಳ, ಪುದುಚೇರಿ, ತಮಿಳುನಾಡು, ಮಹಾರಾಷ್ಟ್ರ, ತೆಲಂಗಾಣ, ಆಂಧ್ರಪ್ರದೇಶ ಸೇರಿದಂತೆ ವಿವಿಧ ರಾಜ್ಯಗಳಿಂದ ಬಂದು ಅಧ್ಯಯನ ನಡೆಸಿದ್ದ ವಿದ್ಯಾರ್ಥಿಗಳ ಪೋಷಕರು ಸಮಾರಂಭದಲ್ಲಿ ಭಾಗವಹಿಸಿದ್ದರು.



ಅಂತರರಾಷ್ಟ್ರೀಯ ಯೋಗ ದಿನಾಚರಣೆ
ಜಾಗೃತಿ ಯೋಗ ನಡಿಗೆಗೆ ಎಡಿಸಿ ಅಶೋಕ ತೇಲಿ ಚಾಲನೆ

ಬಾಗಲಕೋಟೆ: ಡಿ.21-

ಅಂತರರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಯೋಗದ ಮಹತ್ವ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ನಿಟ್ಟನಲ್ಲಿ ಹಮ್ಮಿಕೊಂಡ ಜಾಗೃತಿ ಯೋಗ ನಡಿಗೆಗೆ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಚಾಲನೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಆಯುಷ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಜಾಗೃತಿ ನಡಿಗೆಗೆ ಚಾಲನೆ ನೀಡಿ ಮಾತನಾಡಿದ ಅಪರ ಜಿಲ್ಲಾಧಿಕಾರಿಗಳು ಯೋಗವು ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಕಾಪಾಡುವ ಪರಿಣಾಮಕಾರಿ ಸಾಧನವಾಗಿದ್ದು, ಪ್ರತಿಯೊಬ್ಬರೂ ದಿನನಿತ್ಯದ ಜೀವನದಲ್ಲಿ ಯೋಗವನ್ನು ಅಳವಡಿಸಿಕೊಳ್ಳಬೇಕು ಎಂದರು.

ಪ್ರತಿ ವರ್ಷ ಜೂನ್ 21 ರಂದು ಆಚರಿಸಲ್ಪಡುವ ಅಂತರರಾಷ್ಟ್ರೀಯ ಯೋಗ ದಿನಾಚರಣೆಯು ಯೋಗದ ಬಗ್ಗೆ ಜಾಗತಿಕ ಮಟ್ಟದಲ್ಲಿ ಅರಿವು ಮೂಡಿಸುವ ಉದ್ದೇಶ ಹೊಂದಿದೆ. ಈ ವರ್ಷದ ಆಚರಣೆಯಲ್ಲಿ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮಕ್ಕೆ ಮೆರಗು ತರಬೇಕೆಂದು ತಿಳಿಸಿದರು.

ನಂತರ ಜಾಗೃತಿ ನಡಿಗೆ ಜಿಲ್ಲಾಡಳಿತ ಭವನದ ಆವರಣದಿಂದ ಪ್ರಾರಂಭವಾಗಿ ನವನಗರ ಬಸ್ ನಿಲ್ದಾಣ, ಪೊಲೀಸ್ ಪ್ಯಾಲೇಸ್ ಮಾರ್ಗವಾಗಿ ಎಲ್‌ಐಸಿ ವೃತ್ತದ ಬಳಿ ಇರುವ ಜಿಲ್ಲಾ ಆಯುರ್ವೇದ ಆಸ್ಪತ್ರೆಗೆ ಮುಕ್ತಾಯಗೊಂಡಿತು. ಜಾಗೃತಿ ನಡಿಗೆಯಲ್ಲಿ ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರ ನ್ಯಾ. ಡಿ.ವಾಯ್.ಬಸಾಪೂರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಮಂಜುನಾಥ ಕೆ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಅಲ್ಲಮಪ್ರಭು, ಜಿಲ್ಲಾ ಆಯುಷ್ ಅಧಿಕಾರಿ ಎಸ್.ಜಿ.ಮಠ ಆಯುಷ ವೈದ್ಯಾಧಿಕಾರಿಗಳು, ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಮತ್ತು ಯೋಗಾಸಕ್ತರು, ವಿವಿಧ ಸಂಘಟನೆಯ ಪ್ರತಿನಿಧಿಗಳು ಪಾಲ್ಗೊಂಡಿದ್ದರು.



ಗೋಲ್ಡನ್ ಕೇವ್ ಬುದ್ಧ ವಿಹಾರಕ್ಕೆ ಒಂದು ಕೋಟಿ ರೂಪಾಯಿ ಅನುದಾನಕ್ಕೆ ಮನವಿ

ಸುರಪುರ,ಜೂ.21-

ಪಟ್ಟಣದಲ್ಲಿರುವ ಗೋಲ್ಡನ್ ಕೇವ್ ಬುದ್ಧ ವಿಹಾರಕ್ಕೆ ಒಂದು ಕೋಟಿ ರೂಪಾಯಿಗಳ ಅನುದಾನವನ್ನು ನೀಡುವಂತೆ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಡಿಜಿ ಸಾಗರ ಬಣ ದಿಂದ ಸರಕಾರಕ್ಕೆ ಮನವಿ ಸಲ್ಲಿಸಲಾಗಿದೆ.

ಬೆಂಗಳೂರಿನಲ್ಲಿ ಕರ್ನಾಟಕ ರಾಜ್ಯ ಕೊಳಗೇರಿ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರು ಹಾಗೂ ಶಾಸಕರಾಗಿರುವ ಪ್ರಸಾದ್ ಅಬ್ಬಯ್ಯ ಅವರಿಗೆ ಮನವಿ ಸಲ್ಲಿಸಿರುವ ಸಂಘಟನೆಯ ಮುಖಂಡರು ಮಾತನಾಡಿ, ಗೋಲ್ಡನ್ ಕೇವ್ ಬುದ್ಧ ವಿಹಾರದ ಸರ್ವೆ ನಂಬರ್ 24/7ರ 4 ಎಕರೆ ಜಾಗದಲ್ಲಿ ಈಗಾಗಲೇ ಬುದ್ಧ ವಿಹಾರ,ಧಮ್ಮ ಧ್ಯಾನ ಕೇಂದ್ರ, ಕಲ್ಯಾಣ ಮಂಟಪ ಅಭಿವೃದ್ಧಿ ಕಾರ್ಯಗಳು ಆಗಿವೆ ಆದರೆ ಇವುಗಳ ಕಾಮಗಾರಿ ಪೂರ್ಣಗೊಳ್ಳಲು ಇನ್ನೂ ಹೆಚ್ಚಿನ ಅನುದಾನದ ಅಗತ್ಯವಿದೆ. ಆದ್ದರಿಂದ ಧಮ್ಮ ಪ್ರಿಯರು,ಬೌದ್ಧ ಅನುಯಾಯಿಗಳು ಆಗಿರುವ ತಾವುಗಳು ಈ ವಿಹಾರದ ಅಭಿವೃದ್ಧಿಗಾಗಿ ಸರಕಾರದಿಂದ ಒಂದು ಕೋಟಿ ರೂಪಾಯಿಗಳ ಅನುದಾನವನ್ನು ಮಂಜೂರು ಮಾಡಿಸುವ ಮೂಲಕ ಅಭಿವೃದ್ಧಿ ಕಾರ್ಯಕ್ಕೆ ನೆರವಾಗುವಂತೆ ವಿನಂತಿಸಿದರು.

ಮನವಿ ಸ್ವೀಕರಿಸಿದ ಶಾಸಕ ಪ್ರಸಾದ್ ಅಬ್ಬಯ್ಯ ಅವರು ತಮ್ಮ ಮನವಿಯನ್ನು ಸರಕಾರದ ಗಮನಕ್ಕೆ ತರಲಾಗುವುದು ಹಾಗೂ ಅನುದಾನ ಮಂಜೂರು ಮಾಡಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸಂಘಟನೆಯ ತಾಲೂಕ ಸಂಚಾಲಕ ತಿಪ್ಪಣ್ಣ ಬಿ. ಶೆಳ್ಳಗಿ, ತಾಲೂಕ ಸಂಘಟನಾ ಸಂಚಾಲಕ ಶೇಖರ ಮಂಗಳೂರ, ಮುಖಂಡ ಮುತ್ತು ಕಟ್ಟಿಮನಿ, ಇತರರು ಉಪಸ್ಥಿತರಿದ್ದರು.

ಪ್ರಧಾನಮಂತ್ರಿ ವಿಕ್ಸಿತ್ ಭಾರತ್ ರೋಜಗಾರ್ ಯೋಜನೆ:
ಉದ್ಯೋಗಿ ಮತ್ತು ಉದ್ಯೋಗದಾತರಿಗೆ 2,400 ಕೋಟಿ ರೂ. ಪ್ರೋತ್ಸಾಹಧನ ವಿತರಣೆ

ಕಲಬುರಗಿ,ಜೂ.21-

ಕಳೆದ ಆಗಸ್ಟ್ 2025 ರಿಂದ ಹೊಸದಾಗಿ ಉದ್ಯೋಗಕ್ಕೆ ಸೇರಿದ ಉದ್ಯೋಗಿಗಳಿಗೆ ಮತ್ತು ಉದ್ಯೋಗ ನೀಡಿದ ಉದ್ಯೋಗದಾತರಿಗೆ ವಿಕಸಿತ ಭಾರತ ರೋಜಗಾರ್ ಯೋಜನೆಯಡಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಸುಮಾರು 2,400 ಕೋಟಿ ರೂ. ಪ್ರೋತ್ಸಾಹ ಧನ ವಿತರಣೆ ಮಾಡಿದರು.



ಶುಕ್ರವಾರ ನವದೆಹಲಿಯ ವಿಜ್ಞಾನ ಭವನದಲ್ಲಿ ಆಯೋಜಿಸಿದ ಕಾರ್ಯಕ್ರಮದಲ್ಲಿ ಡಿ.ಬಿ.ಟಿ ಮೂಲಕ ಪ್ರೋತ್ಸಾಹ ಧನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರಥಮ ಬಾರಿಗೆ ಕೆಲಸಕ್ಕೆ ಸೇರುವ ನಿರುದ್ಯೋಗಿಗಳಿಗೆ ಶಕ್ತಿ ನೀಡುವ ಈ ಯೋಜನೆ ಉದ್ಯೋಗಿ ಮತ್ತು ಉದ್ಯೋಗದಾತರು ಜೊತೆ ಜೊತೆಗೆ ವಿಕಾಸದ ಪರ್ವದಲ್ಲಿ ಹೆಜ್ಜೆ ಇಡುತ್ತಾ ವಿಕ್ಸಿತ್ ಭಾರತಕ್ಕೆ ಮುನ್ನುಡಿ ಬರೆಯಲಿದ್ದಾರೆ ಎಂದು ಬಣ್ಣಿಸಿದರು.

ಇ.ಪಿ.ಎಫ್.ಓ ನಡಿ ನೋಂದಾಯಿತ ಕಾರ್ಮಿಕರು ಮತ್ತು ಉದ್ಯೋಗದಾತರಿಗೆ ಇರುವ ಸೌಲಭ್ಯಗಳು ಮತ್ತು ಹೊಸ ಕಾರ್ಮಿಕ ಸುಧಾರಣೆಗಳ ಕುರಿತು ಕಾರ್ಮಿಕ ಸಮುದಾಯ ಮತ್ತು ಸಂಘಟನೆಗಳು, ಉದ್ಯೋಗದಾತರಿಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ನವ ದೆಹಲಿ ಕೇಂದ್ರಿತ ಈ ಕಾರ್ಯಕ್ರಮದ ನೇರ ಪ್ರಸಾರ ಕಲಬುರಗಿ ನಗರದ ಸೂಪರ್ ಮಾರ್ಕೆಟ್ ಪ್ರದೇಶದಲ್ಲಿನ ಕಲ್ಯಾಣ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ (ಕೆಕೆಸಿಸಿಐ) ಸಭಾಂಗಣದಲ್ಲಿ ಆಯೋಜಿಸಲಾಗಿತ್ತು.

ಸ್ಥಳೀಯವಾಗಿ ಕಾರ್ಯಕ್ರಮ ಉದ್ಘಾಟಿಸಿದ ವಿಧಾನ ಪರಿಷತ್ ಶಾಸಕ ಶಶೀಲ ಜಿ. ನಮೋಶಿ ಮಾತನಾಡಿ, ಪ್ರತಿಯೊಬ್ಬ ಉದ್ಯೋಗಿಗೆ ಆತನ ಮೊದಲ ಕೆಲಸ ಮತ್ತು ಮೊದಲ ವೇತನ ತುಂಬಾ ಸ್ಮರಣೀಯವಾಗಿರುತ್ತದೆ. ಈ ನಿಟ್ಟನಲ್ಲಿ ಎರಡು ವರ್ಷದ ಅವಧಿಯಲ್ಲಿ ಸುಮಾರು 3.50 ಕೋಟಿ ಉದ್ಯೋಗ ಸೃಜನೆಯ ಉದ್ದೇಶ ಹೊಂದಿರುವ ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ವಿಕ್ಸಿತ್ ಭಾರತ ರೋಜಗಾರ್ ಯೋಜನೆ ಶ್ರಮಿಕ ವರ್ಗಕ್ಕೆ ದೊಡ್ಡ ಕೊಡುಗೆಯಾಗಿದೆ ಎಂದು ಅಭಿಪ್ರಾಯಪಟ್ಟರು.

ಇ.ಪಿ.ಎಫ್.ಓ ನೋಂದಾಯಿಯ ಪ್ರತಿ ಕಾರ್ಮಿಕನಿಗೆ ಸಾಮಾಜಿಕ ಭದ್ರತೆ ಒದಗಿಸಲಿದೆ. ಶಿಕ್ಷಣ, ಕೌಶಲ್ಯ, ಉದ್ಯೋಗ, ಸಾಮಾ ಜಿಕ ಭದ್ರತೆ ಇದು ಪ್ರತಿ ಕಾರ್ಮಿಕನಿಗೆ ಸಿಗಬೇಕಾದ ಸ್ವಾಭಿಮಾನ ಮತ್ತು ಘನತೆಯ ಬದುಕಿನ ಗೌರವದ ಸಂಕೇತವಾಗಿದೆ ಎಂದರು.

ಇದಕ್ಕು ಮುನ್ನ ಸಾಮಾನ್ಯ ಭವಿಷ್ಯ ನಿಧಿ ಕಲಬುರಗಿ ಪ್ರಾಂತೀಯ ಆಯುಕ್ತ ಎಂ.ಸುಬ್ರಮಣ್ಯಮ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಪ್ರಧಾನಮಂತ್ರಿ ವಿಕ್ಸಿತ್ ರೋಜಗಾರ್ ಯೋಜನೆ ಕಳೆದ ಆಗಸ್ಟ್-2025 ರಿಂದ ಆರಂಭವಾಗಿದ್ದು, ಜುಲೈ 2026ಕ್ಕೆ ಮುಕ್ತಾಯವಾಗಲಿದೆ. ಈ ಅವಧಿಯಲ್ಲಿ ಕೆಲಸಕ್ಕೆ ಸೇರುವ ಉದ್ಯೋಗಿಗಳಿಗೆ ಮತ್ತು ಕೆಲಾಕ್ಕೆ ತೆಗೆದುಕೊಳ್ಳುವ ಉದ್ಯೋಗದಾತರಿಗೆ ವಿಶೇಷ ಪ್ರೋತ್ಸಾಹ ದೊರೆಯಲಿದೆ. ಇಂದು ಸುಮಾರು 15 ಲಕ್ಷ ಉದ್ಯೋಗಿಗಳಿಗೆ ಡಿ.ಬಿ.ಟಿ ಮೂಲಕ ಪ್ರಧಾನಮಂತ್ರಿಗಳು ಪ್ರೋತ್ಸಾಹ ಧನ ವಿತರಣೆ ಮಾಡಲಿದ್ದಾರೆ. ಇದರಲ್ಲಿ ಕರ್ನಾಟಕದ 18,606 ಜನ ಉದ್ಯೋಗಿಗಳು, 57 ಉದ್ಯೋಗದಾತರಿಗೆ 10 ಕೋಟಿ ರೂ. ಸಹಾಯಧನ ದೊರೆಯಲಿದೆ ಎಂದರು.

ನೇಮಕಾತಿ ಪತ್ರ ವಿತರಣೆ: ಇದೇ ಸಂದರ್ಭದಲ್ಲಿ ಹೊಸದಾಗಿ ಕೆಲಸಕ್ಕೆ ಆಯ್ಕೆಯಾದ ಯುವಕರಿಗೆ ಲಾಹೋಟಿ ಮೋಟರ್ಸ್, ಶ್ರೀ ಸಿದ್ದಸಿರಿ ಸಹಕಾರಿ ಬ್ಯಾಂಕ್, ಚಂದ್ರಶಿಲ್ಪ ಆಟೋಮೋಟಿವ್ಸ್ ಪ್ರೈ.ಲಿ., ಬಜಾಜ್ ಅರ್ಥ ಮೂವರ್ಸ್ ಪ್ರೈ.ಲಿ. ಸಂಸ್ಥೆಯ ಅಧಿಕಾರಿಗಳು ನೇಮಕಾತಿ ಪತ್ರ ವಿತರಿಸಿ ಶುಭ ಕೋರಿದರು.

ಇ.ಪಿ.ಎಫ್.ಓ ರಿಜಿನಲ್ ಕಮಿಟಿ ಸದಸ್ಯ ಶಂಕರ ಸುಲೆಗಾಂವ, ಕೆ.ಕೆ.ಸಿ.ಸಿ.ಐ ಅಧ್ಯಕ್ಷ ಶರಣಬಸಪ್ಪ ಪಪ್ಪಾ, ಧರ್ಮಜಿತ್ ಸಿಂಗ್, ಸಮಿರನ್ ದಾಸ್ ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಸ್ಥಳೀಯ ಉದ್ಯಮಿಗಳು ಭಾಗವಹಿಸಿದ್ದರು.

ಹಿಂದುಳಿದವರ, ಕಡುಬಡವರ ಸ್ವಾವಲಂಬನೆಗೆ ಸರ್ಕಾರ ಬದ್ಧ: ಸಂಡೂರು ಶಾಸಕಿ ಈ.ಅನ್ನಪೂರ್ಣ

ಬಳ್ಳಾರಿ,ಜೂ.21-



ಸಮಾಜದ ಹಿಂದುಳಿದ ಹಾಗೂ ಬಡವರ ಸ್ವಾವಲಂಬಿ ಬದುಕಿಗೆ ಅಗತ್ಯವಿರುವ ಸೌಕರ್ಯಗಳನ್ನು ಕಲ್ಪಿಸಿಕೊಡುವ ಪ್ರಾಮಾಣಿಕ ಪ್ರಯತ್ನವನ್ನು ನಮ್ಮ ಸರ್ಕಾರ ನಿರಂತರವಾಗಿ ಮಾಡುತ್ತಿದೆ ಎಂದು ಸಂಡೂರು ಶಾಸಕಿ ಈ. ಅನ್ನಪೂರ್ಣ ಅವರು ಹೇಳಿದರು.

ಭವಿಷ್ಯ ನಿಧಿ ಸಂಸ್ಥೆ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ, ತೋರಣಗಲ್ಲು ವಿದ್ಯಾನಗರದ ಜೆಎಸ್‌ಡಬ್ಲ್ಯೂ ಟೌನ್‌ಶಿಪ್‌ನಲ್ಲಿರುವ 'ಜೆಮ್ಯಾಕ್ಸ್' ಸಭಾಂಗಣದಲ್ಲಿ ಕೇಂದ್ರ ಸರ್ಕಾರ ಜಾರಿಗೆ ತಂದಿರುವ 'ಪ್ರಧಾನ್ ಮಂತ್ರಿ ವಿಕಸಿತ್ ಭಾರತ್ ರೋಜ್‌ಗಾರ್ ಯೋಜನೆ' ಅಡಿ ಶುಕ್ರವಾರ ಹಮ್ಮಿಕೊಂಡಿದ್ದ ಬೃಹತ್ ಸಾರ್ವಜನಿಕ ಸಂಪರ್ಕ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಂಡೂರು ತಾಲೂಕು ಸುತ್ತಮುತ್ತ ಬೆಟ್ಟಗುಡ್ಡಗಳಿಂದ ಆವೃತವಾಗಿದ್ದು, ಬೇಸಾಯದ ಭೂಮಿ ತೀರಾ ಕಡಿಮೆಯಿದೆ. ಹೀಗಾಗಿ ಇಲ್ಲಿನ ಬಹುತೇಕ ಜನರು ಜೆಎಸ್‌ಡಬ್ಲ್ಯೂ ಸಂಸ್ಥೆಯನ್ನೇ ಆಶ್ರಯಿಸಿ ಬದುಕುತ್ತಿದ್ದಾರೆ. ಅವರ ಉದ್ಯೋಗ ಮತ್ತು ಜೀವನ ಭದ್ರತೆಗೆ ಸಂಸ್ಥೆ ಸದಾ ಒತ್ತು ನೀಡಬೇಕು ಎಂದು ತಿಳಿಸಿದರು.

ಕೈಗಾರಿಕಾ ವಲಯದ ಸುತ್ತಮುತ್ತಲಿನ ರಾಸಾಯನಿಕ ಮಿಶ್ರಿತ ಗಾಳಿಯಿಂದಾಗಿ ಸಾರ್ವಜನಿಕರಲ್ಲಿ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುತ್ತಿದ್ದು, ಈ ಬಗ್ಗೆ ಜೆಎಸ್‌ಡಬ್ಲ್ಯೂ ಸಂಸ್ಥೆಯು ವಿಶೇಷ ಗಮನಹರಿಸಬೇಕು. ಇಲ್ಲಿನ ಸುತ್ತಮುತ್ತಲಿನ ಜನರೆಲ್ಲರೂ ಗಣಿ ಕಾರ್ಮಿಕರು ಹಾಗೂ ಬಡ ವರ್ಗದವರಾಗಿದ್ದಾರೆ. ಇವರ ಹಿತದೃಷ್ಟಿಯಿಂದ ತಾಲೂಕಿನಲ್ಲಿ ಸುಸಜ್ಜಿತ ಉಚಿತ ಆಸ್ಪತ್ರೆಯೊಂದನ್ನು ಸ್ಥಾಪಿಸಿಕೊಡಬೇಕು ಎಂದು ಪ್ರಸ್ತಾಪಿಸಿದರು.

ನಮ್ಮ ಸಂಡೂರು ತಾಲೂಕಿನ ಅಸ್ಮಿತೆ ಎಂದರೆ ಅದು ಜೆಎಸ್ ಡಬ್ಲ್ಯೂ ಸಂಸ್ಥೆ. ಹೊರಗಿನವರು ಯಾರೇ ಸಂಡೂರು ಎಲ್ಲಿದೆ ಎಂದು ಕೇಳಿದಾಗ, ಜೆಎಸ್‌ಡಬ್ಲ್ಯೂ ಸಂಸ್ಥೆ ಇರುವ ಕ್ಷೇತ್ರ ಎಂದು ಗುರುತಿಸಿದರೆ ತಕ್ಷಣವೇ ಜನ ಗುರುತಿಸುತ್ತಾರೆ. ಸಂಸ್ಥೆಯ ಸಿಎಸ್‌ಆರ್ ಯೋಜನೆಯಡಿ ತಾಲೂಕಿನ ಸರ್ವಾಂಗೀಣ ಅಭಿವೃದ್ಧಿಗೆ ಸಾಕಷ್ಟು ನೆರವು ಸಿಗುತ್ತಿದ್ದು, ಸಂಸ್ಥೆಯು ಸಮಾಜ ಸೇವೆಯಲ್ಲಿಯೂ ಕೈಜೋಡಿಸುತ್ತಿರುವುದು ಶ್ಲಾಘನೀಯ ಎಂದರು.

ವಿಕಸಿತ ಭಾರತ ಯಾತ್ರೆಯಲ್ಲಿ ಹಲವು ಕೈಗಾರಿಕಾ ಸಂಸ್ಥೆಗಳೊಂದಿಗೆ ನಾವೆಲ್ಲರೂ ಸದೃಢ ಹೆಜ್ಜೆ ಇಡುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ಕೈಗಾರಿಕಾ ಸಂಸ್ಥೆಗಳು ಇನ್ನು ದೊಡ್ಡ ಮಟ್ಟದಲ್ಲಿ ಬೆಳೆದು, ದೇಶಕ್ಕೆ ಹೆಚ್ಚಿನ ಕೊಡುಗೆ ನೀಡಲಿ ಹಾಗೂ ಯುವಜನತೆಗೆ ಹೆಚ್ಚಿನ ಉದ್ಯೋಗಾವಕಾಶಗಳನ್ನು ಸೃಷ್ಟಿಸಲಿ ಎಂದು ಆಶಿಸಿದರು.

ಬಳ್ಳಾರಿ ಪ್ರಾದೇಶಿಕ ಭವಿಷ್ಯ ನಿಧಿ ಕಚೇರಿಯ ಆಯುಕ್ತ ಕೆ.ವಿ. ಪ್ರವೀಣ್ ಅವರು ಮಾತನಾಡಿ, ಮೊದಲ ಬಾರಿಗೆ ಉದ್ಯೋಗಕ್ಕೆ ಸೇರಿ ಭವಿಷ್ಯ ನಿಧಿ ಖಾತೆ ಪಡೆಯುತ್ತಿರುವ ಹೊಸ ಉದ್ಯೋಗಿಗಳಿಗೆ ಇದು ಅನ್ವಯಿಸುತ್ತದೆ. ಬಳ್ಳಾರಿ ವಲಯದಲ್ಲಿ ಇದುವರೆಗೆ ಇಂತಹ 1,374 ಹೊಸ ಕಾರ್ಮಿಕರು ಈ ಯೋಜನೆಯಡಿ ನೇರ ಹಣಕಾಸು ನೆರವು ಪಡೆಯಲು ಅರ್ಹರಾಗಿದ್ದಾರೆ. ಈ ಭಾಗದಡಿ ಉದ್ಯೋಗಿಗಳಿಗೆ ನೇರ ಲಾಭ ಸಿಗದಿದ್ದರೂ, ಉದ್ಯೋಗದಾತ ಸಂಸ್ಥೆಗಳಿಗೆ ಆರ್ಥಿಕ ನೆರವು ಸಿಗುತ್ತದೆ. ಬಳ್ಳಾರಿ ವಲಯದಲ್ಲಿ ಇಂತಹ 248 ಉದ್ಯೋಗದಾತ ಸಂಸ್ಥೆಗಳು ಈ ಸೌಲಭ್ಯ ಪಡೆದುಕೊಂಡಿವೆ. ಕೇಂದ್ರ ಸರ್ಕಾರದ ಈ ವಿನೂತನ ಯೋಜನೆಯು ಬಳ್ಳಾರಿ ಭಾಗದ ಸಾವಿರಾರು ಉದ್ಯೋಗಿಗಳಿಗೆ ಮತ್ತು ಉದ್ಯೋಗದಾತ ಸಂಸ್ಥೆಗಳಿಗೆ ಆರ್ಥಿಕವಾಗಿ ದೊಡ್ಡ ಆಸರೆಯಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನವದೆಹಲಿಯ ವಿಜ್ಞಾನ ಭವನದಲ್ಲಿ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಹೊಸದಾಗಿ ಉದ್ಯೋಗಕ್ಕೆ ಸೇರಿದ ಅರ್ಹ ಉದ್ಯೋಗಿಗಳಿಗೆ ಪ್ರೋತ್ಸಾಹ ಸೌಲಭ್ಯ ವಿತರಣೆ ಮಾಡಿದ ಕಾರ್ಯಕ್ರಮದ ನೇರಪ್ರಸಾರವನ್ನು ವೀಕ್ಷಿಸಲಾಯಿತು.

ಬಳಿಕ ಮೊದಲ ಬಾರಿ ಉದ್ಯೋಗಕ್ಕೆ ಸೇರಿ ಇಪಿಎಫ್‌ಓ ಖಾತೆ ಹೊಂದಿದ ಉದ್ಯೋಗಿಗಳಿಗೆ ಪ್ರೋತ್ಸಾಹ ಧನ ವಿತರಣೆ ಪ್ರಮಾಣ ಪತ್ರಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ತಹಶೀಲ್ದಾರ ವಿಶ್ವಜಿತ್ ಮೆಹೆತಾ, ಇಪಿಎಫ್‌ಓ ಸಂಸ್ಥೆಯ ಹಿರಿಯ ಅಧಿಕಾರಿಗಳು, ಜೆಎಸ್‌ಡಬ್ಲ್ಯೂ ಸಂಸ್ಥೆಯ ಅಧಿಕಾರಿಗಳು, ಉದ್ಯೋಗದಾತ ಕಂಪನಿಯ ಅಧಿಕಾರಿಗಳು, ಉದ್ಯೋಗಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

ವಡಗೇರಾದಲ್ಲಿ ಖಾಯಂ ಜನತಾ ನ್ಯಾಯಾಲಯ ಕುರಿತು ಕಾನೂನು ಅರಿವು ನೆರವು ಕಾರ್ಯಕ್ರಮ

ಯಾದಗಿರಿ, ಜೂ.21-



ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಯಾದಗಿರಿ ವತಿಯಿಂದ ಶನಿವಾರ ವಡಗೇರಾ ತಾಲೂಕಿನ ಬಿಳ್ಹಾರ್ ಗ್ರಾಮ ಪಂಚಾಯಿತಿ ಸಭಾಂಗಣದಲ್ಲಿ ಖಾಯಂ ಜನತಾ ನ್ಯಾಯಾಲಯ (ಕಟ್ಟಿಇಚ್ಚಟ್ಟಿಠಿ ಔಟ್ಚು ಅಛಿಚ್ಚುಚಿಠಿ) ಕುರಿತು ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮವನ್ನು ಯಶಸ್ವಿಯಾಗಿ ಹಮ್ಮಿಕೊಳ್ಳಲಾಯಿತು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಪರವಾಗಿ ಮಾತನಾಡಿದ ಹಣಮಯ್ಯ ಗುತ್ತಿಗೆದಾರ ಅವರು ಯಾವುದೇ ಅರ್ಹ ವ್ಯಕ್ತಿ ಆರ್ಥಿಕ ಅಡಚಣೆಯಿಂದ ನ್ಯಾಯದಿಂದ ವಂಚಿತರಾಗಬಾರದು ಎಂಬುದು ಪ್ರಾಧಿಕಾರದ ಮುಖ್ಯ ಉದ್ದೇಶವಾಗಿದೆ.

ಪ್ರಾಧಿಕಾರದಿಂದ ಉಚಿತ ಕಾನೂನು ನೆರವು, ಮಧ್ಯಸ್ಥಿಕೆ, ಲೋಕ ಅದಾಲತ್ ಹಾಗೂ ಖಾಯಂ ಜನತಾ ನ್ಯಾಯಾಲಯಗಳ ಮೂಲಕ ಸಾರ್ವಜನಿಕರಿಗೆ ನ್ಯಾಯ ದೊರಕಿಸಲು ನಿರಂತರ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ವಿವರಿಸಿದರು.

ಬಿಳ್ಹಾರ್ ಗ್ರಾಮ ಪಂಚಾ ಯಿತಿ ಅಧ್ಯಕ್ಷರಾದ ನಾಗಪ್ಪ ಅವರು ಮಾತನಾಡಿ, ಗ್ರಾಮೀಣ ಪ್ರದೇಶದ ಜನರು ಕಾನೂನು ಸೇವೆಗಳ ಸದುಪಯೋಗ ಪಡೆದುಕೊಂಡು ತಮ್ಮ ಸಮಸ್ಯೆಗಳನ್ನು ಕಾನೂನುಬದ್ಧವಾಗಿ ಪರಿಹರಿಸಿಕೊಳ್ಳಬೇಕು. ಕಾನೂನು ಅರಿವು ಪ್ರತಿಯೊಬ್ಬ ನಾಗರಿಕನ ಹಕ್ಕು ಹಾಗೂ ಕರ್ತವ್ಯವಾಗಿದೆ. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರವು ಉಚಿತ ಕಾನೂನು ನೆರವು ಸೇರಿದಂತೆ ವಿವಿಧ ಜನಪರ ಕಾರ್ಯ ಕ್ರಮಗಳನ್ನು ಅನುಷ್ಠಾನಗೊಳಿಸುತ್ತಿದೆ ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದ ಪರಶುರಾಮ ಜಿ. ರಾಮನಹಳ್ಳಿ ಅವರು ಖಾಯಂ ಜನತಾ ನ್ಯಾಯಾಲಯದ ಉದ್ದೇಶ, ಕಾರ್ಯವೈಖರಿ ಹಾಗೂ ಸಾರ್ವಜನಿಕರಿಗೆ ದೊರೆಯುವ ಅನುಕೂಲಗಳ ಕುರಿತು ಸವಿಸ್ತಾರ ವಾಗಿ ಮಾಹಿತಿ ನೀಡಿದರು. ಸಾರ್ವಜನಿಕ ಉಪಯುಕ್ತ ಸೇವೆಗಳಿಗೆ ಸಂಬಂಧಿಸಿದ ವಿವಾದಗಳನ್ನು ನ್ಯಾಯಾಲಯದ ದೀರ್ಘ ಪ್ರಕ್ರಿಯೆ ಇಲ್ಲದೆ ಸೌಹಾರ್ದಯುತವಾಗಿ ಮತ್ತು ಶೀಘ್ರವಾಗಿ ಇತ್ಯರ್ಥಪಡಿಸಿಕೊಳ್ಳಲು ಖಾಯಂ ಜನತಾ ನ್ಯಾಯಾಲಯವು ಒಂದು ಪರಿಣಾಮಕಾರಿ ವೇದಿಕೆಯಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಬಾಪುಗೌಡ (ಗ್ರಂಥಪಾಲಕರು) ಅವರು ಕಾನೂನು ಜ್ಞಾನವು ಸಮಾಜದಲ್ಲಿ ನ್ಯಾಯ ಮತ್ತು ಸಮಾನತೆಯನ್ನು ಬಲಪಡಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂದು ಅಭಿಪ್ರಾಯಪಟ್ಟರು.

ಅತಿಥಿಗ'ಳಾಗಿ ಭಾಗವಹಿಸಿದ್ದ ದೇವಿಂದ್ರಮ್ಮ ಅವರು ಮಹಿಳೆಯರು, ಮಕ್ಕಳು, ಹಿರಿಯ ನಾಗರಿಕರು ಹಾಗೂ ದುರ್ಬಲ ವರ್ಗದ ಜನರು ಸರ್ಕಾರದ ವಿವಿಧ ಕಾನೂನು ಸೇವೆಗಳು ಮತ್ತು ಯೋಜನೆಗಳ ಬಗ್ಗೆ ಕಡ್ಡಾಯವಾಗಿ ಅರಿವು ಹೊಂದಿಕೊಳ್ಳುವ ಅಗತ್ಯವಿದೆ ಎಂದು ಒತ್ತಿ ಹೇಳಿದರು.

ಈ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರು, ಗ್ರಾಮಸ್ಥರು, ಮಹಿಳಾ ಸ್ವಸಹಾಯ ಸಂಘಗಳ ಸದಸ್ಯರು, ಯುವಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾನೂನು ಮಾಹಿತಿಯನ್ನು ಪಡೆದುಕೊಂಡರು. ಕಾರ್ಯಕ್ರಮದ ಅಂತ್ಯದಲ್ಲಿ ಸಾರ್ವಜನಿಕರ ಕಾನೂನು ಸಂಬಂಧಿತ ಪ್ರಶ್ನೆಗಳಿಗೆ ಸೂಕ್ತ ಉತ್ತರ ನೀಡಲಾಯಿತು ಹಾಗೂ ಉಚಿತ ಕಾನೂನು ನೆರವು ಪಡೆಯುವ ವಿಧಾನಗಳ ಕುರಿತು ಸಾರ್ವಜನಿಕರಿಗೆ ಮಾರ್ಗದರ್ಶನ ನೀಡಲಾಯಿತು.

ಒಂದನೇಯ ಪುಟದಿಂದ

ಒಗ್ಗಟ್ಟಾಗಿ ಕೆಲಸ ಮಾಡಿ, ನಿಜವಾದ ಕಾರ್ಯಕರ್ತರನ್ನು ಗುರುತಿಸಿ ಹುದ್ದೆ ಕೊಡಿ : ಖರ್ಗೆ

ಭವಿಗಳ ಮೇಲೆ ಬಿಜೆಪಿ ಹಲ್ಲೆ ಮಾಡುತ್ತಿದೆ. ನಾವು ಒಗ್ಗಟ್ಟಾಗಿ ಕೆಲಸ ಮಾಡಬೇಕಾಗಿದೆ ಎಂದು ಕರೆ ನೀಡಿದರು.

ಕೇಂದ್ರ ಸರ್ಕಾರ ರಾಜ್ಯದ ಜನರಿಗೆ ಅನ್ಯಾಯ ಮಾಡುತ್ತಿದೆ. ಬಿಜೆಪಿ ಸರ್ಕಾರ ಸಂವಿಧಾನದ ವಿರುದ್ಧ ಹೋರಾಟ ಮಾಡುತ್ತಿದೆ. ನಾವು ವೇದಿಕೆ ಮೇಲೆ ಸಂವಿಧಾನ ಹಂಚಿದ್ದೇವೆ. ಬಿಜೆಪಿ ಸರ್ಕಾರ ಅಲ್ಪಸಂಖ್ಯಾತ, ಒಬಿಸಿ ಮತದಾರರ ಹಕ್ಕು ಕಿತ್ತುಕೊಳ್ಳುತ್ತಿದೆ. ಎಸ್ಐರ್ಆ ಮಾಡಿ ಮತಗಳನ್ನು ಕಿತ್ತು ಹಾಕ್ತಿದೆ, ನಿಮ್ಮ ಹಕ್ಕು ಕಸಿದುಕೊಳ್ತಿದೆ. ಹರಿಪ್ರಸಾದ್, ಸಿಎಂ, ಡಿ. ಕೆ. ಶಿವಕುಮಾರ್ ಅವರಿಗೆ ಜವಾಬ್ದಾರಿ ಹೆಚ್ಚಾಗಿದೆ. ಸಂವಿಧಾನ ಮಾತ್ರವಲ್ಲ, ರಾಜ್ಯದ ಜನರ ಹಿತ ನೀವು ಕಾಪಾಡಬೇಕಾಗಿದೆ ಎಂದು ಕರೆ ನೀಡಿದರು.

ಎ.ವಸಂತ್ ಕುಮಾರ್‌ಗೆ ಸಚಿವ ಸ್ಥಾನ ನೀಡಲು ಮಹಾಸಭಾ ಆಗ್ರಹ

ಅನುದಾನ ತಂದು ಕ್ಷೇತ್ರಾಭಿವೃದ್ಧಿಗೆ ಮುನ್ನಡೆ ನೀಡಿದ್ದಾರೆ. ಸಾರ್ವಜನಿಕ ಬದುಕಿನಲ್ಲಿ ಶಿಕ್ಷಣ, ಸಾಮಾಜಿಕ ಹಾಗೂ ರಾಜಕೀಯ ಕ್ಷೇತ್ರಗಳಲ್ಲಿ ದೀರ್ಘಕಾಲ ಸೇವೆ ಸಲ್ಲಿಸಿರುವುದರಿಂದ ಸಚಿವ ಸ್ಥಾನಕ್ಕೆ ಅವರು ಅರ್ಹರಾಗಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಹಾಗೂ ಎ. ವಸಂತ್ ಕುಮಾರ್ ಅವರು ಮಾದಿಗ ಸಮುದಾಯದ ಎಡಗೈ ವರ್ಗಕ್ಕೆ ಸೇರಿದವರಾಗಿದ್ದು, ಸಾಮಾಜಿಕ ನ್ಯಾಯದಡಿ ಸಮುದಾಯಕ್ಕೆ ರಾಜಕೀಯ ಪ್ರಾತಿನಿಧ್ಯ ದೊರೆಯಬೇಕಿದೆ. ಸಮುದಾಯದ ಧ್ವನಿಯಾಗಿ ಅವರಿಗೆ ಸಚಿವ ಸಂಪುಟದಲ್ಲಿ ಅವಕಾಶ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಅದೇ ರೀತಿ ದೀರ್ಘ ರಾಜಕೀಯ ಅನುಭವ ಹೊಂದಿರುವ ಹಾಗೂ ಹಲವು ಅವಧಿಗಳ ಕಾಲ ಸಂಸದ, ಶಾಸಕ ಮತ್ತು ಸಚಿವರಾಗಿ ಸೇವೆ ಸಲ್ಲಿಸಿರುವ ಕೆ.ಎಚ್. ಮುನಿಯಪ್ಪ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡುವ ಮೂಲಕ ರಾಜ್ಯ ಸರ್ಕಾರ ದಲಿತ ಸಮುದಾಯದ ಆಶಯಗಳಿಗೆ ಸ್ಪಂದಿಸಬೇಕು ಎಂದು ಆಗ್ರಹಿಸಿದರು.

ಎ. ವಸಂತ್ ಕುಮಾರ್ ಅವರ ತಂದೆ ದಿವಂಗತ ಆರ್. ಆಂಜನೇಯ್ಯ ಅವರು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾಗಿ ಹಾಗೂ ನಗರಸಭೆ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿ ಜಿಲ್ಲೆಯ ಕಾಂಗ್ರೆಸ್ ಪಕ್ಷದ ಬೆಳವಣಿಗೆಗೆ ಮಹತ್ವದ ಕೊಡುಗೆ ನೀಡಿದ್ದರು. ಮುಂದುವರಿಸಿಕೊಂಡು ಬಂದಿರುವ ಎ. ವಸಂತ್ ಕುಮಾರ್ ಅವರಿಗೆ ಸಚಿವ ಸ್ಥಾನ ನೀಡುವುದು ಆಶಯವಾಗಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಜೆ. ಸತ್ಯನಾಥ, ಜೆ. ತಿಮ್ಮಪ್ಪ, ಜೆ. ಮಾರೆಪ್ಪ, ಜೆ. ಪರಶುರಾಮ (ವಕೀಲರು), ಶರಣಪ್ಪ (ಮಾಜಿ ನಗರಸಭೆ ಸದಸ್ಯ), ಎಂ.ಕೆ. ನಾಗರಾಜ್, ಕೆ.ಪಿ. ಅನಿಲ್, ಜನಾರ್ಧನ್ ಹಳ್ಳಿಬೆಂಚಿ, ಆರ್. ಚೆನ್ನಪ್ಪ, ಜಿ. ರಾಜು, ಚಂದ್ರು ಭಂಡಾರಿ, ಬಾಬು, ಕರುಣಾಕರ ಕಟ್ಟಿಮನಿ, ವೆಂಕಟೇಶ್ ಹಾಗೂ ಗೋವಿಂದ ಪಿ. ಉಪಸ್ಥಿತರಿದ್ದರು.

ಏಮ್ಸ್ ಹೋರಾಟ 1500 ದಿನ. ಮೌನ ಪ್ರತಿಭಟಿಸಿ ಮನವಿ ಪತ್ರ ನೀಡಲಾಗುವುದು -ಉದಯ ಸಾಹುಕಾರ

ಸ್ಪೆಷಾಲಿಟಿ ಆಸ್ಪತ್ರೆಗಳನ್ನು ಒಳಗೊಂಡಿದೆ, ಅಖಿಲ ಭಾರತ ಮಟ್ಟದಲ್ಲಿ ವಿದ್ಯಾರ್ಥಿಗಳಿಗೆ ಉನ್ನತ ವೈದ್ಯಕೀಯ ಶಿಕ್ಷಣ ಒದಗಿಸುವುದು; ಆರೋಗ್ಯಕ್ಕೆ ಸಂಬಂಧಿಸಿದ ಪ್ರಚಲಿತ ಸಮಸ್ಯೆ ಸವಾಲುಗಳು ಮತ್ತು ಪರಿಹಾರಗಳ ಕುರಿತ ಆಳವಾದ ಸಂಶೋಧನೆ: ನಮ್ಮ ಕಲ್ಯಾಣ ಕರ್ನಾಟಕ ಪ್ರದೇಶದ, ನಾಡಿನ ಜನರ ಅಮೂಲ್ಯವಾದ ಆರೋಗ್ಯ ಮತ್ತು ಪ್ರಾಣ ರಕ್ಷಣೆ; ಸಾವಿರಾರು ಜನರಿಗೆ ಉದ್ಯೋಗ ಸೃಷ್ಟಿ: ಸರ್ವಾಂಗೀಣ ಅಭಿವೃದ್ಧಿಯಿಂದ ರಾಷ್ಟ್ರೀಯ ಮಹತ್ವತೆ. ತಮಗೆ ತಿಳಿದಿರುವಂತೆ, ಪ್ರಾದೇಶಿಕ ಅಸಮತೋಲನೆ ನಿವಾರಣಗೆಗಾಗಿ. ಡಾ.ಡಿ.ಎಂ.ನಂಜುಂಡಪ್ಪ ವರದಿಯಲ್ಲಿ ರಾಯಚೂರಿನಲ್ಲಿ ಭಾರತೀಯ ತಂತ್ರಜ್ಞಾನ ಸಂಸ್ಥೆ() ಸ್ಥಾಪಿಸಬೇಕೆಂಬ ಮಹತ್ವದ ಶಿಫಾರಸ್ಸು ಮಾಡಲಾಗಿತ್ತು. ಆದರೆ ಅಂದಿನ ಸರಕಾರ ಅನುಷ್ಠಾನದಲ್ಲಿ ತೋರಿದ ವಿಳಂಬನೀತಿಯನ್ನು ಖಂಡಿಸಿ ಐಐಟಿ ಹೋರಾಟ ಸಮಿತಿಯ ಸುದೀರ್ಘ ಹೋರಾಟ ನಡೆಸಿದಾಗ್ಯೂ, ಅಂದಿನ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ರವರ ಸಚಿವ ಸಂಪುಟ ಸಭೆಯ ತೀರ್ಮಾನವನ್ನು ಗಾಳಿಗೆ ತೂರಿ, ರಾಜ್ಯ ಹಾಗೂ ಕೇಂದ್ರ ಸರಕಾರಗಳ ಪ್ರಭಾವಿ ರಾಜಕೀಯ ಶಕ್ತಿಗಳ ಕುತಂತ್ರದಿಂದಾಗಿ ಐಐಟಿ() ಧಾರವಾಡದ ಪಾಲಾಗಿರುವುದು ರಾಯಚೂರು ಜಿಲ್ಲೆಗೆ ಮತ್ತು ಕಲ್ಯಾಣ ಕರ್ನಾಟಕ್ಕೆ ಮಾಡಿದ ಮಹಾದ್ರೋಹವಾಗಿದೆ. ಆದ್ದರಿಂದ ಐಐಟಿಗೆ ಪರ್ಯಾಯವಾಗಿ ರಾಯಚೂರಿಗೆ ಏಮ್ಸ್ ()) ಆರೋಗ್ಯ ಸಂಸ್ಥೆಯನ್ನು ಕೇಂದ್ರಸರಕಾರ ಮಂಜೂರು ಮಾಡಬೇಕು.

ಸಂವಿಧಾನದ 371(ಜೆ) ಅಡಿಯಲ್ಲಿ ವಿಶೇಷ ಸ್ಥಾನ ಮಾನಕ್ಕೊಳಪಟ್ಟ ಕಲ್ಯಾಣ ಕರ್ನಾಟಕ ಪ್ರದೇಶದ ರಾಯಚೂರಿಗೆ ವಿಶೇಷವಾದ ಆರೋಗ್ಯ ಸಂಸ್ಥೆ ಏಮ್ಸ್ () ಅನ್ನು ಮಂಜೂರು ಮಾಡಬೇಕು.

ಏಮ್ಸ್ ಸ್ಥಾಪನೆಗೆ 1500 ದಿನಗಳಿಂದ ಸುದೀರ್ಘ ಹೋರಾಟ ಜರುಗುತ್ತಿದ್ದು ರಾಯಚೂರಿನಲ್ಲಿಯೇ 'ಏಮ್ಸ್' ಸ್ಥಾಪನೆ ಮಾಡಲೇಬೇಕು. ಈಗಾಗಲೆ ರಾಯಚೂರು ಜಿಲ್ಲಾಧಿಕಾರಿಗಳು ಅಗತ್ಯವಿರುವ 250 ಎಕರೆ ಭೂಮಿಯನ್ನು ಕಾಯ್ದಿರಿಸಿ, ಇತರೆ ಮೂಲಭೂತ ಅವಶ್ಯಕತೆಗಳನ್ನು ಒದಗಿಸುವ ಬಗ್ಗೆ ಕ್ರಿಯಾಯೋಜನೆ ಸಿದ್ದಪಡಿಸಿ ರಾಜ್ಯಸರಕಾರದ ಮೂಲಕ ಕೇಂದ್ರ ಸರಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಚಿವಾಲಯಕ್ಕೆ ಕಳುಹಿಸಿರುತ್ತಾರೆ. ಕರ್ನಾಟಕ ರಾಜ್ಯ ಸರ್ಕಾರ ಮಹತ್ವದ ಶಿಫಾರಸ್ಸು ಗಳನ್ನು ಮಾಡಿದೆ; ಏಮ್ಸ್ ಸ್ಥಾಪಿಸುವುದಕ್ಕೆ ಅಗತ್ಯವಿರುವ ಎಲ್ಲಾ ಸೌಲಭ್ಯಗಳು ರಾಯಚೂರಿನಲ್ಲಿ ಲಭ್ಯವಾಗಿವೆ. ಆದಾಗ್ಯೂ ಕೇಂದ್ರ ಸರಕಾರ ಸುದೀರ್ಘ ಹೋರಾಟಕ್ಕೆ ಸ್ಪಂದಿಸುತ್ತಿಲ್ಲ ಮತ್ತು ರಾಜ್ಯ ಸರಕಾರದ ಮಹತ್ವದ ಶಿಫಾರಸ್ಸು ಗಳಿಗೆ ಗೌರವ ನೀಡುತ್ತಿಲ್ಲ ಎಂದು ತಮ್ಮ ಆಕ್ರೋಶ ಹೊರ ಹಾಕಿದರು.

ನಮ್ಮ ರಾಜ್ಯದ ಕೇಂದ್ರ ಮಂತ್ರಿಗಳು ಪ್ರಧಾನ ಮಂತ್ರಿಗಳ ಮುಂದೆ ಮಾಡುವ ಶಕ್ತಿಯನ್ನು ಕಳೆದುಕೊಂಡಿದ್ದಾರೆ ಇದರಿಂದ ಏಮ್ಸ್ ಬಗ್ಗೆ ಮಾಡುವವರೆ ಇಲ್ಲದಂತಾಗಿದೆ ಮತ್ತು ನಮ್ಮ ಹೋರಾಟಕ್ಕೆ ಬೇರೆ ರಾಜಕೀಯ ಪಕ್ಷಗಳಿಂದ ದೇಣಿಗೆ ಬರುತ್ತಿದೆ ಆದ್ದರಿಂದ ನಾವು ಹೋರಾ ಮಾಡುತ್ತಿದ್ದೇವೆ ಎಂದು ಸುಳ್ಳು ಸುದ್ದಿ ಹರಡುತ್ತಿದೆ ಈ ವಿಷಯಗಳನ್ನು ಯಾವುದಕ್ಕೂ ಕಿವಿಕೊಡದೆ ಏಮ್ಸ್ ರಾಯಚೂರಿನಲ್ಲೆ ಸ್ಥಾಪನೆ ಮಾಡಬೇಕು ಇಲ್ಲವಾದಲ್ಲಿ ನಮ್ಮ ಕಲ್ಯಾಣ ಕರ್ಯಾನಟಕ ಭಾಗವನ್ನು ಪ್ರತ್ಯೇಕ ರಾಜ್ಯದ ಕೂಗು ಅನಿವಾರ್ಯಾಗಲಿ ಎಂದು ತಿಳಿಸಿದರು.

ಈ ಸಂಧರ್ಭದಲ್ಲಿ ವೆಂಕಟರೆಡ್ಡಿ ಬಲ್ಕಲ್ ತಾಲೂಕ ಸಂಚಾಲಕರು, ಖಾಸಗಿ ಶಿ.ಸಂ. ಒಕ್ಕೂಟ ಅದ್ಯಕ್ಷ ಪ್ರಕಾಶ ಪಾಟೀಲ್, ಕಲ್ಲೂರು ಬಸವರಾಜ ನಾಯಕ, ತಾ.ಪಂ ಮಾಜಿ ಸದಸ್ಯ ಮಲ್ಲಿಕಾರ್ಜುನ ಮಲ್ಲಟ, ಅಮರೇಶ ಚಾಗಭಾವಿ, ಎನ್.ಚಂದ್ರಶೇಖರ. ಬಯ್ಯಾಪೂರ ಕಾಲೇಜಿನ ಪ್ರಾಚಾರ್ಯರಾದ ಅಮರೇಶ ನಂದಾರೆಡ್ಡಿ, ಪ.ಪಂ ಮಾಜಿ ಉಪಾದ್ಯಕ್ಷ ಚನ್ನಪ್ಪಗಡ್ಲ, ವೆಂಕಟೇಶ ದೊರೆ, ಪರಶುರಾಂ ಸರೋದೆ, ಎಂ.ಪ್ರಕಾಶ, ಶರಣಪ್ಪ ಮರಾಟ,ನಾಗಪ್ಪ ಪತ್ತಾರ, ರವಿ ಕಳಸ, ರಮೇಶ ಭೋವಿ, ಚಂದ್ರಶೇಖರ ಹಡಪದ್, ಹುಲ್ಲಿಗೆಪ್ಪ ಕರಿಬಿಲ್ಕರ್ ಮೇಶಾಕ ದೊಡ್ಮನೆ, ರಾಜ ಬೋವಿ, ಪಕ್ರುದ್ದಿನ್ , ಆದೇಪ್ಪ, ಸೋಮು ಪವಾರ ಮುರ್ಕಿ ಗುಡ್ಡ, ಪಾಂಡುರಂಗ ಪವಾರ ಮುರ್ಕಿಗುಡ್ಡ, ಸೇರಿದಂತೆ ಇನ್ನಿತರರು ಇದ್ದರು.

ಜಿಲ್ಲಾ ಕಾರಾಗೃಹದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ ಆಚರಣೆ ಸಿಬ್ಬಂದಿ, ವಿಚಾರಣಾಧೀನ ಬಂಧಿಗಳಿಂದ ಉತ್ಸಾಹಭರಿತವಾಗಿ ಯೋಗ್ಯಾಭ್ಯಾಸ

ಸ್ವೀಕರಿಸಲಾಯಿತು.

ಕಾರ್ಯಕ್ರಮದಲ್ಲಿ ಜೈಲರ್ ಗಳಾದ ಈರಯ್ಯ ಹಿರೇಮಠ, ವೆಂಕಟೇಶ್, ಸಹಾಯಕ ಜೈಲರ್ ಗಳಾದ ಜಗದೀಶ್ ಗಸ್ತಿ, ಆರ್.ಎಂ. ಪಾಟೀಲ್, ಸಾವಿತ್ರಿ, ತರಭಾಯಿ ಸೇರಿದಂತೆ ಕಾರಾಗೃಹದ 30ಕ್ಕೂ ಹೆಚ್ಚು ಸಿಬ್ಬಂದಿ ಹಾಗೂ ಸುಮಾರು 200 ವಿಚಾರಣಾಧೀನ ಬಂಧಿಗಳು ಮತ್ತು ಆರ್ಟ್ ಆಫ್ ಲಿವಿಂಗ್ ಕಾರ್ಯಕರ್ತರು ಉತ್ಸಾ ಹದಿಂದ ಭಾಗವಹಿಸಿದ್ದರು.


ತುಂಗಭದ್ರಾ ಗೇಟ್ ಉದ್ಘಾಟನೆಗೆ ಆಂಧ್ರ-ತೆಲಂಗಾಣ ಸಿಎಂಗಳಿಗೆ ಖುದ್ದು ಆಹ್ವಾನ

ಶಾಸಕರ ನಿಯೋಗ ರಚನೆಗೆ ಸಿಎಂ ಡಿಕೆಶಿ ಸೂಚನೆ

ಸಿಂಧನೂರು, ಜೂನ್ 21:

ತುಂಗಭದ್ರಾ ಅಣೆಕಟ್ಟೆಯ 19ನೇ ಗೇಟ್ ಕೊಚ್ಚಿಹೋದ ಘಟನೆಯ ಬಳಿಕ ಕೈಗೊಳ್ಳಲಾದ ಮಹತ್ವದ ಪುನರ್ ನಿರ್ಮಾಣ ಕಾಮಗಾರಿ ಪೂರ್ಣಗೊಂಡಿದ್ದು, ಜಲಾಶಯದ ಎಲ್ಲಾ 33 ಗೇಟ್‌ಗಳನ್ನು ನೂತನವಾಗಿ ಅಳವಡಿಸಲಾಗಿದೆ. ಇದರ ಉದ್ಘಾಟನಾ ಸಮಾರಂಭ ಜೂನ್ 25ರಂದು ಮುನಿರಾಬಾದ್‌ನಲ್ಲಿ ನಡೆಯಲಿದೆ.

ಈ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಈಗಾಗಲೇ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಹಾಗೂ ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳ ಮುಖ್ಯಮಂತ್ರಿಗಳಿಗೆ ರಾಜ್ಯ ಸರ್ಕಾರ



ಅಧಿಕೃತ ಆಹ್ವಾನ ನೀಡಿದೆ.

ತುಂಗಭದ್ರಾ ಯೋಜನೆಯ ಪ್ರಮುಖ ಫಲಾನುಭವಿಗಳಾಗಿರುವ ನೆರೆಯ ರಾಜ್ಯಗಳ ಮುಖ್ಯಮಂತ್ರಿಗಳ ಉಪಸ್ಥಿತಿಗೆ ವಿಶೇಷ ಆದ್ಯತೆ ನೀಡಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಅವರನ್ನು ಖುದ್ದಾಗಿ ಭೇಟಿ ಮಾಡಿ ಆಹ್ವಾನಿಸಲು ವಿಶೇಷ ನಿಯೋಗ ರಚಿಸಲು ಸೂಚನೆ ನೀಡಿದ್ದಾರೆ.

ಶಾಸಕರಾದ ಬೋಸರಾಜು, ಬಸವರಾಜ ರಾಯರೆಡ್ಡಿ ಹಾಗೂ ಬಸನಗೌಡ ಬಾದರ್ಲಿ ಅವರ ನೇತೃತ್ವದ ನಿಯೋಗ ಆಂಧ್ರಪ್ರದೇಶ ಮತ್ತು ತೆಲಂಗಾಣಕ್ಕೆ ತೆರಳಿ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಸಮಾರಂಭಕ್ಕೆ ಆಹ್ವಾನಿಸಲಿದೆ.

ಈ ಸಂಬಂಧ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅಗತ್ಯ ಕ್ರಮ ಕೈಗೊಳ್ಳಲು ಸೂಚನೆ ನೀಡಿರುವುದಾಗಿ ತಿಳಿದು ಬಂದಿದೆ. ಸೀಮಿತ ಅವಧಿಯಲ್ಲಿ ತುಂಗಭದ್ರಾ ಅಣೆಕಟ್ಟೆಯ ಎಲ್ಲಾ ಗೇಟ್‌ಗಳ ಬದಲಾವಣೆ ಕಾಮಗಾರಿ ಪೂರ್ಣಗೊಂಡಿರುವುದು ರಾಜ್ಯದ ಜಲಸಂಪನ್ಮೂಲ ನಿರ್ವಹಣೆಯಲ್ಲಿ ಮಹತ್ವದ ಮೈಲಿಗಲ್ಲು ಎಂದು ಸರ್ಕಾರ ಹೇಳಿದೆ.

ಪ್ರಧಾನ ಮಂತ್ರಿ ವಿಕಸಿತ್ ಭಾರತ್ ರೋಜ್‌ಗಾರ್ ಯೋಜನೆ: ರೂ.2,400 ಕೋಟಿ ಪ್ರಧಾನಿ ಮೋದಿ ಅವರಿಂದ ಪ್ರೋತ್ಸಾಹಧನ ಬಿಡುಗಡೆ

ಬಳ್ಳಾರಿ,ಜೂ.21-

ದೇಶದಲ್ಲಿ ಔಪಚಾರಿಕ ಉದ್ಯೋಗ ಸೃಷ್ಟಿಯನ್ನು ಉತ್ತೇಜಿಸುವ ಮತ್ತು ಸಂಘಟಿತ ವಲಯಕ್ಕೆ ಹೊಸದಾಗಿ ಸೇರ್ಪಡೆಗೊಳ್ಳುವ ಯುವಕರಿಗೆ ಆರ್ಥಿಕ ಭದ್ರತೆ ಒದಗಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಮಹತ್ವದ ಹೆಜ್ಜೆ ಇಟ್ಟಿದೆ. ಪ್ರಧಾನ ಮಂತ್ರಿ ವಿಕಸಿತ್ ಭಾರತ್ ರೋಜ್‌ಗಾರ್ ಯೋಜನೆ ಅಡಿಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ದೇಶಾದ್ಯಂತದ ಫಲಾನುಭವಿಗಳಿಗೆ ಬರೋಬ್ಬರಿ ರೂ.2,400 ಕೋಟಿ ರೂಪಾಯಿಗಳ ಪ್ರೋತ್ಸಾಹಧನವನ್ನು ಬಿಡುಗಡೆ ಮಾಡಿದ್ದಾರೆ.

ನವದೆಹಲಿಯ ವಿಜ್ಞಾನ ಭವನದಲ್ಲಿ ನಡೆದ ಮುಖ್ಯ ರಾಷ್ಟ್ರೀಯ ಕಾರ್ಯಕ್ರಮದಲ್ಲಿ ಪ್ರಧಾನಿ ಮೋದಿ ಅವರು ನೇರ ನಗದು ವರ್ಗಾವಣೆ ಮೂಲಕ ಈ ಹಣವನ್ನು ಬಿಡುಗಡೆ ಮಾಡಿದ್ದು, ಇದರ ಪ್ರಯೋಜನವು ದೇಶದ 15 ಲಕ್ಷಕ್ಕೂ ಹೆಚ್ಚು ಉದ್ಯೋಗಿಗಳು ಮತ್ತು ಉದ್ಯೋಗದಾತರಿಗೆ ತಲುಪಿದೆ.

★ಬಳ್ಳಾರಿಯ ತೋರಣಗಲ್ಲಿನಲ್ಲಿ ಪ್ರಾದೇಶಿಕ ಕಾರ್ಯಕ್ರಮ:★

ರಾಷ್ಟ್ರೀಯ ಕಾರ್ಯಕ್ರಮದ ಭಾಗವಾಗಿ ದೇಶದ 200 ಪ್ರಮುಖ ಸ್ಥಳಗಳಲ್ಲಿ ಪ್ರಾದೇಶಿಕ ಕಾರ್ಯಕ್ರಮಗಳನ್ನು ಏಕಕಾಲದಲ್ಲಿ ಆಯೋಜಿಸಲಾಗಿತ್ತು. ಬಳ್ಳಾರಿ ಜಿಲ್ಲೆಯ ತೋರಣಗಲ್ಲಿನ ವಿದ್ಯಾನಗರದಲ್ಲಿರುವ ಜೆಎಸ್‌ಡಬ್ಲ್ಯೂ ಟೌನ್‌ಶಿಪ್‌ನ 'ಜೆ-ಮ್ಯಾಕ್ಸ್ ' ನಲ್ಲಿ ಶುಕ್ರವಾರ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯದ ವತಿಯಿಂದ ವಿಶೇಷ ಪ್ರಾದೇಶಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಸಮಾರಂಭಕ್ಕೆ ಸಂಡೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಈ.ಅನ್ನಪೂರ್ಣ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಜ್ಯೋತಿ ಬೆಳಗಿಸಿದರು.

ಬಳಿಕ ಮಾತನಾಡಿದ ಅವರು, ಈ ಯೋಜನೆಯು ಹೊಸ ಉದ್ಯಮಗಳಿಗೆ (ಸ್ಟಾರ್ಟ್-ಅಪ್‌ಗಳು) ಉದ್ಯೋಗ ಸೃಷ್ಟಿಸಲು ಹೆಚ್ಚಿನ ಪ್ರೋತ್ಸಾಹ ನೀಡುತ್ತದೆ. ಉದ್ಯೋಗಿಗಳು ತಮ್ಮ ಕೆಲಸದಲ್ಲಿ ದೀರ್ಘಕಾಲ ಮುಂದುವರಿಯಬೇಕು ಮತ್ತು ಉದ್ಯೋಗದಾತರು ಯೋಜನೆಯ ಭಾಗ-ಬಿ ಪ್ರಯೋಜನಗಳನ್ನು ಪಡೆದುಕೊಂಡು ಗ್ರಾಮೀಣ ಭಾಗದ ಯುವಕರಿಗೆ ಹೆಚ್ಚಿನ ಉದ್ಯೋಗಾವಕಾಶಗಳನ್ನು ಸೃಷ್ಟಿಸಬೇಕು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದಲ್ಲಿ 200 ಫಲಾನುಭವಿಗಳು, 75 ಉದ್ಯೋಗದಾತರು, ಉದ್ಯಮ ಸಂಸ್ಥೆಗಳ ಪ್ರತಿನಿಧಿಗಳು, ಸಾರ್ವಜನಿಕ ಪ್ರತಿನಿಧಿಗಳು, ರಾಜ್ಯ ಸರ್ಕಾರದ ಹಿರಿಯ ಅಧಿಕಾರಿಗಳು ಹಾಗೂ ಇಪಿಎಫ್ಒ ಅಧಿಕಾರಿಗಳು ಮತ್ತು ಸಿಬ್ಬಂದಿ ಸೇರಿದಂತೆ ಒಟ್ಟು 350ಕ್ಕೂ ಹೆಚ್ಚು ಜನ ಭಾಗವಹಿಸಿದ್ದರು. ನವದೆಹಲಿಯಲ್ಲಿ ನಡೆದ ಮುಖ್ಯ ಕಾರ್ಯಕ್ರಮದ ನೇರ ಪ್ರಸಾರವನ್ನು ಇಲ್ಲಿ ವೀಕ್ಷಿಸಲು ವ್ಯವಸ್ಥೆ



ಮಾಡಲಾಗಿತ್ತು.

★20 ಯುವಕರಿಗೆ ನೇಮಕಾತಿ ಪತ್ರ ವಿತರಣೆ:★

ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿ, ವಿವಿಧ ಸಂಸ್ಥೆಗಳ ಉದ್ಯೋಗದಾತರು ಹೊಸದಾಗಿ ಆಯ್ಕೆಯಾದ 20 ಯುವ ಉದ್ಯೋಗಿಗಳಿಗೆ ವೇದಿಕೆಯ ಮೇಲೆ ನೇಮಕಾತಿ ಪತ್ರಗಳನ್ನು ವಿತರಿಸಿದರು.

ಯೋಜನೆಯ ಕುರಿತು ಮಾತನಾಡಿದ ಫಲಾನುಭವಿ ಉದ್ಯೋಗದಾತರೊಬ್ಬರು, ನಮ್ಮ ಕಂಪನಿಯು ಸ್ಥಳೀಯ ಯುವಕರಿಗೆ ಸದಾ ಉದ್ಯೋಗಾವಕಾಶ ನೀಡಲು ಶ್ರಮಿಸುತ್ತಿದೆ. ಆದರೆ ಪಿಎಂವಿಬಿಆರ್‌ವೈ ಯೋಜನೆಯು ನಮ್ಮ ಪ್ರಯತ್ನಗಳಿಗೆ ಅದ್ಭುತ ವೇಗವನ್ನು ನೀಡಿದೆ ಹಾಗೂ ಉದ್ಯಮಕ್ಕೆ ಉತ್ತಮ ಆರ್ಥಿಕ ಬೆಂಬಲವನ್ನೂ ಒದಗಿಸಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಇನ್ನೊಂದೆಡೆ, ಉದ್ಯೋಗ ಪಡೆದ ಯುವಕನೊಬ್ಬ ಮಾತನಾಡಿ, ವೃತ್ತಿಪರ ಜಗತ್ತಿಗೆ ಕಾಲಿಡುವುದು ಯಾವಾಗಲೂ ಸವಾಲಿನದ್ದಾಗಿರುತ್ತದೆ. ಆದರೆ ಈ ಯೋಜನೆಯು ನನ್ನ ಉದ್ಯೋಗ ಜೀವನದ ಆರಂಭವನ್ನು ಆರ್ಥಿಕವಾಗಿ ಸುರಕ್ಷಿತ ಮತ್ತು ಲಾಭದಾಯಕವಾಗಿಸಿದೆ ಎಂದು ಧನ್ಯವಾದ ಅರ್ಪಿಸಿದರು.

★ದೇಶಾದ್ಯಂತ 70 ಲಕ್ಷ ಉದ್ಯೋಗ ಸೃಷ್ಟಿ: ಪ್ರಧಾನಿ ಮೋದಿ ಮಾಹಿತಿ:★

ರಾಷ್ಟ್ರೀಯ ಕಾರ್ಯಕ್ರಮದಲ್ಲಿ ಫಲಾನುಭವಿಗಳನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ ಅವರು, 'ಪಿಎಂವಿಬಿಆರ್‌ವೈ ಯೋಜನೆ ಅಡಿಯಲ್ಲಿ ದೇಶದಲ್ಲಿ ಈಗಾಗಲೇ ಸುಮಾರು 70 ಲಕ್ಷ (7 ಮಿಲಿಯನ್) ಉದ್ಯೋಗಗಳನ್ನು ಯಶಸ್ವಿಯಾಗಿ ಸೃಷ್ಟಿಸಲಾಗಿದೆ' ಎಂಬ ಮಹತ್ವದ ಮಾಹಿತಿ ನೀಡಿದರು.

ಈ ಯೋಜನೆಯಡಿ ಸುಮಾರು 20 ಲಕ್ಷ ಯುವ ಉದ್ಯೋಗಿಗಳು ತಮ್ಮ ಮೊದಲ ಆರು ತಿಂಗಳ ಉದ್ಯೋಗಾವಧಿಯನ್ನು ಪೂರ್ಣಗೊಳಿಸಿದ್ದು, ಈ ಪೈಕಿ 10 ಲಕ್ಷ ಉದ್ಯೋಗಿಗಳಿಗೆ ಈ ಕಾರ್ಯಕ್ರಮದ ಮೂಲಕ ನೇರ ಪ್ರೋತ್ಸಾಹ ಧನ ಪಾವತಿಸಲಾಗಿದೆ ಎಂದು ತಿಳಿಸಿದರು.

ವಿಜ್ಞಾನ ಭವನದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಯುವಜನ ವ್ಯವಹಾರಗಳ ಮತ್ತು ಕ್ರೀಡಾ ಸಚಿವರಾದ ಡಾ. ಮನ್ಸುಖ್ ಮಾಂಡವೀಯ, ಕಾರ್ಮಿಕ ಮತ್ತು ಉದ್ಯೋಗ ರಾಜ್ಯ ಸಚಿವರಾದ ಶೋಭಾ ಕರಂದ್ಲಾಜೆ ಮತ್ತು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಕೇಂದ್ರ ಸಚಿವ ಡಾ. ಮನ್ಸುಖ್ ಮಾಂಡವೀಯ ಅವರು ಮಾತನಾಡಿ, ಯೋಜನೆಯ ಕಾರ್ಯಾಚರಣೆಯ ಯಶಸ್ಸು , ಐತಿಹಾಸಿಕ ಕಾರ್ಮಿಕ ಸುಧಾರಣೆಗಳು ಮತ್ತು ಈ ಯೋಜನೆ ಹೇಗೆ ತಳಮಟ್ಟದ ಆರ್ಥಿಕ ಬೆಳವಣಿಗೆಗೆ ಕಾರಣವಾಗಿದೆ ಎಂಬುದನ್ನು ವಿವರಿಸಿದರು.

★ಪ್ರಧಾನ ಮಂತ್ರಿ ವಿಕ್ಷಿತ್ ಭಾರತ್ ರೋಜ್‌ಗಾರ್ ಯೋಜನೆ:★

ಇದು ಭಾರತ ಸರ್ಕಾರದ ಅತ್ಯಂತ ಮಹತ್ವಾಕಾಂಕ್ಷೆಯ 'ಉದ್ಯೋಗ-ಆಧಾರಿತ ಪ್ರೋತ್ಸಾಹ ಧನ' ಯೋಜನೆಯಾಗಿದೆ. ಸಂಘಟಿತ ವಲಯಕ್ಕೆ ಮೊದಲ ಬಾರಿಗೆ ಸೇರುವ ಅರ್ಹ ಉದ್ಯೋಗಿಗಳಿಗೆ ರೂ.15,000 ವರೆಗಿನ ಒಂದು ತಿಂಗಳ ವೇತನವನ್ನು ಸರ್ಕಾರ ನೀಡುತ್ತದೆ. ಹೆಚ್ಚುವರಿ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ಉದ್ಯೋಗದಾತರಿಗೆ ಎರಡು ವರ್ಷಗಳ ಅವಧಿಗೆ ಪ್ರೋತ್ಸಾಹ ಧನವನ್ನು ನೀಡಲಾಗುತ್ತದೆ.

★ಉತ್ಪಾದನಾ ವಲಯಕ್ಕೆ ವಿಶೇಷ ಬೆಂಬಲ:★

ಶ್ರಮದಾಯಕ ಮತ್ತು ಉದ್ಯೋಗದಟ್ಟಣೆ ಹೊಂದಿರುವ ಉತ್ಪಾದನಾ ವಲಯದಲ್ಲಿ ಸುಸ್ಥಿರ ಉದ್ಯೋಗ ಸೃಷ್ಟಿಯನ್ನು ಉತ್ತೇಜಿಸಲು ಈ ಬೆಂಬಲವನ್ನು ಹೆಚ್ಚುವರಿಯಾಗಿ ಮತ್ತೊಂದು ಎರಡು ವರ್ಷಗಳ ಕಾಲ ವಿಸ್ತರಿಸಲಾಗುತ್ತದೆ.



ರೈತರ ಸಮಸ್ಯೆಗಳ ನಿವಾರಣೆಗೆ ಸೂಕ್ತ ಕ್ರಮ -ಜಿಲ್ಲಾಧಿಕಾರಿ ರಾಹುಲ್ ತುಕಾರಾಮ ಪಾಂಡ್ವೆ

ಯಾದಗಿರಿ, ಜೂನ್. 20 (ಕ.ವಾ): ಜಿಲ್ಲೆಯ ರೈತರ ತುರ್ತು ಸಮಸ್ಯೆಗಳ ನಿವಾರಣೆಗೆ ವಿಶೇಷ ಗಮನ ಹಾಗೂ ಇತರೆ ಸರ್ಕಾರದ ಹಂತದಲ್ಲಿನ ಸಮಸ್ಯೆಗಳ ಬಗ್ಗೆ ಸರ್ಕಾರದ ಗಮನಕ್ಕೆ ತರಲಾಗುವುದು ಎಂದು ಜಿಲ್ಲಾಧಿಕಾರಿ ಶ್ರೀ ರಾಹುಲ್ ತುಕಾರಾಮ ಪಾಂಡ್ವೆ ಅವರು ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ರೈತರ ಸಮಸ್ಯೆಗಳ ನಿವಾರಣೆ ಕುರಿತಂತೆ ಚರ್ಚಿಸಲು ಕರೆಯಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ವಿವಿಧ ರೈತಪರ ಸಂಘಟನೆ ಗಳಿಂದ ಇಂದು ಕುಂದುಕೊರತೆ ಅಹವಾಲು ಸ್ವೀಕರಿಸಲಾಗಿದೆ. ಎಲ್ಲ ಸಮಸ್ಯೆಗಳ ಬಗ್ಗೆ ಗಮನಿಸಲಾಗಿದ್ದು, ತುರ್ತಾಗಿ ಕೈಗೊಳ್ಳಬೇಕಾದ ಕ್ರಮುಗಳ ನಿವಾರಣೆಗೆ ಅವಶ್ಯಕ ಕ್ರಮ ಕೈಗೊಳ್ಳಲಾಗುವುದೆಂದು ಅವರು ತಿಳಿಸಿದರು.

ಕೃಷಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿನ ಕುಂದುಕೊರತೆಗಳನ್ನು ಆಯಾ ಇಲಾಖೆಗಳ ಅಧಿಕಾರಿಗಳಿಗೆ ಸೂಚಿಸಿನಿವಾರಿಸಲಾಗುವುದು. ಸರ್ಕಾರದ ಹಂತದಲ್ಲಿ ಆಗಬೇಕಾದ ಕ್ರಮಗಳ ಬಗ್ಗೆ ಸರ್ಕಾರದ ಗಮನಕ್ಕೆ ತರಲಾಗುವುದು.ತುರ್ತು ಸಮಸ್ಯೆಗಳ ಬಗ್ಗೆಯೂ ಗಮನನೀಡಲಾಗುವದೆಂದ ಅವರು ಎಲ್ಲ ರೈತರು ಸಹಕಾರ ದಿಂದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸಲಾಗುವದೆಂದು ತಿಳಿಸಿದರು.

ಸಭೆಯಲ್ಲಿ ಮಾತನಾಡಿದ ಜಂಟಿ ಕೃಷಿ ನಿರ್ದೇಶಕರಾದ ರತೇಂದ್ರನಾಥ ಸುಗೂರ್ ಅವರು, ಮಧ್ಯಪ್ರಾಚ್ಯ ಯುದ್ದದಿಂದಾಗಿ ರಸಗೊಬ್ಬರಕ್ಕೆ ಬೇಕಾದಸಾಮಗ್ರಿಗಳ, ರಸಗೊಬ್ಬರಗಳ ಕೊರತೆಯಾಗಿದೆ. ದಾಸ್ತಾನು ಅನ್ವಯ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಪ್ರತಿದಿನದ ರಸಗೊಬ್ಬರ ಸ್ಟಾಕ್ ಬಗ್ಗೆ ಮಾಹಿತಿ ಫಲಕ ಅಳವಡಿಸಲು ಸಂಬಂಧಪಟ್ಟ ಕೃಷಿ ಮತ್ತು ಸಹಾಯಕ ಕೃಷಿ ಅಧಿಕಾರಿಗಳಿಗೆ ಸೂಚಿಸಲಾಗುವುದು. ಸರ್ಕಾರದ ಹಂತದಲ್ಲಿನ ಸಮಸ್ಯೆಗಳ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು. ರಸಗೊಬ್ಬರಕ್ಕೆ ಸಂಬಂಧಿಸಿದಂತೆ ಯಾವುದೇ ಡೀಲರ್ಗಳ ಅಥವಾ ಮಾಲೀಕರಿಂದ ಲಿಂಕನ್ನು ರೈತರು ಪಡೆಯಬಾರದು ಎಂದು ತಿಳಿಸಿದರು. ಸಭೆಯಲ್ಲಿ ರೈತಪರ ಸಂಘಟನೆಗಳ ಮುಖಂಡರಾದ ಕಾಂತು ಪಾಟೀಲ್, ಶಾಂತು ಮಂದಾರವಾಡ, ಮಲ್ಲಣಗೌಡರ ಹಗರಟಗಿ,ಮಹಾವೀರ ಲಿಂಗೇರಿ,ಚನ್ನಪ್ಪ ಆನೆಗುಂದಿ,ರಾಜುಗೌಡ ಚಾಮ್ನಳ್ಳಿ, ಮಹಾದೇವಪ್ಪ ಕಡಕಲ್, ಅವರು ನಕಲಿ ಬೀಜ, ರಸಗೊಬ್ಬರ ಮಾರಾಟಗಾರರ ಮೇಲೆ ಕ್ರಿಮಿನಲ್ ಪ್ರಕರಣ ದಾಖಲು, ರಸಗೊಬ್ಬರಗಳ ಸಮಾನ ಹಂಚಿಕೆ, ಕೆಬಿಜೆ ಎನ್ ಎಲ್ ಸಲಹಾ ಸಮಿತಿಗೆ ಜಿಲ್ಲೆಯಿಂದ ರೈತ ಸಂಘಟನೆಗಳ ತಲಾ ಒಬ್ಬ ರೈತರನ್ನು ಸದಸ್ಯರಾಗಿ ನಿಯೋಜನೆಗೆಕ್ರಮ, ಕುಡಿಯುವ ನೀರು ಹಾಗೂ ಸ್ವಚ್ಚತೆಯಲ್ಲಿ ನಿರ್ಲಕ್ಷ್ಯ ಗ್ರಾಮ ಪಂಚಾಯತ್ ಪಿಡಿಓ ಗಳ ಮೇಲೆ ಕ್ರಮ, ಕಳೆದ ವರ್ಷ ಆದ ಅತಿವೃಷ್ಟಿ ಪರಿಹಾರ ನೀಡಲು, ಕೆರೆ ಒತ್ತುವರಿ ತೆರವು, ಕಬ್ಬಿನ ಬಾಕಿ ಬಿಲ್ ಪಾವತಿ, ಇತರೆ ಸಮಸ್ಯೆ ಗಳ ಬಗ್ಗೆ ಜಿಲ್ಲಾಧಿಕಾರಿಗಳ ಗಮನಕ್ಕೆ ತಂದರು.

ಅಂತರಾಷ್ಟ್ರೀಯ ಯೋಗ ದಿನಾಚರಣೆ: ಯೋಗ ಜಾಥಾ ಮೂಲಕ ವಿಶೇಷ ಅರಿವು



ಕೊಪ್ಪಳ ಜೂ.21-

12ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್? ಇಲಾಖೆ ಹಾಗೂ ಜಿಲ್ಲೆಯ ಸರ್ವಯೋಗ ಸಂಸ್ಥೆಗಳ ಸಹಯೋಗದಲ್ಲಿ ಶನಿವಾರ (ಜೂ. 20ರಂದು) ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ ಹಮ್ಮಿಕೊಳ್ಳಲಾದ ಯೋಗ ಜಾಥಾ ಮೂಲಕ ವಿಶೇಷ ಅರಿವು ಮೂಡಿಸಲಾಯಿತು.

ಕೊಪ್ಪಳ ನಗರದ ಶ್ರೀ ಗವಿಮಠ ಆವರಣದಿಂದ ನಡೆದ ಯೋಗ ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾ ಆಯುಷ್? ಅಧಿಕಾರಿಗಳಾದ ಡಾ. ಪಿ.ಬಿ.ಹಿರೇಗೌಡರ ಅವರು ಪತಂಜಲಿ ರವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ನಂತರ ಹಸಿರು ನಿಶಾನೆ ತೋರಿಸುವುದರ ಮೂಲಕ ಚಾಲನೆ ನೀಡಿದರು.

ಬಳಿಕ ಅವರು ಮಾತನಾಡಿ, ಜೂನ್ 21ರಂದು ಭಾರತ ದೇಶಾದ್ಯಂತ ಮತ್ತು ಜಗತ್ತಿನ 177 ರಾಷ್ಟ್ರಗಳಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಈ ವರ್ಷದ ಘೋಷವಾಕ್ಯವು ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ'' ಎಂಬುವುದಾಗಿದ್ದು, ಇದರ ಭಾಗವಾಗಿ ಇಂದು ಜಿಲ್ಲಾ ಆಯುಷ್ ಇಲಾಖೆ, ಜಿಲ್ಲೆಯ ವಿವಿಧ ಆಯುರ್ವೇಧ ಮಹಾವಿದ್ಯಾಲಯಗಳು ಮತ್ತು ಸರ್ವಯೋಗ ಸಂಸ್ಥೆಗಳ ಸಹಯೋಗದಲ್ಲಿ ಯೋಗಾ ಜಾಥಾ ಮೂಲಕ ಸಾರ್ವಜನಿಕರಲ್ಲಿ ಯೋಗದ ಮಹತ್ವದ ಕುರಿತು ಅರಿವು ಮೂಡಿಸಲಾಗುತ್ತಿದೆ. ಜಿಲ್ಲೆಯಲ್ಲಿ ಕಳೆದ ಸುಮಾರು 400 ದಿನಗಳಿಂದ ಯೋಗ ಭಾರತ-365'' ಕಾರ್ಯಕ್ರಮ ವನ್ನು ಪ್ರತಿನಿತ್ಯ ಬೆಳಿಗ್ಗೆ 5.30 ರಿಂದ 7 ಗಂಟೆಯವರೆಗೆ ಆಚರಿಸುತ್ತಿರುವುದು ಇಡೀ ರಾಜ್ಯಾದ್ಯಂತ ಹೆಸರು ಮಾಡಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಚಾರ್ಯರಾದ ಕೃಷ್ಣ ಮೂರ್ತಿ ದೇಸಾಯಿ, ಶ್ರೀ ಗವಿಸಿದ್ದೇಶ್ವರ ಆಯುರ್ವೇಧ ಮಹಾವಿದ್ಯಾಲಯದ ಪ್ರಾಶುಂಪಾಲರಾದ ಡಾ. ಸಾಲಿಮಠ, ಕೊಪ್ಪಳ ಜಿಲ್ಲೆಯ ಆಯುಷ್? ವೈದ್ಯಾಧಿಕಾರಿಗಳಾದ ಡಾ. ಯಮುನಪ್ಪ ಶಿರವಾರ, ಡಾ. ಗುರುರಾಜ್ ಉಮಚಗಿ, ಡಾ. ವಿ.ಆರ್ ತಾಳಿಕೋಟಿ, ಡಾ. ಶರಣಪ್ಪ ಹೈದ್ರಿ, ಡಾ. ರಾಜಶೇಖರ ನಾರಿನಾಳ, ಡಾ. ಕವಿತಾ ಹೆಚ್. ಎಫ್. ಹಾಗೂ ಇತರೆ ವೈದ್ಯಾಧಿಕಾರಿಗಳು, ಶ್ರೀ ಗವಿಸಿದ್ದೇಶ್ವರ, ನಿಂಗೋಜಿ ಮತ್ತು ಅಗಸ್ತ್ಯ ಆಯುರ್ವೇಧ ಮಹಾವಿದ್ಯಾಲಯ ವೈದ್ಯಾಧಿಕಾರಿಗಳು ಹಾಗೂ ಪ್ರಾಧ್ಯಾಪಕರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಆಯುಷ್? ಇಲಾಖೆ ಸಿಬ್ಬಂದಿ, ಸರ್ವಯೋಗ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ಗಮನ ಸೆಳೆದ ಯೋಗ ಜಾಥ: ಯೋಗ ಜಾಥವು ಶ್ರೀ ಗವಿಮಠದ ಆವರಣದಿಂದ ಪ್ರಾರಂಭಗೊಂಡು ಗಡಿಯಾರ ಕಂಬದಿಂದ ಅಶೋಕ ಸರ್ಕಲ್ ಮೂಲಕ ತಾಲೂಕು ಕ್ರೀಡಾಂಗಣದವರೆಗೆ ನಡೆಯಿತು. ಜಾಥದಲ್ಲಿ ಶ್ರೀ ಗವಿಸಿದ್ದೇಶ್ವರ ಆಯುರ್ವೇಧ ಮಹಾವಿದ್ಯಾಲಯ, ನಿಂಗೋಜಿ ಆಯುರ್ವೇಧ ಮಹಾವಿದ್ಯಾಲಯ, ಅಗಸ್ತ್ಯ ಆಯುರ್ವೇಧ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು. ಜಾಥದಲ್ಲಿ ಯೋಗ ಮಾಡಿ ಸದಾ ನಗುನಗುತ್ತಾ ಇರಿ, ಯೋಗ ಅಳವಡಿಸೋಣ ಸುಂದರ ಜೀವನ ಕಟ್ಟೋಣ, ಯೋಗ ನಮ್ಮ ಸಂಸ್ಕೃತಿ- ಆರೋಗ್ಯ ನಮ್ಮ ಹಕ್ಕು, ಯೋಗಕ್ಕೆ ಕೈ ಜೋಡಿಸಿ ಆರೋಗ್ಯದತ್ತ ಹೆಜ್ಜೆ ಇಡಿ, ಹೀಗೆ ಯೋಗದ ಮಹತ್ವವನ್ನು ಸಾರುವ ಇತರೆ ಸಂದೇಶ ಫಲಕಗಳು ಎಲ್ಲರ ಗಮನ ಸೆಳೆದವು.

ಬಳ್ಳಾರಿ: ಹವಂಬಾವಿ ಪ್ರದೇಶದ 1.33 ಎಕರೆ ಸರ್ಕಾರಿ ಜಾಗ ಒತ್ತುವರಿ ತೆರವು

ಬಳ್ಳಾರಿ,ಜೂ.21-

ನಗರದ ಹವಂಬಾವಿ ಪ್ರದೇಶದ ಸಿರುಗುಪ್ಪ ರಸ್ತೆಯ ಕಾಲುವೆ ಬಳಿ ಅಕ್ರಮವಾಗಿ ಒತ್ತುವರಿಯಾಗಿದ್ದ ಸರ್ಕಾರಿ ಜಾಗವನ್ನು ಕಂದಾಯ ಇಲಾಖೆ ಅಧಿಕಾರಿಗಳು ಶನಿವಾರ ಯಶಸ್ವಿಯಾಗಿ ವಶಕ್ಕೆ ಪಡೆದಿದ್ದಾರೆ.

ಬಳ್ಳಾರಿ (ಗ್ರಾಮೀಣ) ವ್ಯಾಪ್ತಿಯ ಸರ್ವೆ ನಂಬರ್ 275 ರಲ್ಲಿ ಬರುವ ಸುಮಾರು 1.33 ಎಕರೆ ವಿಸ್ತೀರ್ಣದ ಜಾಗ ಸರ್ಕಾರಕ್ಕೆ ಸೇರಿದ್ದಾಗಿದೆ. ಇದನ್ನು ಕೆಲವರು ಕಾನೂನುಬಾಹಿರವಾಗಿ ಒತ್ತುವರಿ ಮಾಡಿಕೊಂಡಿದ್ದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರ ನೇತೃತ್ವದಲ್ಲಿ ಬಳ್ಳಾರಿ ತಹಶೀಲ್ದಾರ್ ರೇಖಾ ಅವರು, ಪೊಲೀಸ್ ಸಿಬ್ಬಂದಿ ಹಾಗೂ ಕಂದಾಯ ಅಧಿಕಾರಿಗಳೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ಒತ್ತುವರಿಯನ್ನು ತೆರವುಗೊಳಿಸಿದ್ದಾರೆ. ಸ್ಥಳದಲ್ಲಿ ತಹಶೀಲ್ದಾರ್ ಕಚೇರಿಯಿಂದ ಅಧಿಕೃತ ಜಾಗೃತಿ ಹಾಗೂ ಎಚ್ಚರಿಕೆ ಫಲಕವನ್ನು ಅಳವಡಿಸಲಾಗಿದೆ. ಇದೇ ವೇಳೆ ಹವಂಬಾವಿ ಪ್ರದೇಶದ ಸಿರುಗುಪ್ಪ ರಸ್ತೆಯ ಎಡಬದಿಯಲ್ಲಿ ಅಕ್ರಮವಾಗಿ ನಿರ್ಮಿಸಲಾಗಿದ್ದ ವಾಣಿಜ್ಯ ಮತ್ತು ಇತರೆ ಕಟ್ಟಡಗಳನ್ನು ಜೆಸಿಬಿ ಯಂತ್ರಗಳ ಸಹಾಯದಿಂದ ನೆಲಸಮಗೊಳಿಸಲಾಯಿತು. ಕಾನೂನು ಬಾಹಿರವಾಗಿ ನಿರ್ಮಾಣಗೊಂಡಿದ್ದ ಗೋಡೆಗಳು ಹಾಗೂ ಶೆಡ್‌ಗಳನ್ನು ಯಶಸ್ವಿಯಾಗಿ ಧ್ವಂಸಗೊಳಿಸಿದರು.

ಈ ಕಾರ್ಯಾಚರಣೆಯ ಸಂದರ್ಭದಲ್ಲಿ ಸ್ಥಳೀಯ ಕಂದಾಯ ನಿರೀಕ್ಷಕರು, ಗ್ರಾಮ ಆಡಳಿತ ಅಧಿಕಾರಿಗಳು ಹಾಗೂ ಪೊಲೀಸ್ ಇಲಾಖೆಯ ಸಿಬ್ಬಂದಿಗಳು ಹಾಜರಿದ್ದು ಸೂಕ್ತ ಬಂದೋಬಸ್ತ್ ಒದಗಿಸಿದ್ದರು. ಸರ್ಕಾರಿ ಸ್ವತ್ತನ್ನು ರಕ್ಷಿಸುವ ನಿಟ್ಟಿನಲ್ಲಿ ಜಿಲ್ಲಾಡಳಿತವು ಇನ್ನು ಮುಂದೆಯೂ ಇಂತಹ ಕಠಿಣ ಕ್ರಮಗಳನ್ನು ಮುಂದುವರಿಸಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ನಿಮ್ಮೂರು ಸುದ್ದಿ

ಸಂಪಾದಕೀಯ

ಟೆಲಿಗ್ರಾಂ ನಿಷೇಧ: ಎತ್ತಿಗೆ ಜ್ವರ, ಎಮ್ಮೆಗೆ ಬರೆ



ಇದೇ ಮೊದಲ ಬಾರಿಗೆ ನೀಟ್ ಪರೀಕ್ಷೆಯ ಸೋರಿಕೆ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಸರಕಾರ ಟೆಲಿಗ್ರಾಂ ಆ್ಯಪ್ ಬಳಕೆಯನ್ನು ತಾತ್ಕಾಲಿಕವಾಗಿ ನಿರ್ಬಂಧಿಸಲು ಮುಂದಾಗಿದೆ. ನೀಟ್ ಮರು ಪರೀಕ್ಷೆಯ ಹಿನ್ನೆಲೆಯಲ್ಲಿ , ವಂಚನಾ ಜಾಲಗಳು ಮತ್ತು ಸುಳ್ಳು ಸುದ್ದಿಗಳ ಹರಡುವಿಕೆಯನ್ನು ತಡೆಯಲು ಸರಕಾರವು ಜೂನ್ 22ರವರೆಗೆ ಟೆಲಿಗ್ರಾಂ ಆ್ಯಪ್ ಬಳಕೆಯನ್ನು ತಾತ್ಕಾಲಿಕವಾಗಿ ನಿರ್ಬಂಧಿಸಿದೆ ಎಂದು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ) ತಿಳಿಸಿದೆ. ಸೋರಿಕೆಯನ್ನು ತಡೆಯಲು ಟೆಲಿಗ್ರಾಂ ಆ್ಯಪ್ ನಿಷೇಧ ಎಷ್ಟರಮಟ್ಟಿಗೆ ಪರಿಣಾಮಕಾರಿ ಎನ್ನುವುದು ಈಗ ಚರ್ಚೆಯಲ್ಲಿದೆ. ಎತ್ತಿಗೆ ಜ್ವರ ಬಂದರೆ ಎಮ್ಮೆಗೆ ಬರೆ ಹಾಕಿ ಗುಣ ಪಡಿಸುವುದಕ್ಕಾಗುತ್ತದೆಯೇ ಎಂದು ಕೆಲವರು ಕೇಳುತ್ತಿದ್ದಾರೆ. ಪ್ರಶ್ನೆ ಪತ್ರಿಕೆ ಸೋರಿಕೆಗೆ ಸಂಬಂಧಿಸಿ ಮೊದಲು ಕ್ರಮ ತೆಗೆದುಕೊಳ್ಳಬೇಕಾದುದು ಎನ್‌ಟಿಎ ವಿರುದ್ಧ. ಯಾಕೆಂದರೆ ಟೆಲಿಗ್ರಾಂ ಆ್ಯಪ್ ಒಂದು ಮಾಧ್ಯಮ ಮಾತ್ರ. ಅದು ಸೋರಿಕೆಗೆ ನೇರ ಹೊಣೆಯಲ್ಲ. ಪರೀಕ್ಷಾ ಸಂಸ್ಥೆಯ ವೈಫಲ್ಯ, ಅಲ್ಲಿರುವ ಸಿಬ್ಬಂದಿಯ ಬೇಜವಾಬ್ದಾರಿ, ಭ್ರಷ್ಟಾಚಾರ ಅಂತಿಮವಾಗಿ ಸೋರಿಕೆಗೆ ಕಾರಣವಾಗಿದೆ. ದುಷ್ಕರ್ಮಿಗಳು ಸುಳ್ಳು ಸುದ್ದಿಯನ್ನು ಹರಡಲು ಟೆಲಿಗ್ರಾಂನ್ನು ದುರುಪಯೋಗ ಪಡಿಸಿಕೊಳ್ಳಬಹುದು ಎಂಬುದು ಎಷ್ಟು ನಿಜವೋ, ಇತರ ಆ್ಯಪ್‌ಗಳನ್ನು, ಸಾಮಾಜಿಕ ಜಾಲತಾಣಗಳನ್ನೂ ದುರುಪಯೋಗಪಡಿಸಿಕೊಳ್ಳಬಹುದಾಗಿದೆ. ಆದುದರಿಂದ ಸರಕಾರ ತನ್ನ ವೈಫಲ್ಯವನ್ನು ಯಾವುದೋ ಆ್ಯಪ್‌ನ ತಲೆಗೆಕಟ್ಟಿ ನುಣುಚಿಕೊಳ್ಳುವಂತಿಲ್ಲ.

ಯಾವುದೇ ಗಲಭೆ, ದಂಗೆಗಳು ನಡೆದಾಗ ಸರಕಾರ ತಕ್ಷಣ ಇಂಟರ್‌ನೆಟ್‌ಗಳನ್ನು ಸ್ಥಗಿತಗೊಳಿಸುತ್ತದೆ. ಮಣಿಪುರ ಹತ್ಯಾಕಾಂಡ ಸಂದರ್ಭದಲ್ಲಿ ಎಲ್ಲ ಜಾಲತಾಣಗಳನ್ನು ಸ್ಥಗಿತಗೊಳಿಸಿದ ಪರಿಣಾಮವಾಗಿ ಅಲ್ಲಿ ನಡೆದ ಭೀಕರ ಹಿಂಸಾಚಾರ ಹೊರಜಗತ್ತಿಗೆ ತಿಳಿಯಲು ಒಂದು ತಿಂಗಳು ಬೇಕಾಯಿತು. ಗಲಭೆಗಳ ಸಂದರ್ಭದಲ್ಲಿ ಇಂಟರ್‌ನೆಟ್‌ಗಳನ್ನು ಸ್ಥಗಿತಗೊಳಿಸುವುದೇ ತನ್ನ ವೈಫಲ್ಯ ಹೊರ ಜಗತ್ತಿಗೆ ಗೊತ್ತಾಗಬಾರದು ಎನ್ನುವ ಕಾರಣಕ್ಕಾಗಿ. ಇದೀಗ ನೀಟ್ ಪರೀಕ್ಷೆಯಲ್ಲಿ ಟೆಲಿಗ್ರಾಂ ಆ್ಯಪ್‌ನ್ನು ನಿಷೇಧಿಸಲು ಮುಂದಾಗಿರುವ ಸರಕಾರ, ಮುಂದಿನ ದಿನಗಳಲ್ಲಿ ಪರೀಕ್ಷೆ ಮುಗಿಯುವವರೆಗೆ ಇಂಟರ್‌ನೆಟ್‌ಗಳನ್ನೇ ದೇಶಾದ್ಯಂತ ಸ್ಥಗಿತಗೊಳಿಸಿದರೂ ಅಚ್ಚರಿಯಿಲ್ಲ.

ಟೆಲಿಗ್ರಾಂನ್ನು ಬಳಸಿ ದುಷ್ಕರ್ಮಿಗಳು ನಕಲಿ ಪ್ರಶ್ನೆ ಪತ್ರಿಕೆಗಳನ್ನು ಹಂಚಿ ವಿದ್ಯಾರ್ಥಿಗಳಿಂದ ಹಣವನ್ನು ದೋಚಬಹುದು. ಆದರೆ ಸೋರಿಕೆ ನಡೆಯುವುದು ಪರೀಕ್ಷೆ ಕೇಂದ್ರಗಳಿಂದ, ಮುದ್ರಣಾಲಯಗಳಿಂದ ಅಥವಾ ಪ್ರಶ್ನೆ ಪತ್ರಿಕೆಯ ಸಾಗಣೆಯ ಸಂದರ್ಭದಲ್ಲಿ. ಟೆಲಿಗ್ರಾಂನಲ್ಲಿ ಅದನ್ನು ಹಂಚಿಕೊಳ್ಳುವುದು ಎರಡನೆಯ ಹಂತ. ಇಷ್ಟಕ್ಕೂ ದುಷ್ಕರ್ಮಿಗಳು ತಾಂತ್ರಿಕವಾಗಿ ಪರಿಣಿತರಾದರೆ ಖಾಸಗಿ ನೆಟ್‌ವರ್ಕ್ ಮೂಲಕ ಟೆಲಿಗ್ರಾಂನ್ನು ಪ್ರವೇಶಿಸಬಹುದಾಗಿದೆ. ಜಾಲತಾಣದಲ್ಲಿ ರಂಗೋಲಿಯಡಿಗೆ ತೂರುವವರೇ ಅಧಿಕ. ಆದುದರಿಂದ ಪ್ರಶ್ನೆ ಪತ್ರಿಕೆಗೆ ಸಂಬಂಧಿಸಿ ಆರಂಭದ ಹಂತದಲ್ಲೇ ಭದ್ರತೆಯನ್ನು ಏರ್ಪಡಿಸಬೇಕಾಗುತ್ತದೆ. ಇದೇ ಸಂದರ್ಭದಲ್ಲಿ ಟೆಲಿಗ್ರಾಂನಂತಹ ಆ್ಯಪ್‌ನ್ನು ಲಕ್ಷಾಂತರ ವಿದ್ಯಾರ್ಥಿಗಳು ಅಧ್ಯಯನಕ್ಕೆ ಪೂರಕವಾಗಿಯೂ ಬಳಸಿಕೊಳ್ಳುತ್ತಿದ್ದಾರೆ. ವಿದ್ಯಾರ್ಥಿಗಳ ಪರೀಕ್ಷಾ ತಯಾರಿಯಲ್ಲಿ ಈ ಮಾಧ್ಯಮದ ಕೊಡುಗೆ ದೊಡ್ಡದಿದೆ. ಇದರಿಂದ ಪ್ರಯೋಜನ ಪಡೆಯುತ್ತಿದ್ದ ವಿದ್ಯಾರ್ಥಿಗಳಿಗೆ ಈ ನಿಷೇಧದಿಂದ ಸಮಸ್ಯೆಯಾಗಲಿದೆ. ಎಲ್ಲಕ್ಕಿಂತ ಮುಖ್ಯವಾಗಿ ಎನ್‌ಟಿಎಯ ವೈಫಲ್ಯಕ್ಕಾಗಿ ಈ ದೇಶದ ಕೋಟ್ಯಂತರ ಗ್ರಾಹಕರು ಯಾಕೆ ನಿಷೇಧದ ಪರಿಣಾಮಗಳನ್ನು ಉಣ್ಣಬೇಕು ಎನ್ನುವ ಪ್ರಶ್ನೆಯೂ ಎದ್ದಿದೆ.

ಸೋರಿಕೆಯನ್ನು ತಡೆಯುವ ಉದ್ದೇಶ ಸರಕಾರಕ್ಕಿದ್ದರೆ ಮೊದಲು, ವೈಫಲ್ಯದ ಹಿಂದಿರುವ ಕೇಂದ್ರ ಶಿಕ್ಷಣ ಸಚಿವರಿಂದ ಮೊದಲು ರಾಜೀನಾಮೆಯನ್ನು ಪಡೆಯಬೇಕಾಗಿತ್ತು. ಹಾಗೆಯೇ ಈ ಸೋರಿಕೆಗೆ ಯಾರೋ ಒಂದಿಬ್ಬರು ವ್ಯಕ್ತಿಗಳನ್ನು ಹೊಣೆ ಮಾಡುವ ಬದಲು, ನೇರವಾಗಿ ಎನ್‌ಟಿಎಯನ್ನು ಹೊಣೆ ಮಾಡಿ ಅದರ ವಿರುದ್ಧ ಕ್ರಮ ತೆಗೆದುಕೊಳ್ಳಬೇಕಾಗಿತ್ತು. ಸೋರಿಕೆಯನ್ನು ಕೇಂದ್ರ ಸರಕಾರ ಎಷ್ಟು ಗಂಭೀರವಾಗಿ ತೆಗೆದುಕೊಂಡಿದೆ ಎನ್ನುವುದು ಆ ಮೂಲಕ ಇಡೀ ದೇಶಕ್ಕೆ ಮನವರಿಕೆಯಾಗುತ್ತಿತ್ತು. ರಾಜ್ಯಗಳಿಗೆ ಅಧಿಕ ಹೊಣೆಗಾರಿಕೆಯನ್ನು ನೀಡುವ ಮೂಲಕ ನೀಟ್ ಪ್ರವೇಶ ಪರೀಕ್ಷೆಯ ನಿರ್ವಹಣೆಯನ್ನು ವಿಕೇಂದ್ರೀಕರಿಸಬೇಕು ಎಂದು ಭಾರತೀಯ ಮೆಡಿಕಲ್ ಅಸೋಸಿಯೇಶನ್ ಈಗಾಗಲೇ ಸರಕಾರವನ್ನು ಆಗ್ರಹಿಸಿದೆ ಅಥವಾ ಎನ್‌ಟಿಎ ಬದಲಿಗೆ ನೂತನ ಸ್ವಾಯತ್ತ ಸಂಸ್ಥೆಯೊಂದನ್ನು ನೇಮಿಸಿ ಅದಕ್ಕೆ ಪರೀಕ್ಷೆಯ ಹೊಣೆಗಾರಿಕೆಯನ್ನು ನೀಡಬೇಕು. ಸೋರಿಕೆಯಾಗದಂತೆ ಪರೀಕ್ಷೆಯನ್ನು ನಡೆಸಲು ಸಾಧ್ಯವೇ ಇಲ್ಲ ಎಂದಾದರೆ ನೀಟ್‌ನ್ನು ರದ್ದುಗೊಳಿಸಿ, ಪ್ರವೇಶ ಪರೀಕ್ಷೆಯ ಹೊಣೆಯನ್ನು ಸಂಪೂರ್ಣವಾಗಿ ಆಯಾ ರಾಜ್ಯಗಳಿಗೆ ವಹಿಸಬೇಕು. ನೀಟ್ ಪರೀಕ್ಷೆಯನ್ನೇ ರದ್ದುಗೊಳಿಸುವುದಕ್ಕೆ ಹಲವು ರಾಜ್ಯಗಳು ಕೇಂದ್ರ ಸರಕಾರವನ್ನು ಒತ್ತಾಯಿಸುತ್ತಾ ಬಂದಿವೆ. ಕೆಲವು ರಾಜ್ಯಗಳು ನಿರ್ಣಯಗಳನ್ನೂ ತೆಗೆದುಕೊಂಡಿವೆ.

ಇದೇ ಸಂದರ್ಭದಲ್ಲಿ ನೀಟ್ ಪರೀಕ್ಷೆಯ ಅಕ್ರಮಗಳಿಂದ ನೊಂದು ಆತ್ಮಹತ್ಯೆಗೈಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗುತ್ತಿದೆ. ರಾಜಸ್ಥಾನದಲ್ಲಿ ನೀಟ್ ಮರು ಪರೀಕ್ಷೆಗೆ ಹಾಜರಾಗಬೇಕಾಗಿದ್ದ 22 ವರ್ಷದ ವಿದ್ಯಾರ್ಥಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ರಾಜಸ್ಥಾನದ ಸಿಕರ್‌ನಲ್ಲಿ ಒಂದು ತಿಂಗಳಲ್ಲಿ ನಡೆದ ಎರಡನೇ ಆತ್ಮಹತ್ಯೆ ಇದಾಗಿದೆ. ಡೆಹ್ರಾಡೂನ್‌ನಲ್ಲಿ ನೀಟ್ ಮರು ಪರೀಕ್ಷೆ ಎದುರಿಸಬೇಕಾಗಿದ್ದ 24 ವರ್ಷದ ವಿದ್ಯಾರ್ಥಿನಿಯೊಬ್ಬಳು ಐ ಲವ್ ಯೂ ಪಾಪಾ ಎಂದು ಪತ್ರ ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಈಕೆ ನಿವೃತ್ತ ಯೋಧನ ಪುತ್ರಿಯಾಗಿದ್ದಾಳೆ. ಡೆತ್ ನೋಟ್‌ನಲ್ಲಿ ಆತ್ಮಹತ್ಯೆಗೆ ನನ್ನ ಅಸಾಮರ್ಥ್ಯವೇ ಕಾರಣ ಎಂದು ಆಕೆ ಉಲ್ಲೇಖಿಸಿದ್ದಾಳೆ. ನಿಜಕ್ಕೂ ಕೇಂದ್ರ ಸರಕಾರದ ಅಸಾಮರ್ಥ್ಯಕ್ಕೆ ಆಕೆ ಬಲಿಯಾಗಿದ್ದಾಳೆ. ಈ ಎಲ್ಲ ಪ್ರಕರಣಗಳು ಆತ್ಮಹತ್ಯೆಗಳಲ್ಲ. ವ್ಯವಸ್ಥೆ ಮಾಡಿದ ಕಗ್ಗೊಲೆಗಳಾಗಿವೆ. ಈಗಾಗಲೇ ಪರೀಕ್ಷೆ ಬರೆದು ಉತ್ತಮ ಸಾಧನೆ ಮಾಡಿದ್ದೇವೆ ಎಂದು ಭಾವಿಸಿದವರೆಲ್ಲರೂ ಮತ್ತೊಮ್ಮೆ ಪರೀಕ್ಷೆಯನ್ನು ಎದುರಿಸುತ್ತಿದ್ದಾರೆ. ಇವರೆಲ್ಲರೂ ತೀವ್ರ ಆತಂಕದ ಜೊತೆಯಲ್ಲೇ ಪರೀಕ್ಷೆಯನ್ನು ಎದುರಿಸಬೇಕು. ಮೊತ್ತ ಮೊದಲನೆಯದಾಗಿ, ಪರೀಕ್ಷೆಗಾಗಿ ಅವರು ಮತ್ತೆ ಹೊಸದಾಗಿ ತಯಾರಿ ಮಾಡಬೇಕಾಗಿದೆ. ಪರೀಕ್ಷೆ ಬರೆದ ಬಳಿಕವೂ ಅವರ ಸಮಸ್ಯೆ ಮುಗಿಯುವುದಿಲ್ಲ. ಯಾಕೆಂದರೆ, ಮರು ಪರೀಕ್ಷೆಯೂ ಸೋರಿಕೆಯಾಗುವುದಿಲ್ಲ ಎನ್ನುವಂತಿಲ್ಲ. ಒಂದು ವೇಳೆ ಮರು ಪರೀಕ್ಷೆಯಲ್ಲೂ ಅಕ್ರಮ ನಡೆದರೆ ತಾವು ಬರೆದ ಪರೀಕ್ಷೆಯ ಗತಿಯೇನು? ಎನ್ನುವುದರ ಬಗ್ಗೆ ಅವರಿಗೆ ಸ್ಪಷ್ಟವಿಲ್ಲ. ಕೆಲವೊಮ್ಮೆ ಅಕ್ರಮಗಳು ನಡೆದೂ ಅದು ಬೆಳಕಿಗೆ ಬರದೇ ಇರಬಹುದು. ಅಂತಹ ಸಂದರ್ಭದಲ್ಲಿ ನಿಜವಾದ ಪ್ರತಿಭಾವಂತರಿಗೆ ಅನ್ಯಾಯವಾಗುತ್ತದೆ ಮಾತ್ರವಲ್ಲ, ಅನರ್ಹರು ವೈದ್ಯಕೀಯ ವಲಯಕ್ಕೆ ಕಾಲಿಡುವಂತಾಗುತ್ತದೆ. ಅರ್ಹ ಪ್ರತಿಭಾವಂತ ವಿದ್ಯಾರ್ಥಿಗಳ ಮೇಲೆ ಬೀರುವ ಈ ಎಲ್ಲಾ ದುಷ್ಪರಿಣಾಮಗಳನ್ನು ಟೆಲಿಗ್ರಾಂ ಆ್ಯಪ್ ನಿಷೇಧದಿಂದ ತಡೆಯುವುದಕ್ಕೆ ಸಾಧ್ಯವಿಲ್ಲ.

ಮೀಸಲಾತಿಯಿಂದ ಪ್ರತಿಭಾವಂತರಿಗೆ ಅನ್ಯಾಯವಾಗುತ್ತದೆ ಎಂದು ಹುಯಿಲೆಬ್ಬಿಸುವ ಜನರೆಲ್ಲ, ನೀಟ್ ಅಕ್ರಮದಿಂದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಆಗುತ್ತಿರುವ ಅನ್ಯಾಯದ ವಿರುದ್ಧ ಬೀದಿಗಿಳಿಯಬೇಕಾದ ಸಮಯ ಬಂದಿದೆ. ಈ ದೇಶದಲ್ಲಿ ಶ್ರೀಮಂತರಿಗೆ ವೈದ್ಯಕೀಯ ಕ್ಷೇತ್ರದಲ್ಲಿ ಮೀಸಲಾತಿಯಿದೆ. ಹಣದ ಮೂಲಕ ಅವರು ತಮ್ಮ ಸೀಟುಗಳನ್ನು ವೈದ್ಯಕೀಯ ಶಿಕ್ಷಣದಲ್ಲಿ ಪಡೆದುಕೊಳ್ಳುತ್ತಾರೆ. ಅದರಿಂದ ಅರ್ಹ ಪ್ರತಿಭಾವಂತರಿಗೆ ಅನ್ಯಾಯವಾಗುತ್ತದೆ ಎಂದು ಯಾರೂ ಕೂಗೆಬ್ಬಿಸುವುದಿಲ್ಲ. ತಮ್ಮ ಪಾಲನ್ನು ಶ್ರೀಮಂತರು ಹಣದ ಮೂಲಕ ಕಸಿದುಕೊಳ್ಳುತ್ತಿದ್ದಾರೆ ಎಂದು ಯಾರಿಗೂ ಕಳವಳವಾಗುತ್ತಿಲ್ಲ. ಇದೀಗ ನೀಟ್ ಅಕ್ರಮಗಳಿಂದಲೂ ನೇರವಾಗಿ ಪ್ರತಿಭಾವಂತರು ಅನ್ಯಾಯಕ್ಕೊಳಗಾಗುತ್ತಿದ್ದಾರೆ. ಇದು ನೇರವಾಗಿ ಪ್ರತಿಭಾವಂತರ ಸೀಟುಗಳಿಗೆ ಹಾಕುವ ಕನ್ನವಾಗಿದೆ. ಮುಂದಿನ ದಿನಗಳಲ್ಲಿ, ಸೋರಿಕೆ ಮಾಡುವವರಿಗಾಗಿಯೇ ಒಂದಿಷ್ಟು ಸೀಟುಗಳನ್ನು ಮೀಸಲಿಟ್ಟು ಪರೀಕ್ಷೆ ನಡೆಸುವುದು ಉತ್ತಮವೇನೋ. ಸೋರಿಕೆಯನ್ನೇ ಸಕ್ರಮ ಮಾಡಿದರೆ ವಿದ್ಯಾರ್ಥಿಗಳು ಪದೇ ಪದೇ ಅನ್ಯಾಯದ ಪರೀಕ್ಷೆಯ ಉರುಳಿಗೆ ಕೊರಳೊಡ್ಡುವ ಸ್ಥಿತಿಗೆ ತಡೆ ಬೀಳಬಹುದು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಸ್ಪರ್ಧಾತ್ಮಕ ಪರೀಕ್ಷಾರ್ಥಿಗಳಿಗೆ ಮೂಲಸೌಕರ್ಯ ಕೊರತೆ: ಯುವ ಶಕ್ತಿಗೆ ಬಿಹಾರ ಸರ್ಕಾರದ ಅನ್ಯಾಯ...



ಬಿಹಾರದ ಪರೀಕ್ಷಾ ಅಭ್ಯರ್ಥಿಗಳು ಕೇವಲ ಪರೀಕ್ಷೆ ಬರೆಯುತ್ತಿಲ್ಲ; ಬದಲಾಗಿ ಅವರು ತಮ್ಮ ಕನಸುಗಳಿಗಾಗಿ, ಕುಟುಂಬದ ಭವಿಷ್ಯಕ್ಕಾಗಿ ದೈನಂದಿನ ಹೋರಾಟ ನಡೆಸುತ್ತಿದ್ದಾರೆ. ಸಾರಿಗೆ, ವಸತಿ ಮತ್ತು ಸ್ಥಳೀಯ ಕೇಂದ್ರಗಳ ಕೊರತೆಯು ಅವರ ಸಂಕಷ್ಟವನ್ನು ದುಪ್ಪಟ್ಟು ಮಾಡುತ್ತಿದೆ. ಇದು ಕೇವಲ ಸಾರಿಗೆ ಸಮಸ್ಯೆಯಲ್ಲ, ಯುವ ಶಕ್ತಿಗೆ ಮಾಡಿರುವ ಅನ್ಯಾಯ. ಸರ್ಕಾರ, ಅಧಿಕಾರಿಗಳು ಮತ್ತು ಸಮಾಜವು ಒಟ್ಟಾಗಿ ಕೆಲಸ ಮಾಡಿ ಈ ವ್ಯವಸ್ಥೆಯನ್ನು ವಿದ್ಯಾರ್ಥಿ-ಕೇಂದ್ರಿತವಾಗಿ ಬದಲಾಯಿಸಬೇಕು.

ಬಿಹಾರವನ್ನು ಭಾರತದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ತೊಟ್ಟಿಲು ಅಥವಾ ಸ್ಪರ್ಧೆಯ ರಾಜ್ಯವೆಂದು ಕರೆಯಲಾಗುತ್ತದೆ. , , ಬ್ಯಾಂಕಿಂಗ್ ಮತ್ತು ರಾಜ್ಯ ಮಟ್ಟದ ಪರೀಕ್ಷೆಗಳಿಗೆ() ಬಿಹಾರದ ವಿದ್ಯಾರ್ಥಿಗಳು ವರ್ಷಾನುಗಟ್ಟಲೆ ಶ್ರಮಪಟ್ಟು ಪರೀಕ್ಷೆಗೆ ತಯಾರಿ ನಡೆಸುತ್ತಾರೆ. ಉದ್ಯೋಗ ಎಂದರೆ ಅದು ಸರ್ಕಾರಿ ಸೇವೆಯಾಗಿರಬೇಕು ಎಂಬುದು ಅಲ್ಲಿನ ಜನರ ನಂಬಿಕೆಯಂತೆ. ಹಾಗಾಗಿ ದೇಶಕ್ಕೆ ಅತಿಹೆಚ್ಚು ಮತ್ತು ಅಧಿಕಾರಿಗಳನ್ನು ನೀಡುವ ರಾಜ್ಯಗಳಲ್ಲಿ ಬಿಹಾರವೂ ಮುಂಚೂಣಿಯಲ್ಲಿದೆ. ಪ್ರತಿ ವರ್ಷ ನೂರಾರು ಬಿಹಾರಿಗಳು ದೇಶದ ಅತ್ಯುನ್ನತ ಪರೀಕ್ಷೆಗಳಲ್ಲಿ ಉನ್ನತ ಶ್ರೇಣಿ ಪಡೆಯುತ್ತಾರೆ.

ಅಂತೆಯೇ ಜೂನ್ ತಿಂಗಳ ಮೂರನೇ ವಾರದಲ್ಲಿ ಲಕ್ಷಾಂತರ ಮಂದಿ ಬಿಹಾರಿ ಯುವಜನರು ಪೊಲೀಸ್ ಕಾನ್‌ಸ್ಟೆಬಲ್, ಪ್ರೊಹಿಬಿಷನ್ ಡಿಪಾರ್ಟ್‌ಮೆಂಟ್ ನೇಮಕಾತಿ ಪರೀಕ್ಷೆಗಳನ್ನು ಬರೆಯುವುದರಲ್ಲಿ ಉತ್ಸು ಕರಾಗಿದ್ದರು. ಆದರೆ ಪರೀಕ್ಷೆ ಬರೆಯುವ ದಿನದಂದು ಅವರ ಮುಂದಿರುವ ಸವಾಲುಗಳು ಅಪಾರವಾಗಿದ್ದು, ಸಾರಿಗೆ ವ್ಯವಸ್ಥೆಯ ಕೊರತೆ, ವಸತಿ ಸೌಲಭ್ಯಗಳ ಕೊರತೆ ಮತ್ತು ಇತರ ರಾಜ್ಯಗಳಲ್ಲಿ ಅಥವಾ ದೂರದ ಜಿಲ್ಲೆಗಳಲ್ಲಿ ಪರೀಕ್ಷಾ ಕೇಂದ್ರಗಳನ್ನು ನಿಗದಿಪಡಿಸುವುದು ಅಭ್ಯರ್ಥಿಗಳನ್ನು ದೈಹಿಕ, ಮಾನಸಿಕ ಮತ್ತು ಆರ್ಥಿಕವಾಗಿ ಹೈರಾಣಾಗಿಸಿದೆ. ಜತೆಗೆ ಪರೀಕ್ಷೆಗೂ ಮುನ್ನ ಅಭ್ಯರ್ಥಿಗಳು ಮತ್ತು ಪೊಲೀಸರ ನಡುವೆ ಭಾರೀ ತಿಕ್ಕಾಟ ಉಂಟಾಗಿ, ಪರೀಕ್ಷೆಗೆ ಹೊರಟಿದ್ದ ಅಭ್ಯರ್ಥಿಗಳು ರೈಲು ಸಂಚಾರ ವ್ಯವಸ್ಥೆ ಉತ್ತಮವಾಗಿಲ್ಲವೆಂದು ಆರೋಪಿಸಿ, ಪಾಟಲೀಪುತ್ರ ರೈಲು ನಿಲ್ದಾಣದಲ್ಲಿ ಪ್ರತಿಭಟನೆ ನಡೆಸಿದ್ದ ಘಟನೆಗಳು ಸಮಸ್ಯೆಯ ತೀವ್ರತೆಯನ್ನು ಬಯಲು ಮಾಡಿದ್ದವು.

ಪರೀಕ್ಷಾ ದಿನಗಳಲ್ಲಿ ಬಿಹಾರದ ರೈಲ್ವೆ ಸ್ಟೇಷನ್‌ಗಳಲ್ಲಿ ಅಭ್ಯರ್ಥಿಗಳ ದಟ್ಟಣೆ ಅಪಾರವಾಗಿರುತ್ತದೆ. 2026ರ ಜೂನ್‌ನಲ್ಲಿ ಬಿಹಾರ ಪ್ರೊಹಿಬಿಷನ್ ಪೊಲೀಸ್ ನೇಮಕಾತಿ ಪರೀಕ್ಷೆಗೆ ಹೋಗುತ್ತಿದ್ದ ಸಾವಿರಾರು ಅಭ್ಯರ್ಥಿಗಳು ಪಾಟಲಿಪುತ್ರ ರೈಲ್ವೆ ಸ್ಟೇಷನ್‌ನಲ್ಲಿ ತುಂಬಿಕೊಂಡಿದ್ದರು. ವಿಶೇಷ ರೈಲುಗಳ ಕೊರತೆ, ತಡವಾಗಿ ಬರುವುದು ಮತ್ತು ಜನಸಂದಣಿಯಿಂದಾಗಿ ಅಭ್ಯರ್ಥಿಗಳು ರೈಲು ಹಳಿಗಳ ಮೇಲೆ ಕುಳಿತು ಇತರೆ ರೈಲುಗಳನ್ನು ತಡೆದು, ಕಲ್ಲು ಎಸೆದು ರೈಲು ಬೋಗಿಗಳನ್ನು ಹಾನಿಗೊಳಿಸಿದರು ಎಂಬ ಆರೋಪಗಳು ಕೇಳಿಬಂದವು. ಈ ಇನ್ನೆಲೆಯಲ್ಲಿ ಪೊಲೀಸರು ಲಾಠಿ ಚಾರ್ಜ್ ಮತ್ತು ಟಿಯರ್ ಗ್ಯಾಸ್ ಬಳಸಿ ಪರಿಸ್ಥಿತಿಯನ್ನು ನಿಯಂತ್ರಿಸಲು ಮುಂದಾಗಿದ್ದರು.

ಇದು ಮೊದಲ ಬಾರಿಯಲ್ಲ. ಪ್ರತಿ ಪರೀಕ್ಷೆಗೂ ಇದೇ ರೀತಿಯ ಸಮಸ್ಯೆ ಉಂಟಾಗುತ್ತದೆ. ಗ್ರಾಮೀಣ ಪ್ರದೇಶಗಳಿಂದ ಬರುವ ವಿದ್ಯಾರ್ಥಿಗಳು ಬಸ್ ಅಥವಾ ರೈಲುಗಳಲ್ಲಿ ದೀರ್ಘ ಪ್ರಯಾಣ ಮಾಡುತ್ತಾರೆ. ರೈಲುಗಳು ಭರ್ತಿಯಾಗುವುದರಿಂದ ಸೀಟುಗಳ ಅಡಿಯಲ್ಲಿ, ಓಡಾಡುವ ಸ್ಥಳದಲ್ಲಿ ಮಲಗುವುದು, ಬಾಗಿಲುಗಳಿಗೆ ತೂಗು ಹಾಕಿಕೊಳ್ಳುವುದು, ಆಹಾರ-ನೀರಿನ ಕೊರತೆಯಂತಹ ದೃಶ್ಯಗಳು ಕಂಡುಬಂದವು. ಪರೀಕ್ಷೆಗೆ ಮುಂಚಿತವಾಗಿಯೇ ಆಯಾಸವಾಗಿ, ವಿದ್ಯಾರ್ಥಿಗಳ ಏಕಾಗ್ರತೆ ಕುಸಿದಿರುತ್ತದೆ. ರೀ-ಎಕ್ಸಾಮ್‌ಗೆ ಉಚಿತ ಬಸ್ ಸೌಲಭ್ಯ ಘೋಷಿಸುವ ಸರ್ಕಾರ ಇತರ ಪರೀಕ್ಷೆಗಳಲ್ಲಿ ಇಂತಹ ವ್ಯವಸ್ಥೆಗಳನ್ನು ಒದಗಿಸುವುದರಲ್ಲಿ ವಿಫಲವಾಗಿದೆ.

ಪರೀಕ್ಷಾ ಕೇಂದ್ರಗಳಿಗೆ ಒಂದು ದಿನ ಮುಂಚಿತವಾಗಿ ತಲುಪುವ ಅಭ್ಯರ್ಥಿಗಳಿಗೆ ವಸತಿ ಸೌಲಭ್ಯ ಬಹುದೊಡ್ಡ ಸಮಸ್ಯೆಯಾಗಿ ಹೊರಹೊಮ್ಮಿತು. ಪಟ್ನಾ, ಮುಜಫ್ಫರ್‌ಪುರ, ಭಾಗಲ್‌ಪುರ ಮುಂತಾದ ನಗರಗಳಲ್ಲಿ ಹಾಸ್ಟೆಲ್‌ಗಳು ಮತ್ತು ಪೇಯಿಂಗ್ ಗೆಸ್ಟ್‌ಗಳು ತುಂಬಿ ಹೋಗುತ್ತವೆ. ರೂಮ್ ಬೆಲೆಗಳು ಗಗನಕ್ಕೇರುತ್ತವೆ, ಒಂದು ರಾತ್ರಿಗೆ ₹500-1500ದರೆಗೆ ಹೆಚ್ಚಾಗುತ್ತದೆ. ಇದರಿಂದಾಗಿ ಬಡ ಮತ್ತು ಗ್ರಾಮೀಣ ಕುಟುಂಬಗಳ ವಿದ್ಯಾರ್ಥಿಗಳು ರೈಲ್ವೆ ಸ್ಟೇಷನ್‌ಗಳಲ್ಲಿ, ಪಾರ್ಕ್‌ಗಳಲ್ಲಿ ಅಥವಾ ಸ್ನೇಹಿತರ ಮನೆಗಳಲ್ಲಿ ತಂಗುವುದು ಅನಿವಾರ್ಯವಾಗುತ್ತದೆ. ಪರೀಕ್ಷಾರ್ಥಿಗಳಿಗೆ ರಾತ್ರಿ ವೇಳೆ ನಿದ್ರೆಯ ಕೊರತೆಯಾಗುತ್ತದೆ, ಆಹಾರ ಸರಿಹೊಂದುವುದಿಲ್ಲ, ಹವಾಮಾನ ಬದಲಾವಣೆಯಿಂದ ಆರೋಗ್ಯದಲ್ಲಿ ಏರುಪೇರು ಉಂಟಾಗುತ್ತದೆ. ಇಂತಹ ಘಟನೆಗಳಿಂದ ಪರೀಕ್ಷೆಯಲ್ಲಿ ಉತ್ತಮ ಪ್ರದರ್ಶನ ಕುಸಿಯುತ್ತದೆ.

ಮಹಿಳಾ ಅಭ್ಯರ್ಥಿಗಳ ಸುರಕ್ಷತೆ ಇನ್ನೊಂದು ದೊಡ್ಡ ಚಿಂತೆಯಾಗಿರುತ್ತದೆ. ದೂರದ ಸ್ಥಳಗಳಲ್ಲಿ ಸುರಕ್ಷಿತ ವಸತಿ ದೊರಕುವುದು ಅಪರೂಪವಾಗಿರುತ್ತದೆ. ಹಾಗಾಗಿ ಹೆಣ್ಣುಮಕ್ಕಳನ್ನು ಸ್ಪರ್ಧಾ ಪರೀಕ್ಷೆಗಳಿಗೆ ಕಳುಹಿಸುವ ಪೋಷಕರು ಆತಂಕದಲ್ಲಿರುತ್ತಾರೆ.

ದೂರದ ಮತ್ತು ಇತರ ರಾಜ್ಯಗಳ ಪರೀಕ್ಷಾ ಕೇಂದ್ರಗಳ ಹಂಚಿಕೆ

ಮತ್ತು ಇತರ ಮಂಡಳಿಗಳು ಅಭ್ಯರ್ಥಿಗಳಿಗೆ ಸ್ಥಳೀಯ ಕೇಂದ್ರಗಳನ್ನು ನೀಡದೆ 300-700 ಕಿ.ಮೀ. ದೂರದ ಜಿಲ್ಲೆಗಳಿಗೆ, ಇತರ ರಾಜ್ಯಗಳಲ್ಲಿ ಕೇಂದ್ರಗಳನ್ನು ಹಂಚಿಕೆ ಮಾಡುತ್ತವೆ. ಇದರಿಂದಾಗಿ ಪ್ರಯಾಣ ವೆಚ್ಚ, ಸಮಯ ಮತ್ತು ಆಯಾಸ ಹೆಚ್ಚಾಗುತ್ತದೆ. ಉದಾಹರಣೆಗೆ, ಮುಜಫ್ಫರ್‌ಪುರದ ಅಭ್ಯರ್ಥಿಗಳು ಕಟಿಹಾರ್ ಅಥವಾ ಪಾಟ್ನಾ, ಇಲ್ಲವೇ ದೂರದ ಸ್ಥಳಗಳಿಗೆ ಹೋಗಬೇಕಾಗುತ್ತದೆ. ಇದು ಅಭ್ಯರ್ಥಿಗಳಿಗೆ ಆರ್ಥಿಕ ಹೊರೆಯನ್ನು ಹೆಚ್ಚಿಸುತ್ತದೆ. ಟಿಕೆಟ್, ಆಹಾರ, ವಸತಿ ಸೇರಿದಂತೆ ಒಟ್ಟು ₹5,000-15,000ಕ್ಕೂ ಅಧಿಕ ಖರ್ಚು ಉಂಟಾಗುತ್ತದೆ ಎಂಬುದು ಪರೀಕ್ಷಾ ಅಭ್ಯರ್ಥಿಗಳ ಅಳಲಾಗಿದೆ.

ಪರೀಕ್ಷೆಗೆ ಬಂದಿದ್ದ ಅಭ್ಯರ್ಥಿಗಳು ಮಾಧ್ಯಮಗಳ ಜೊತೆ ಮಾತನಾಡಿದ್ದು, ''ಅರಾರಿಯಾ ಮತ್ತು ಕಟಿಹಾರ್‌ಗೆ ಒಂದೇ ರೈಲು ವ್ಯವಸ್ಥೆ ಮಾಡಲಾಗಿತ್ತು. ಮೊದಲ ಶಿಫ್ಟ್‌ಗೆ ನಿಗದಿಯಾಗಿದ್ದ ಅಭ್ಯರ್ಥಿಗಳು ರೈಲು ಹತ್ತಲು ಬಂದಿದ್ದರು. ಆದರೆ, ಆಗಲೇ ರೈಲು ಕಿಕ್ಕಿರಿದು ತುಂಬಿತ್ತು. ಪರೀಕ್ಷಾರ್ಥಿಗಳು ರೈಲು ಹತ್ತಲು ಪ್ರಯತ್ನಿಸಿದಾಗ ಸ್ಥಳ ಇರಲಿಲ್ಲ. ಪರಿಣಾಮವಾಗಿ, ಅಭ್ಯರ್ಥಿಗಳು ಉದ್ರಿಕ್ತಗೊಂಡು, ರೈಲು ನಿಲ್ಲಿಸಿ ಪ್ರತಿಭಟಿಸಿದರು'' ಎಂದರು.

''10,000 ರಿಂದ 15,000 ಮಂದಿ ಅಭ್ಯರ್ಥಿಗಳು ನಿಲ್ದಾಣದಲ್ಲಿದ್ದರು. ರೈಲು ಆಗಲೇ ಭರ್ತಿಯಾಗಿತ್ತು. ದಾನಾಪುರ ಮತ್ತು ಪಾಟಲಿಪುತ್ರ ನಿಲ್ದಾಣಗಳಲ್ಲಿ ನಿಂತಿದ್ದ ವಿದ್ಯಾರ್ಥಿಗಳು ಹತ್ತಲು ಅವಕಾಶ ಇರಲಿಲ್ಲ. ಹೀಗಾಗಿ, ಪ್ರತಿಭಟನೆ ಆರಂಭಿಸಿದೆವು. ಗದ್ದಲದ ನಡುವೆ ಕಲ್ಲು ತೂರಾಟ ನಡೆಯಿತು. ಪೊಲೀಸರು ಗಾಳಿಯಲ್ಲಿ ಗುಂಡು ಹಾರಿಸಿದರು. ನಾವು ಪರೀಕ್ಷೆಗಳನ್ನು ತಪ್ಪಿಸಿಕೊಂಡೆವು'' ಎಂದು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದ ಪರೀಕ್ಷಾರ್ಥಿ ಕನ್ಹಯ್ಯಾ ಎಂಬುವವರು ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ್ದರು.

''ಪ್ರತಿ ಜಿಲ್ಲೆಯಲ್ಲಿ ಸಾಕಷ್ಟು ಕೇಂದ್ರಗಳನ್ನು ತೆರೆದು ಮೂಲಸೌಕರ್ಯ ಒದಗಿಸಬೇಕು. ವಿಶೇಷ ರೈಲು/ಬಸ್‌ಗಳು, ಉಚಿತ ಅಥವಾ ಸಬ್ಸಿಡಿ ಸೌಲಭ್ಯಗಳು ಹಾಗೂ ಪ್ರಯಾಣ ಯೋಜನೆ ವ್ಯವಸ್ಥೆಯನ್ನುಂಟುಮಾಡಬೇಕು. ಸರ್ಕಾರಿ ಶಾಲೆಗಳು, ಕಾಲೇಜುಗಳಲ್ಲಿ ತಾತ್ಕಾಲಿಕ ವಸತಿ ಸೌಲಭ್ಯ, ಕಡಿಮೆ ದರದಲ್ಲಿ ಹೋಟೆಲ್‌ಗಳು ದೊರೆಕಿಸಬೇಕು. ಆಧಾರಿತ, ಸ್ಥಳೀಯ ಆದ್ಯತೆ, ಆಯ್ಕೆಗಳು ಪಾರದರ್ಶಕವಾಗಿರಬೇಕು'' ಎಂದು ಆಗ್ರಹಿಸಿದರು.

ಕೇಂದ್ರ ಆಯ್ಕೆ ಮಂಡಳಿ ನಡೆಸುವ ಈ ಲಿಖಿತ ಪರೀಕ್ಷೆಯು ರಾಜ್ಯದ 38 ಜಿಲ್ಲೆಗಳಲ್ಲಿ ಆರಂಭವಾಗಿತ್ತು. ಒಟ್ಟು 4,210 ಹುದ್ದೆಗಳಿಗೆ ಒಂದು ಲಕ್ಷಕ್ಕೂ ಹೆಚ್ಚು ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರು. 1,685 ಪ್ರೊಬೇಷನಲ್ ಕಾನ್‌ಸ್ಟೆಬಲ್, 2,417 ಜೈಲ್ ವಾರ್ಡರ್, 108 ಮೊಬೈಲ್ ಸ್ಕ್ವಾಡ್ ಕಾನ್‌ಸ್ಟೆಬಲ್ ಹುದ್ದೆಗಳಿವೆ. ಲಿಖಿತ ಪರೀಕ್ಷೆಯು ಎರಡು ಗಂಟೆಗಳ ಅವಧಿಯದ್ದಾಗಿದ್ದು, ಎರಡು ಪಾಳಿಗಳಲ್ಲಿ ನಡೆಸಲಾಗುತ್ತಿತ್ತು. ಮೊದಲ ಪಾಳಿ ಬೆಳಿಗ್ಗೆ 10 ರಿಂದ ಮಧ್ಯಾಹ್ನ 12ರವರೆಗೆ ಇದ್ದರೆ, ಎರಡನೇ ಪಾಳಿ ಮಧ್ಯಾಹ್ನ 3 ರಿಂದ ಸಂಜೆ 5 ರವರೆಗೆ ಇತ್ತು. ಆದರೆ ಪರೀಕ್ಷಾರ್ಥಿಗಳಿಗೆ ಸಮರ್ಪಕವಾದ ಸಾರಿಗೆ ಸೌಲಭ್ಯಗಳಿಲ್ಲದೆ ಅವಾಂತರಗಳು ಸೃಷ್ಟಿಯಾದವು.

ನಗರದ ವಿದ್ಯಾರ್ಥಿಗಳಿಗೆ ಸ್ವಲ್ಪ ಸುಲಭ, ಗ್ರಾಮೀಣ ಮತ್ತು ಬಡ ವಿದ್ಯಾರ್ಥಿಗಳು ಹೆಚ್ಚು ನಷ್ಟ ಅನುಭವಿಸುತ್ತಾರೆ. ದೀರ್ಘ ಪ್ರಯಾಣ, ಆಯಾಸ, ಅಸ್ವಸ್ಥತೆಯಿಂದ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಕುಸಿಯುತ್ತದೆ. ಇದಕ್ಕೆ ಮೂಲಸೌಕರ್ಯದ ಕೊರತೆ, ಲಕ್ಷಾಂತರ ಮಂದಿ ಅಭ್ಯರ್ಥಿಗಳು, ಸಾರಿಗೆ ಯೋಜನೆಯ ವೈಫಲ್ಯ, ರಾಜಕೀಯ ನಿರ್ಲಕ್ಷ್ಯಗಳು ಮುಖ್ಯ ಕಾರಣಗಳಾಗಿವೆ. ಸರ್ಕಾರವು ಉಚಿತ ಬಸ್, ಕೆಲವು ವಿಶೇಷ ರೈಲುಗಳು ಘೋಷಿಸುತ್ತದೆಯಾದರೂ, ಯಾವುದೇ ವ್ಯವಸ್ಥೆಗಳನ್ನು ಮಾಡುವುದಿಲ್ಲ. ಪ್ರತಿಭಟನೆಗಳು ನಡೆದಾಗ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತದೆ. ಅಷ್ಟರಲ್ಲಿ ಪರಿಸ್ಥಿತಿಗಳು ಕೈಮೀರಿರುತ್ತವೆ.

ಕುಟುಂಬಗಳು ಸಾಲ ಮಾಡಿ, ಆಸ್ತಿ ಮಾರಿ ಮಕ್ಕಳನ್ನು ಸ್ಪರ್ಧಾ ಪರೀಕ್ಷೆಗಳಿಗೆ ತಯಾರಿ ಮಾಡಿರುತ್ತಾರೆ. ಇಂಥದರಲ್ಲಿ ಪರೀಕ್ಷೆ ರದ್ದು ಅಥವಾ ಪುನರ್ ಪರೀಕ್ಷೆ ಬರೆಯಬೇಕಾದ ದುಃಸ್ಥಿತಿ ಉಂಟಾದರೆ ಪೋಷಕರಿಗೆ ಹೆಚ್ಚುವರಿ ಖರ್ಚಿನ ಜೊರೆ ಬೀಳುತ್ತದೆ. ಅಲ್ಲದೆ, ವರ್ಷಗಳ ಸಿದ್ಧತೆ ನಡೆಸಿದ ವಿದ್ಯಾರ್ಥಿಗಳ ಶ್ರಮ ವ್ಯರ್ಥವಾಗುವ ಭಯ, ಅನಿಶ್ಚಿತತೆ, ಕುಟುಂಬದ ಒತ್ತಡಗಳಿಂದ ಆತ್ಮಹತ್ಯೆಗೆ ಶರಣಾಗುವಂತಹ ಪ್ರಕರಣಗಳು ಹೆಚ್ಚಾಗಿವೆ.

ಬಿಹಾರದ ಪರೀಕ್ಷಾ ಅಭ್ಯರ್ಥಿಗಳು ಕೇವಲ ಪರೀಕ್ಷೆ ಬರೆಯುತ್ತಿಲ್ಲ; ಬದಲಾಗಿ ಅವರು ತಮ್ಮ ಕನಸುಗಳಿಗಾಗಿ, ಕುಟುಂಬದ ಭವಿಷ್ಯಕ್ಕಾಗಿ ದೈನಂದಿನ ಹೋರಾಟ ನಡೆಸುತ್ತಿದ್ದಾರೆ. ಸಾರಿಗೆ, ವಸತಿ ಮತ್ತು ಸ್ಥಳೀಯ ಕೇಂದ್ರಗಳ ಕೊರತೆಯು ಅವರ ಸಂಕಷ್ಟವನ್ನು ದುಪ್ಪಟ್ಟು ಮಾಡುತ್ತಿದೆ. ಇದು ಕೇವಲ ಸಾರಿಗೆ ಸಮಸ್ಯೆಯಲ್ಲ, ಯುವ ಶಕ್ತಿಗೆ ಮಾಡಿರುವ ಅನ್ಯಾಯ. ಸರ್ಕಾರ, ಅಧಿಕಾರಿಗಳು ಮತ್ತು ಸಮಾಜವು ಒಟ್ಟಾಗಿ ಕೆಲಸ ಮಾಡಿ ಈ ವ್ಯವಸ್ಥೆಯನ್ನು ವಿದ್ಯಾರ್ಥಿ-ಕೇಂದ್ರಿತವಾಗಿ ಬದಲಾಯಿಸಬೇಕು.

ಬೆಳಗಾವಿ ಕೆರೆಗೆ ಕೋಟಿ ವೆಚ್ಚ: ಅಲೆಮಾರಿಗಳಿಗೆ ಮೂಲ ಸೌಲಭ್ಯ ಯಾವಾಗ ಶಾಸಕರೆ ?

ಬೆಳಗಾವಿ ಜಿಲ್ಲೆಯ ಅಥಣಿ ಪಟ್ಟಣದಲ್ಲಿರುವ ಜೋಡು ಕೆರೆಯನ್ನು ಸುಮಾರು 15 ಕೋಟಿ ರೂಪಾಯಿ ವೆಚ್ಚದಲ್ಲಿ ಅಭಿವೃದ್ಧಿಪಡಿಸುವ ಯೋಜನೆಯ ಹಿನ್ನೆಲೆಯಲ್ಲಿ, ಕೆರೆಯ ಮಧ್ಯದಲ್ಲಿ ಗುಡಿಸಲು ಕಟ್ಟಿಕೊಂಡು ಜೀವನ ನಡೆಸುತ್ತಿದ್ದ 50ಕ್ಕೂ ಹೆಚ್ಚು ಕುಟುಂಬಗಳನ್ನು ಪಟ್ಟಣದಿಂದ ಸುಮಾರು 4 ಕಿಲೋಮೀಟರ್ ದೂರದ ಪ್ರದೇಶಕ್ಕೆ ಸ್ಥಳಾಂತರ ಮಾಡಲಾಗಿದೆ. ಆದರೆ ಸ್ಥಳಾಂತರಗೊಂಡ ಅಲೆಮಾರಿ ಕುಟುಂಬಗಳು ಮೂಲಭೂತ ಸೌಲಭ್ಯಗಳಿಲ್ಲದೆ ಸಂಕಷ್ಟದ ಬದುಕು ಸಾಗಿಸುತ್ತಿವೆ.

ವರ್ಷಗಳ ಹಿಂದೆ ಜೋಡು ಕೆರೆಗಳ ಮಧ್ಯಭಾಗದಲ್ಲಿ ವಾಸಿಸುತ್ತಿದ್ದ ಅಲೆಮಾರಿ ಸಮುದಾಯದ ಸಮಸ್ಯೆಗಳ ಕುರಿತು ಈದಿನ.ಕಾಮ್ ವರದಿ ಪ್ರಕಟಿಸಿತ್ತು. ಆ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು. ಆದರೆ ಇದೀಗ ಕೆರೆ ಅಭಿವೃದ್ಧಿ ಕಾಮಗಾರಿಗಾಗಿ ಅಲ್ಲಿದ್ದ ಕುಟುಂಬಗಳನ್ನು ಬೇರೆಡೆಗೆ ಸ್ಥಳಾಂತರಿಸಲಾಗಿದೆ. ಆದರೆ ಅಲೆಮಾರಿಗಳ ಬದುಕು ಮಾತ್ರ ಬದಲಾಗಿಲ್ಲ.

ಸ್ಥಳಾಂತರಿತ ಪ್ರದೇಶವು ಕಲ್ಲು ಗಣಿಗಾರಿಕೆ ಪ್ರದೇಶ ಹಾಗೂ ಸ್ಮಶಾನದ ಸಮೀಪದಲ್ಲಿದ್ದು, ಅಲ್ಲಿ ಕುಡಿಯುವ ನೀರು, ಶೌಚಾಲಯ, ರಸ್ತೆ, ಬೀದಿ ದೀಪ ಸೇರಿದಂತೆ ಯಾವುದೇ ಸಮರ್ಪಕ ಮೂಲಭೂತ ಸೌಕರ್ಯಗಳಿಲ್ಲ ಎಂದು ನಿವಾಸಿಗಳು ಆರೋಪಿಸಿದ್ದಾರೆ. ಶೌಚಾಲಯದ ಕೊರತೆಯಿಂದ ಮಹಿಳೆಯರು, ಪುರುಷರು ಹಾಗೂ ಮಕ್ಕಳು ಬಯಲನ್ನೇ ಅವಲಂಬಿಸಬೇಕಾದ ಸ್ಥಿತಿ ನಿರ್ಮಾಣವಾಗಿದೆ.

ಅಲ್ಲದೆ, ಅಲೆಮಾರಿ ಸಮುದಾಯದ ಮಕ್ಕಳಿಗೆ ಶಿಕ್ಷಣ ಮತ್ತು ಪೌಷ್ಟಿಕಾಂಶ ಸೇವೆಗಳು ಸಹ ದೂರವಾಗಿವೆ. ಸ್ಥಳಾಂತರಿತ ಪ್ರದೇಶದಲ್ಲಿ ಅಂಗನವಾಡಿ ಕೇಂದ್ರವಿಲ್ಲದ ಕಾರಣ ಮಕ್ಕಳು ಎರಡು-ಮೂರು ಕಿಲೋಮೀಟರ್ ದೂರ ಸಂಚರಿಸಬೇಕಾಗಿದ್ದು, ಇದರಿಂದ ಅನೇಕ ಮಕ್ಕಳು ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ.

ಜೀವನೋಪಾಯಕ್ಕಾಗಿ ಪಟ್ಟಣವನ್ನೇ ಅವಲಂಬಿಸಿದ್ದ ಕುಟುಂಬಗಳಿಗೆ ಸ್ಥಳಾಂತರದಿಂದ ಉದ್ಯೋಗದ ಮೇಲೂ ಪರಿಣಾಮ ಬಿದ್ದಿದೆ. ಪಟ್ಟಣದಿಂದ ದೂರ ವಾಸಿಸುವುದರಿಂದ ದೈನಂದಿನ ಕೆಲಸಗಳಿಗೆ ತೆರಳುವುದು ಕಷ್ಟಕರವಾಗಿದೆ ಎಂದು ಸ್ಥಳೀಯರು ದೂರಿದ್ದಾರೆ.



ಗಮನಾರ್ಹ ಸಂಗತಿಯೆಂದರೆ, ಸರ್ಕಾರವು ಈ ಕುಟುಂಬಗಳಿಗೆ ಕೇವಲ ನಿವೇಶನವನ್ನು ಮಾತ್ರ ಒದಗಿಸಿದ್ದು, ಮನೆಗಳನ್ನು ನಿರ್ಮಿಸಿ ಕೊಟ್ಟಿಲ್ಲ. ಪರಿಣಾಮವಾಗಿ ಹಲವರು ತಾತ್ಕಾಲಿಕ ಗುಡಿಸಲುಗಳಲ್ಲಿ ವಾಸಿಸುತ್ತಿದ್ದಾರೆ. ಸ್ಥಳಾಂತರಗೊಂಡ ಕುಟುಂಬಗಳಿಗೆ ಶಾಶ್ವತ ಮನೆಗಳ ನಿರ್ಮಾಣದ ಜೊತೆಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕೂಡಲೇ ಕಲ್ಪಿಸಬೇಕೆಂದು ನಿವಾಸಿಗಳು ಆಗ್ರಹಿಸಿದ್ದಾರೆ.

ಅಲೆಮಾರಿ ಸಮುದಾಯದ ದುರ್ಗಮ್ಮ, ''ಇಲ್ಲಿ ಸಮರ್ಪಕ ಬೆಳಕಿನ ವ್ಯವಸ್ಥೆಯಿಲ್ಲ. ಕೆಲವೆಡೆ ಮಾತ್ರ ಬೀದಿ ದೀಪಗಳನ್ನು ಅಳವಡಿಸಲಾಗಿದೆ. ನಮ್ಮ ಮಕ್ಕಳಿಗೆ ಅಂಗನವಾಡಿ ಸೌಲಭ್ಯವೂ ಇಲ್ಲ. ಸರ್ಕಾರ ಇಲ್ಲಿ ಅಂಗನವಾಡಿ ನಿರ್ಮಿಸಿದರೆ ಮಕ್ಕಳ ಶಿಕ್ಷಣ ಹಾಗೂ ಪೌಷ್ಟಿಕಾಂಶದ ಸಮಸ್ಯೆ ನಿವಾರಣೆಯಾಗಲಿದೆ'' ಎಂದು ಹೇಳಿದರು.

ಕಾಂಗ್ರೆಸ್ ಪಕ್ಷದ ಅಥಣಿ ತಾಲೂಕು ಸಮಿತಿ ಅಧ್ಯಕ್ಷ ಸಿದ್ಧಾರ್ಥ ಸಿಂಗೆ ಮಾತನಾಡಿ, ''ಅಲೆಮಾರಿಗಳ ಅಭಿವೃದ್ಧಿಯ ಬಗ್ಗೆ ಸರ್ಕಾರ ಮಾತನಾಡುತ್ತಿದೆಯಾದರೂ, ಅವರನ್ನು ಸ್ಥಳಾಂತರಿಸಿರುವ ಪ್ರದೇಶದಲ್ಲಿ ಕನಿಷ್ಠ ಮೂಲಭೂತ ಸೌಲಭ್ಯಗಳೇ ಇಲ್ಲ. ಮಹಿಳೆಯರು ಇನ್ನೂ ಬಯಲು ಶೌಚವನ್ನೇ ಅವಲಂಬಿಸಬೇಕಾದ ಪರಿಸ್ಥಿತಿ ಇದೆ. ಮಕ್ಕಳಿಗೆ ಶಿಕ್ಷಣ ಸೌಲಭ್ಯವೂ ಸಮರ್ಪಕವಾಗಿ ದೊರೆಯುತ್ತಿಲ್ಲ. ತಕ್ಷಣ ಅಂಗನವಾಡಿ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕು. ಸ್ಥಳೀಯ ಶಾಸಕ ಲಕ್ಷ್ಮಣ ಸವದಿಯವರು ಹಾಗೂ ಅಧಿಕಾರಿಗಳು ಈ ಕುರಿತು ಕ್ರಮ ಕೈಗೊಳ್ಳಬೇಕು'' ಎಂದು ಮನವಿ ಮಾಡಿದ್ದಾರೆ.

ಅಥಣಿಯ ಸೌಂದರ್ಯ ಹೆಚ್ಚಿಸಲು ಜೋಡು ಕೆರೆ ಅಭಿವೃದ್ಧಿಪಡಿಸುವುದು ಸ್ವಾಗತಾರ್ಹ. ಆದರೆ ಅಭಿವೃದ್ಧಿಯ ಹೆಸರಿನಲ್ಲಿ ಸ್ಥಳಾಂತರಗೊಂಡ ಅಲೆಮಾರಿ ಕುಟುಂಬಗಳ ಮೂಲಭೂತ ಹಕ್ಕುಗಳು ನಿರ್ಲಕ್ಷ್ಯಕ್ಕೆ ಒಳಗಾಗಬಾರದು. ಅವರಿಗೆ ವಸತಿ, ಕುಡಿಯುವ ನೀರು, ರಸ್ತೆ, ಶೌಚಾಲಯ, ಅಂಗನವಾಡಿ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಒದಗಿಸುವ ಮೂಲಕ ಅಭಿವೃದ್ಧಿ ಮತ್ತು ಮಾನವೀಯತೆ ಎರಡಕ್ಕೂ ಸಮಾನ ಆದ್ಯತೆ ನೀಡಬೇಕಾಗಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR